VOLUME: 16 | 17 JULY 2026 | ಶುಕ್ರವಾರ | RS: 2 | PAGE: 06 ISSUE: 155 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ನಟಿ ದೀಪಿಕಾ ಪಡುಕೋಣೆ ಅವರ ಹೆಸರಿನಲ್ಲಿ ನಕಲಿ ಇನ್‌ಸ್ಟಾಗ್ರಾಮ್ ಸ್ಟೋರಿಯೊಂದು ವೈರಲ್ ಆಗಿದೆ. ಸಾಮಾಜಿಕ ಹೋರಾಟಗಾರ ಸೋನಂ ವಾಂಗ್‌ಚುಕ್ ಅವರಿಗೆ ದೀಪಿಕಾ ಬೆಂಬಲ ನೀಡಿದ್ದಾರೆ ಎಂದು ಇದರಲ್ಲಿ ಬಿಂಬಿಸಲಾಗಿದೆ. ಪೋಸ್ಟ್ ಮಾಡಿದ ಕೆಲವೇ ನಿಮಿಷಗಳಲ್ಲಿ ಅದನ್ನು ಡಿಲೀಟ್ ಮಾಡಿದ್ದಾರೆ ಎಂದೂ ಸುಳ್ಳು ಸುದ್ದಿ ಹಬ್ಬಿಸಲಾಗಿದೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ

prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## 175 ಎಕರೆ ಜಾಗದ ಹಿಂದೆ ಪ್ರಭಾವಿಗಳ ಕೈವಾಡ

ಬೆಂಗಳೂರು: ಬೆಂಗಳೂರಿನ ಪ್ರತಿಷ್ಠಿತ ಹೆಚ್‌ಎಂಟಿ ಸಂಸ್ಥೆಗೆ ಸೇರಿದ ಭೂಮಿ ಪರಭಾರೆ ಹಾಗೂ ಅಕ್ರಮ ಕಟ್ಟಡ ನಿರ್ಮಾಣದ ವಿಚಾರ ಇದೀಗ ಮತ್ತೆ ಚರ್ಚೆಗೆ ಗ್ರಾಸವಾಗಿದೆ. ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಹೆಚ್‌ಎಂಟಿ ಕ್ಯಾಂಪಸ್‌ಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, 1999ರಿಂದ 2004ರ ಅವಧಿಯಲ್ಲಿ ನಡೆದ ಭೂ ಪರಭಾರೆ ಪ್ರಕರಣದ ಬಗ್ಗೆ ಗಂಭೀರ ಆರೋಪಗಳನ್ನು ಮಾಡಿದ್ದಾರೆ.

ಹೆಚ್‌ಎಂಟಿಗೆ ಸೇರಿದ ಸುಮಾರು 175 ಎಕರೆ ಭೂಮಿ ಪರಭಾರೆ ಆಗಿದ್ದು, ಅದರಲ್ಲಿನ ಕೆಲವು ಭಾಗಗಳನ್ನು ಖಾಸಗಿ ಸಂಸ್ಥೆಗಳು ಪಡೆದುಕೊಂಡು ಬೃಹತ್ ಕಟ್ಟಡಗಳನ್ನು ನಿರ್ಮಿಸಿವೆ ಎಂದು ಆರೋಪಿಸಿದ ಕುಮಾರಸ್ವಾಮಿ, ಈ ಸಂಬಂಧ ಸಂಪೂರ್ಣ ದಾಖಲೆಗಳನ್ನು ಸಂಗ್ರಹಿಸಿ ತನಿಖೆ ನಡೆಸಲಾಗುವುದು ಎಂದು ತಿಳಿಸಿದ್ದಾರೆ.

ಹೆಚ್‌ಎಂಟಿ ಕ್ಯಾಂಪಸ್‌ನಲ್ಲಿರುವ ಹಲವು ಗಗನಚುಂಬಿ ಕಟ್ಟಡಗಳ ಪ್ರದೇಶಗಳಿಗೆ ಭೇಟಿ ನೀಡಿದ ಸಚಿವರು, ಅಧಿಕಾರಿಗಳಿಂದ ಮಾಹಿತಿ ಪಡೆದರು. ಅಕ್ವಿಲಾ ಹೈಟ್ಸ್, ಗೋವಿಯನ್ಸ್ ಎರಿಟಿಸ್, ಪ್ರೆಸ್ಟೀಜ್ ಕೆನ್ಸಿಂಗ್ಟನ್ ಗಾರ್ಡನ್, ಕೆಕೆಆರ್ ಎಎಂಆರ್ ರುಬೆ ಅಪಾರ್ಟ್‌ಮೆಂಟ್ ಸೇರಿದಂತೆ ವಿವಿಧ ಕಟ್ಟಡಗಳಿರುವ ಪ್ರದೇಶಗಳನ್ನು ಪರಿಶೀಲಿಸಿದರು.

"ಕೈಗಾರಿಕಾ ಉದ್ದೇಶಕ್ಕಾಗಿ ಮೀಸಲಾಗಿದ್ದ ಹೆಚ್‌ಎಂಟಿ ಭೂಮಿ ಖಾಸಗಿ ವ್ಯಕ್ತಿಗಳ ಪಾಲಾಗಿರುವ ಬಗ್ಗೆ ಸಮಗ್ರ ಮಾಹಿತಿ ಪಡೆಯಲಾಗುತ್ತಿದೆ. ಅಧಿಕಾರಿಗಳಿಂದ ವರದಿ ಬಂದ ಬಳಿಕ ಸೂಕ್ತ ತನಿಖೆ ನಡೆಸಲಾಗುವುದು" ಎಂದು ಕುಮಾರಸ್ವಾಮಿ ಹೇಳಿದರು.

ಹೆಚ್‌ಎಂಟಿ ಭೂಮಿ ಪರಭಾರೆ ಪ್ರಕರಣದಲ್ಲಿ ಅಂದಿನ ರಾಜ್ಯ ಸರ್ಕಾರದ ಕೆಲವು ಪ್ರಭಾವಿಗಳ ಪಾತ್ರವಿದೆ ಎಂದು ಆರೋಪಿಸಿದ ಅವರು, ಈ ಬಗ್ಗೆ ದಾಖಲೆಗಳ ಆಧಾರದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

ಅರಣ್ಯ ಭೂಮಿ ವಿಚಾರವಾಗಿ ಹೇಳಿಕೆ ನೀಡುತ್ತಿರುವ ರಾಜ್ಯ ಸರ್ಕಾರದ ಸಚಿವರಿಗೆ ಪ್ರಶ್ನೆ ಮಾಡಿದ ಕುಮಾರಸ್ವಾಮಿ, ಹೆಚ್‌ಎಂಟಿ



ಜಾಗದಲ್ಲಿ ಅಕ್ರಮವಾಗಿ ನಿರ್ಮಾಣಗೊಂಡಿರುವ ಕಟ್ಟಡಗಳ ಭೂಮಿಯನ್ನು ವಾಪಸ್ ಪಡೆಯುವ ಧೈರ್ಯ ತೋರಿಸುತ್ತಾರೆಯೇ ಎಂದು ಸವಾಲು ಹಾಕಿದರು.

"ಸರ್ಕಾರಿ ಸಂಸ್ಥೆಗಳ ಅಭಿವೃದ್ಧಿಗೆ

> ಅರಣ್ಯ ಭೂಮಿ ವಿಚಾರವಾಗಿ ಹೇಳಿಕೆ ನೀಡುತ್ತಿರುವ ರಾಜ್ಯ ಸರ್ಕಾರದ ಸಚಿವರಿಗೆ ಪ್ರಶ್ನೆ ಮಾಡಿದ ಕುಮಾರಸ್ವಾಮಿ, ಹೆಚ್‌ಎಂಟಿ ಜಾಗದಲ್ಲಿ ಅಕ್ರಮವಾಗಿ ನಿರ್ಮಾಣಗೊಂಡಿರುವ ಕಟ್ಟಡಗಳ ಭೂಮಿಯನ್ನು ವಾಪಸ್ ಪಡೆಯುವ ಧೈರ್ಯ ತೋರಿಸುತ್ತಾರೆಯೇ ಎಂದು ಸವಾಲು ಹಾಕಿದರು.

ಬಳಸಬೇಕಾದ ಅಮೂಲ್ಯ ಭೂಮಿ ಖಾಸಗಿ ಹಿತಾಸಕ್ತಿಗಳ ಪಾಲಾಗಬಾರದು. ಇಸ್ರೋ ಸೇರಿದಂತೆ ಸಾರ್ವಜನಿಕ ಸಂಸ್ಥೆಗಳಿಗೆ ನೀಡಿದ್ದರೆ ಅದನ್ನು ಸ್ವಾಗತಿಸಬಹುದು. ಆದರೆ ಖಾಸಗಿ ಲಾಭಕ್ಕಾಗಿ ಬಳಕೆಯಾಗಿರುವುದು ಸರಿಯಲ್ಲ" ಎಂದು ಹೇಳಿದರು.

2006ರಲ್ಲಿ ತಾವು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಹೆಚ್‌ಎಂಟಿ ಭೂಮಿ ಮಾರಾಟ ಹಾಗೂ ನೋಂದಣಿಗೆ ನಿರ್ಬಂಧ ವಿಧಿಸಿದ್ದಾಗಿ ಕುಮಾರಸ್ವಾಮಿ ತಿಳಿಸಿದರು.

"ನಾನು ಅಧಿಕಾರಕ್ಕೆ ಬಂದ ನಂತರ ಯಾವುದೇ ಕಾರಣಕ್ಕೂ ಹೆಚ್‌ಎಂಟಿ ಭೂಮಿಯನ್ನು ಮಾರಾಟ ಮಾಡಬಾರದು ಎಂದು ಆದೇಶಿಸಿದ್ದೆ. ಅದರ ಪರಿಣಾಮವಾಗಿ ಇನ್ನೂ ಹೆಚ್ಚಿನ ಭೂಮಿ ಉಳಿದಿದೆ. ಅಕ್ರಮವಾಗಿ ಪರಭಾರೆ ಮಾಡಿರುವ ಜಾಗದಲ್ಲಿ ನಿರ್ಮಿಸಿರುವ ಕೆಲವು ಕಟ್ಟಡಗಳಿಗೆ ಇಂದಿಗೂ ಖಾತೆ ಸಮಸ್ಯೆ ಇದೆ" ಎಂದು ಹೇಳಿದರು.

ಫ್ಲ್ಯಾಟ್ ಖರೀದಿಸಿದ ಸಾಮಾನ್ಯ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಟ್ಟಡ ನಿರ್ಮಿಸಿ ಮಾರಾಟ ಮಾಡಿದವರು ಸಮಸ್ಯೆಯನ್ನು ಬಿಟ್ಟು ಹೋಗಿದ್ದಾರೆ ಎಂದು ಕುಮಾರಸ್ವಾಮಿ ಹೇಳಿದರು.

ಹೆಚ್‌ಎಂಟಿ ಕಾರ್ಖಾನೆಗೆ ಪುನಶ್ಚೇತನ ನೀಡುವ ಪ್ರಯತ್ನ ನಡೆಯುತ್ತಿರುವ ಸಂದರ್ಭದಲ್ಲಿ ಭೂ ವಿವಾದವನ್ನು ಮುಂದಿಟ್ಟುಕೊಂಡು ಅಡ್ಡಿಪಡಿಸಲಾಗುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿದರು.

"ಹೆಚ್‌ಎಂಟಿಯನ್ನು ಉಳಿಸುವುದು ನಮ್ಮ ಉದ್ದೇಶ. ಆದರೆ ಕೆಲವರು ಸಂಸ್ಥೆ ಪುನಶ್ಚೇತನಗೊಳ್ಳಬಾರದು ಎಂಬ ರೀತಿಯಲ್ಲಿ ವರ್ತಿಸುತ್ತಿದ್ದಾರೆ" ಎಂದು ಹೇಳಿದರು.

ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ಈಗಿರುವ ಕೈಗಾರಿಕೆಗಳನ್ನು ಉಳಿಸಲು ಸಹಕಾರ ನೀಡದಿದ್ದರೆ ಹೊಸ ಕೈಗಾರಿಕೆಗಳ ಸ್ಥಾಪನೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದರು.

ಹೆಚ್‌ಎಂಟಿ ಭೂಮಿ ವಿಚಾರಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಮತ್ತು ಹೆಚ್‌ಎಂಟಿ ನಡುವೆ ಕಾನೂನು ಹೋರಾಟ ನಡೆಯುತ್ತಿದ್ದು, ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿದೆ. ಈ ಹಿನ್ನೆಲೆಯಲ್ಲಿ ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಕಾನೂನು ಪ್ರಕ್ರಿಯೆಯನ್ನು ಗಮನದಲ್ಲಿಟ್ಟುಕೊಳ್ಳಬೇಕಾಗಿದೆ.

ಹೆಚ್‌ಎಂಟಿ ಭೂಮಿ ವಿವಾದ ಇದೀಗ ಮತ್ತೆ ರಾಜಕೀಯ ಚರ್ಚೆಯ ಕೇಂದ್ರವಾಗಿದ್ದು, ಆರೋಪ–ಪ್ರತ್ಯಾರೋಪಗಳ ನಡುವೆ ಪ್ರಕರಣದ ಮುಂದಿನ ಬೆಳವಣಿಗೆ ಕುತೂಹಲ ಮೂಡಿಸಿದೆ.

## ನೀರು–ವಿದ್ಯುತ್ ಮಿತವ್ಯಯಕ್ಕೆ ಸೂಚನೆ

ಬೆಂಗಳೂರು: ರಾಜ್ಯದಲ್ಲಿ ಮಳೆಯ ಕೊರತೆ ಹಾಗೂ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ನೀರು ಮತ್ತು ವಿದ್ಯುತ್ ಉಳಿತಾಯಕ್ಕೆ ರಾಜ್ಯ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ವಿಧಾನಸೌಧ, ವಿಕಾಸಸೌಧ ಸೇರಿದಂತೆ ಸಚಿವಾಲಯದ ಎಲ್ಲಾ ಕಚೇರಿಗಳಲ್ಲಿ ನೈಸರ್ಗಿಕ ಸಂಪನ್ಮೂಲಗಳ ಮಿತ ಬಳಕೆಗೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೆ ತರಲಾಗಿದೆ.

ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಈ ಕುರಿತು ಆದೇಶ ಹೊರಡಿಸಿದ್ದು, ಕಚೇರಿ ಸಮಯ ಮುಗಿದ ನಂತರವೂ ವಿದ್ಯುತ್ ದೀಪ, ಫ್ಯಾನ್, ಕಂಪ್ಯೂಟರ್ ಹಾಗೂ ಹವಾನಿಯಂತ್ರಣ ಸಾಧನಗಳನ್ನು ಆಫ್ ಮಾಡದೆ ಇರುವುದನ್ನು ತಡೆಯಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಆದೇಶದ ಪ್ರಕಾರ, ಸಚಿವಾಲಯದ ಕಚೇರಿಗಳಲ್ಲಿ ಸಾಧ್ಯವಾದಷ್ಟು ನೈಸರ್ಗಿಕ ಬೆಳಕನ್ನು ಬಳಸಬೇಕು. ಕಚೇರಿ ಕೊಠಡಿಗಳಲ್ಲಿ ಅಗತ್ಯವಿದ್ದಾಗ ಮಾತ್ರ ವಿದ್ಯುತ್ ದೀಪ ಮತ್ತು ಫ್ಯಾನ್‌ಗಳನ್ನು ಬಳಸುವಂತೆ ಸೂಚಿಸಲಾಗಿದೆ.

ಸಂಜೆ 6 ಗಂಟೆಯ ನಂತರ ಪ್ರತಿ ಮಹಡಿಯ ಕಾವಲುಗಾರರು ಹಾಗೂ ಭದ್ರತಾ ಸಿಬ್ಬಂದಿ ಅನಗತ್ಯವಾಗಿ ಬೆಳಗುತ್ತಿರುವ ವಿದ್ಯುತ್ ದೀಪಗಳನ್ನು ಪರಿಶೀಲಿಸಿ ನಂದಿಸಿರುವುದನ್ನು ಖಚಿತಪಡಿಸಿಕೊಳ್ಳಬೇಕು. ಬೆಳಗ್ಗೆ 6 ಗಂಟೆಯವರೆಗೂ ಈ ಮೇಲ್ವಿಚಾರಣೆ ಮುಂದುವರಿಸುವಂತೆ ನಿರ್ದೇಶಿಸಲಾಗಿದೆ.

ಅಧಿಕಾರಿಗಳು ಹಾಗೂ ಸಿಬ್ಬಂದಿ ಕಚೇರಿ ಕೊಠಡಿಗಳಿಂದ ಹೊರಡುವಾಗ ವಿದ್ಯುತ್ ಸಂಪರ್ಕಗಳನ್ನು ಕಡ್ಡಾಯವಾಗಿ ಸ್ಥಗಿತಗೊಳಿಸಬೇಕು. ಸಚಿವರು ಮತ್ತು ಅಧಿಕಾರಿಗಳ ಕೊಠಡಿಗಳಲ್ಲಿ ಈ ನಿಯಮ ಪಾಲನೆಯಾಗುವುದನ್ನು ಖಚಿತಪಡಿಸುವ ಜವಾಬ್ದಾರಿಯನ್ನು ಆಪ್ತ ಕಾರ್ಯದರ್ಶಿಗಳು ಮತ್ತು ಭದ್ರತಾ ಸಿಬ್ಬಂದಿಗೆ ವಹಿಸಲಾಗಿದೆ.

ಇನ್ನು ಅಧಿಕಾರಿಗಳ ಕೊಠಡಿಗಳಲ್ಲಿರುವ ಹವಾನಿಯಂತ್ರಣ ಸಾಧನಗಳನ್ನು 24 ರಿಂದ 26 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲೇ ಬಳಸುವಂತೆ ಸೂಚಿಸಲಾಗಿದೆ. ವಿದ್ಯುತ್ ಉಳಿತಾಯದ ಉದ್ದೇಶದಿಂದ ಸಾಂಪ್ರದಾಯಿಕ ದೀಪಗಳ ಬದಲಿಗೆ ಎಲ್‌ಇಡಿ ದೀಪಗಳನ್ನು ಅಳವಡಿಸಲು ಹಾಗೂ ಕಾರಿಡಾರ್‌ಗಳು, ವಿಶ್ರಾಂತಿ ಕೊಠಡಿಗಳು ಮತ್ತು ಸಭಾಂಗಣಗಳಲ್ಲಿ ಚಲನಶೀಲ ಸಂವೇದಕಗಳನ್ನು ಅಳವಡಿಸುವಂತೆ ತಿಳಿಸಲಾಗಿದೆ.

## ಅಣ್ಣನ ಪ್ರೀತಿ ನಿರಾಕರಿಸಿದ ಕಾನೂನು ವಿದ್ಯಾರ್ಥಿನಿ ಹತ್ಯೆ; ತಮ್ಮ ಸೇರಿ ಇಬ್ಬರು ಬಂಧನ

ಬೆಂಗಳೂರು: ಅಣ್ಣನ ಪ್ರೀತಿಯನ್ನು ನಿರಾಕರಿಸಿದ್ದ ಕಾನೂನು ವಿದ್ಯಾರ್ಥಿನಿಯನ್ನು ಆತನ ತಮ್ಮ ಚಾಕುವಿನಿಂದ ಇರಿದು ಹತ್ಯೆಗೈದ ಘಟನೆ ನಗರದ ಕೋಡಿಹಳ್ಳಿಯ ಹೆಚ್‌ಎಎಲ್ ರಸ್ತೆಯಲ್ಲಿ ನಡೆದಿದೆ. ಚಿಕಿತ್ಸೆ ಪಡೆಯುತ್ತಿದ್ದ ಯುವತಿ ಬುಧವಾರ ಸಂಜೆ ಮೃತಪಟ್ಟಿದ್ದಾಳೆ.

ಅಮೃತ ಮೃತ ಯುವತಿ. ಜುಲೈ 13ರಂದು ನಡೆದ ದಾಳಿಯಲ್ಲಿ ಆಕೆಯ ಬೆನ್ನು ಮತ್ತು ಎದೆ ಭಾಗಕ್ಕೆ ಚಾಕುವಿನಿಂದ ಇರಿಯಲಾಗಿತ್ತು. ತೀವ್ರವಾಗಿ ಗಾಯಗೊಂಡಿದ್ದ ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದರೂ, ಚಿಕಿತ್ಸೆ ಫಲಿಸದೆ ಜುಲೈ 15ರ ಸಂಜೆ ಸಾವನ್ನಪ್ಪಿದ್ದಾಳೆ.

ಪೊಲೀಸರ ಮಾಹಿತಿ ಪ್ರಕಾರ, ಓಂ ಶಕ್ತಿ ಮಾಲೆ ಧಾರಣೆ ಕಾರ್ಯಕ್ರಮದ ವೇಳೆ ಎರಡು ಕುಟುಂಬಗಳ ನಡುವೆ ಪರಿಚಯವಾಗಿತ್ತು. ಬಳಿಕ ಧನುಷ್ ಮತ್ತು ಅಮೃತ ಪರಸ್ಪರ ಆತ್ಮೀಯರಾಗಿದ್ದು, ಪ್ರೀತಿಸುತ್ತಿದ್ದರು ಎನ್ನಲಾಗಿದೆ. ಆದರೆ, ಧನುಷ್‌ಗೆ ಈಗಾಗಲೇ ಮದುವೆಯಾಗಿದ್ದು ವಿಚ್ಛೇದನ ಪಡೆದಿದ್ದ ಹಾಗೂ ಒಂದು ಮಗು ಇದ್ದ ವಿಚಾರವನ್ನು ಆತ ಅಮೃತಳಿಂದ ಮುಚ್ಚಿಟ್ಟಿದ್ದ. ಈ ವಿಷಯ ತಿಳಿದ ಬಳಿಕ ಅಮೃತ ಧನುಷ್‌ನಿಂದ ದೂರವಾಗಿದ್ದಳು ಎಂದು ಹೇಳಲಾಗಿದೆ.

ಇದರಿಂದ ಆಕ್ರೋಶಗೊಂಡಿದ್ದ ಧನುಷ್‌ನ ತಮ್ಮ ಸೂರ್ಯ, "ಅಣ್ಣನ ಪ್ರೀತಿ ನಿರಾಕರಿಸಿದವಳನ್ನು ಉಳಿಸುವುದಿಲ್ಲ" ಎಂದು ಹೇಳಿಕೊಂಡಿದ್ದ ಎನ್ನಲಾಗಿದೆ.

**ಮೂಲಗಳ ಪ್ರಕಾರ, ರಾಜ್ಯ ನಾಯಕರು ಸಿದ್ಧಪಡಿಸಿರುವ ಸಚಿವರ ಪಟ್ಟಿಗೆ ಹೈಕಮಾಂಡ್ ಸಂಪೂರ್ಣ ಒಪ್ಪಿಗೆ ಸೂಚಿಸಿಲ್ಲ. ಹೊಸ ಮುಖಗಳಿಗೆ ಆದ್ಯತೆ ನೀಡುವ ನಿಲುವನ್ನು ಕಾಂಗ್ರೆಸ್ ಹೈಕಮಾಂಡ್ ಹೊಂದಿದ್ದರೆ, ಅನುಭವಿಗಳಿಗೂ ಸೂಕ್ತ ಪ್ರಾತಿನಿಧ್ಯ ನೀಡಬೇಕೆಂದು ರಾಜ್ಯ ನಾಯಕರು ಒತ್ತಾಯಿಸಿದ್ದಾರೆ. ಹಿರಿಯ ಶಾಸಕರ ಜೊತೆಗೆ ಕೆಲವು ಹೊಸ ಶಾಸಕರಿಗೂ ಅವಕಾಶ ಕಲ್ಪಿಸುವ ಕುರಿತು ರಾಜ್ಯ ನಾಯಕತ್ವ ಅಭಿಪ್ರಾಯ ವ್ಯಕ್ತಪಡಿಸಿದೆ ಎನ್ನಲಾಗಿದೆ.**

## ಸುಖಾಂತ್ಯ ಕಾಣದ ಸಂಪುಟ ವಿಸ್ತರಣೆ

ನವದೆಹಲಿ: ಕರ್ನಾಟಕ ಸಚಿವ ಸಂಪುಟ ವಿಸ್ತರಣೆ ಕುರಿತಂತೆ ಕಾಂಗ್ರೆಸ್ ಹೈಕಮಾಂಡ್ ನಡೆಸಿದ ಮಹತ್ವದ ಸಭೆಯಲ್ಲೂ ಯಾವುದೇ ಅಂತಿಮ ತೀರ್ಮಾನ ಹೊರಬಿದ್ದಿಲ್ಲ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ದೆಹಲಿಯಲ್ಲಿ ಕಾಂಗ್ರೆಸ್ ನಾಯಕತ್ವದೊಂದಿಗೆ ಸಮಾಲೋಚನೆ ನಡೆಸಿದರೂ, ಸಚಿವರ ಪಟ್ಟಿಗೆ ಇನ್ನೂ ಅಂತಿಮ ಒಪ್ಪಿಗೆ ದೊರೆತಿಲ್ಲ.

ಸೋನಿಯಾ ಗಾಂಧಿ ಅವರ 10 ಜನಪಥ್ ನಿವಾಸದಲ್ಲಿ ನಡೆದ ಸಭೆಯಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ರಂದೀಪ್ ಸಿಂಗ್ ಸುರ್ಜೇವಾಲ, ಕೆ.ಸಿ. ವೇಣುಗೋಪಾಲ್, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಕೆ.ಜೆ. ಜಾರ್ಜ್ ಸೇರಿದಂತೆ ಹಿರಿಯ ನಾಯಕರು ಭಾಗವಹಿಸಿದ್ದರು.

ಆದರೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸಭೆಯಲ್ಲಿ ಗೈರಾಗಿದ್ದ ಕಾರಣ ಅಂತಿಮ ನಿರ್ಧಾರ ಕೈಗೊಳ್ಳಲಾಗಿಲ್ಲ ಎಂದು ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ರಾಜ್ಯ ನಾಯಕರು ಸಿದ್ಧಪಡಿಸಿರುವ ಸಚಿವರ ಪಟ್ಟಿಗೆ ಹೈಕಮಾಂಡ್ ಸಂಪೂರ್ಣ ಒಪ್ಪಿಗೆ ಸೂಚಿಸಿಲ್ಲ. ಹೊಸ ಮುಖಗಳಿಗೆ ಆದ್ಯತೆ ನೀಡುವ ನಿಲುವನ್ನು ಕಾಂಗ್ರೆಸ್ ಹೈಕಮಾಂಡ್ ಹೊಂದಿದ್ದರೆ, ಅನುಭವಿಗಳಿಗೂ ಸೂಕ್ತ ಪ್ರಾತಿನಿಧ್ಯ ನೀಡಬೇಕೆಂದು ರಾಜ್ಯ ನಾಯಕರು ಒತ್ತಾಯಿಸಿದ್ದಾರೆ. ಹಿರಿಯ ಶಾಸಕರ ಜೊತೆಗೆ ಕೆಲವು ಹೊಸ ಶಾಸಕರಿಗೂ ಅವಕಾಶ ಕಲ್ಪಿಸುವ ಕುರಿತು ರಾಜ್ಯ ನಾಯಕತ್ವ ಅಭಿಪ್ರಾಯ ವ್ಯಕ್ತಪಡಿಸಿದೆ ಎನ್ನಲಾಗಿದೆ.



ಇದಕ್ಕೆ ವಿರುದ್ಧವಾಗಿ, ರಾಹುಲ್ ಗಾಂಧಿ ಅವರು ವಿವಿಧ ಮೂಲಗಳಿಂದ ಪಡೆದ ಮಾಹಿತಿಯ ಆಧಾರದ ಮೇಲೆ ಪ್ರತ್ಯೇಕ ಪಟ್ಟಿಯನ್ನು ಸಿದ್ಧಪಡಿಸಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಹೊಸ ಮುಖಗಳಿಗೆ ಹೆಚ್ಚಿನ ಅವಕಾಶ ನೀಡುವ ಬಗ್ಗೆ ಹೈಕಮಾಂಡ್ ಒಲವು ತೋರಿರುವ ಹಿನ್ನೆಲೆಯಲ್ಲಿ, ರಾಜ್ಯ ನಾಯಕತ್ವ ಮತ್ತು ಕೇಂದ್ರ ನಾಯಕತ್ವದ ನಡುವೆ ಇನ್ನಷ್ಟು ಸಮಾಲೋಚನೆ ಅಗತ್ಯವಾಗಿದೆ ಎಂದು ಪಕ್ಷದ ಮೂಲಗಳು ಹೇಳಿವೆ.

ಸಭೆಯಲ್ಲಿ ಸಚಿವ ಸಂಪುಟ ವಿಸ್ತರಣೆಯ ಕುರಿತು ಆರಂಭಿಕ ಚರ್ಚೆ ನಡೆದಿದ್ದು, ಮುಂದಿನ ವಾರ ಮತ್ತೊಮ್ಮೆ ಸಭೆ ನಡೆಸಿ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಪ್ರಸ್ತುತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದಲ್ಲಿ ಕೇವಲ 13 ಮಂದಿ ಸಚಿವರು ಕಾರ್ಯನಿರ್ವಹಿಸುತ್ತಿದ್ದು, ಇನ್ನೂ ಹಲವು ಪ್ರಮುಖ ಖಾತೆಗಳು ಭರ್ತಿಯಾಗಬೇಕಿದೆ. ಈ ಹಿನ್ನೆಲೆಯಲ್ಲಿ ಶೀಘ್ರದಲ್ಲೇ ಸಂಪುಟ ವಿಸ್ತರಣೆ ನಡೆಯುವ ನಿರೀಕ್ಷೆ ಇದ್ದರೂ, ಅಂತಿಮ ಪಟ್ಟಿಯ ಬಗ್ಗೆ ಇನ್ನೂ ಸ್ಪಷ್ಟತೆ ಮೂಡಿಲ್ಲ.

ಇತ್ತ ಸಚಿವ ಸ್ಥಾನಕ್ಕಾಗಿ ಕಾಂಗ್ರೆಸ್‌ನ ಹಲವು ಶಾಸಕರು ತೀವ್ರ ಲಾಬಿ ನಡೆಸುತ್ತಿದ್ದು, ಲಭ್ಯವಿರುವ ಸ್ಥಾನಗಳಿಗಿಂತ ಹೆಚ್ಚಿನ ಸಂಖ್ಯೆಯ ಆಕಾಂಕ್ಷಿಗಳು ಇರುವುದರಿಂದ ಸಚಿವ ಸಂಪುಟ ರಚನೆಗೆ ಸಮತೋಲನ ಸಾಧಿಸುವುದು ಹೈಕಮಾಂಡ್‌ಗೆ ಸವಾಲಾಗಿ ಪರಿಣಮಿಸಿದೆ.

ಕಾಂಗ್ರೆಸ್ ಹೈಕಮಾಂಡ್ ಮುಂದಿನ ವಾರ ಮತ್ತೊಂದು ಸುತ್ತಿನ ಚರ್ಚೆ ನಡೆಸಲಿದ್ದು, ಅದರ ಬಳಿಕವೇ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದ ಅಂತಿಮ ನಿರ್ಧಾರ ಪ್ರಕಟವಾಗುವ ಸಾಧ್ಯತೆ ಇದೆ.

## 'ಕ್ರೀಡಾಪಟುಗಳಿಗೆ ಹಾಜರಾತಿಯಲ್ಲಿ ವಿನಾಯಿತಿ'

ಬೆಂಗಳೂರು: ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಮಾಜದಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಒಟ್ಟು ಜನಸಂಖ್ಯೆಯಲ್ಲಿ ಶೇ.65ರಷ್ಟು ಜನರು 35 ವರ್ಷಕ್ಕಿಂತ ಕಡಿಮೆ ವಯೋಮಿತಿಯವರಿದ್ದಾರೆ. ಅವರನ್ನು ರಾಜ್ಯದ ಮತ್ತು ರಾಷ್ಟ್ರದ ಅಭಿವೃದ್ಧಿಗೆ ತೊಡಗಿಸಿಕೊಳ್ಳಬೇಕು. ಪದವಿ ಪಡೆಯುವುದರೊಳಗೆ ಮತದಾರರ ಹಕ್ಕು ಪಡೆಯುವ ಅವರಿಂದ ಸಮಾಜದ ಅಭಿವೃದ್ಧಿಗೆ ಉಪಕಾರಿಯಾಗುವಂತಹ ಕೆಲಸ ಆಗಬೇಕು. ಈ ನಿಟ್ಟಿನಲ್ಲಿ ನಮ್ಮ ಇಲಾಖೆಯು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ಅವರು ತಿಳಿಸಿದರು.

ಬೆಂಗಳೂರಿನ ನೃಪತುಂಗ ರಸ್ತೆಯ ಯವನಿಕಾ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ಶೇ. 15 ರಷ್ಟು ವಿನಾಯಿತಿ, ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಶೇ. 25ರಷ್ಟು ಹಾಜರಾತಿ ವಿನಾಯಿತಿ ನೀಡಲಾಗುವುದು. ಇದನ್ನು ಕೂಡಲೇ ಅನುಷ್ಠಾನಗೊಳಿಸಲಾಗಿದ್ದು, ಸರ್ಕಾರಿ ಆದೇಶ ಹೊರಡಿಸಿರುವುದಾಗಿ ತಿಳಿಸಿದರು.

ವಿದ್ಯಾರ್ಥಿಗಳ ಹಾಜರಾತಿ ಶೇ. 50ರಷ್ಟು ಇದ್ದರೂ ಪರೀಕ್ಷೆ ಬರೆಯಲು ಅವಕಾಶ ನೀಡಬೇಕು. ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುತ್ತಾರೆ. ಅಂಥವರಿಗೆ ಹಾಜರಾತಿ ಬಂದಿರುವುದಿಲ್ಲ. ಇದು ನನ್ನ ಸ್ವಂತ ಅನುಭವವೂ ಹೌದು. ಹಾಗಾಗಿ ಯಾವುದೇ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗಬಾರದು.

ಈ ಉದ್ದೇಶದಿಂದ ಕ್ರೀಡಾಪಟು ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ವಿನಾಯಿತಿ ಅವಕಾಶ ಕಲ್ಪಿಸಲಾಗಿದೆ. ಒಟ್ಟು 34 ವಿವಿಧ ಕ್ರೀಡೆಗಳಲ್ಲಿ ಸಾಧನೆ ಮಾಡಿದ



> ಬೆಂಗಳೂರಿನ ನೃಪತುಂಗ ರಸ್ತೆಯ ಯವನಿಕಾ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ಶೇ. 15 ರಷ್ಟು ವಿನಾಯಿತಿ, ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಶೇ. 25ರಷ್ಟು ಹಾಜರಾತಿ ವಿನಾಯಿತಿ ನೀಡಲಾಗುವುದು. ಇದನ್ನು ಕೂಡಲೇ ಅನುಷ್ಠಾನಗೊಳಿಸಲಾಗಿದ್ದು, ಸರ್ಕಾರಿ ಆದೇಶ ಹೊರಡಿಸಿರುವುದಾಗಿ ತಿಳಿಸಿದರು.

ಕ್ರೀಡಾಪಟುಗಳಿಗೆ ಹಾಜರಾತಿ ವಿನಾಯಿತಿ ನೀಡಲಾಗಿದ್ದು, ಕ್ರೀಡಾಕೂಟಗಳ ಪಟ್ಟಿಯನ್ನೂ ಸಹ ಒದಗಿಸಲಾಗಿದೆ ಎಂದು ವಿವರಿಸಿದರು.

ಸರ್ಕಾರವು ರಾಜ್ಯದ ಸಾಧಕ ಕ್ರೀಡಾಪಟುಗಳಿಗೆ ಉದ್ಯೋಗಾವಕಾಶ ನೀಡಲು ಹೆಚ್ಚಿನ ಆದ್ಯತೆ ನೀಡುತ್ತಿದೆ. ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ 72 ಸಾವಿರ ಹುದ್ದೆಗಳ ಭರ್ತಿಗೆ ಮುಂದಾಗಿದೆ. ಶೇ.2 ರಷ್ಟು ಹುದ್ದೆಗಳನ್ನು ಕ್ರೀಡಾಪಟುಗಳಿಗೆ ಮೀಸಲಿಡಲು ಸಚಿವ ಸಂಪುಟ ಅನುಮೋದನೆ ನೀಡಿದ್ದು, ಕರಡು ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸಾರ್ವಜನಿಕರ ಮತ್ತು ಕ್ರೀಡಾಪಟುಗಳ ಆಕ್ಷೇಪಣೆ ಮತ್ತು ಸಲಹೆಗಳನ್ನು ಪರಿಶೀಲಿಸಿ, ಶೀಘ್ರ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು ಎಂದರು.

ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್ ಮತ್ತು ಏಷ್ಯನ್ ಪ್ಯಾರಾ ಗೇಮ್ಸ್‌ಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ಕ್ರೀಡಾಪಟುಗಳಿಗೆ ರೂ. 5 ಲಕ್ಷ ವಿಶೇಷ ಪ್ರೋತ್ಸಾಹಧನ ನೀಡಲಾಗುವುದು. ಈ ಮೊತ್ತವು ಪದಕ ವಿಜೇತರಿಗೆ ನೀಡಲಾಗುವ ನಗದು ಪುರಸ್ಕಾರ ಮೊತ್ತಕ್ಕೆ ಹೆಚ್ಚುವರಿಯಾಗಿದೆ.

## ಉಪಸಭಾಪತಿ ಎಂ.ಕೆ.ಪ್ರಾಣೇಶ್ ಪರಿಷತ್ ಸದಸ್ಯತ್ವ ರದ್ದು

ನವದೆಹಲಿ: ಕರ್ನಾಟಕ ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ. ಪ್ರಾಣೇಶ್ ಅವರ ಸದಸ್ಯತ್ವವನ್ನು ರದ್ದುಪಡಿಸುವಂತೆ ಸುಪ್ರೀಂ ಕೋರ್ಟ್ ಆದೇಶ ಹೊರಡಿಸಿದೆ. ನಗರ ಸ್ಥಳೀಯ ಸಂಸ್ಥೆಗಳ ನಾಮನಿರ್ದೇಶಿತ ಸದಸ್ಯರಿಗೆ ವಿಧಾನ ಪರಿಷತ್ ಚುನಾವಣೆಯಲ್ಲಿ ಮತದಾನದ ಹಕ್ಕಿಲ್ಲ ಎಂಬ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಈ ಮೂಲಕ ಚಿಕ್ಕಮಗಳೂರು ವಿಧಾನ ಪರಿಷತ್ ಕ್ಷೇತ್ರದಲ್ಲಿ ಪ್ರಾಣೇಶ್ ಅವರ ಆಯ್ಕೆ ಪ್ರಶ್ನಿಸಿದ್ದ ಪ್ರಕರಣದಲ್ಲಿ ಗಾಯತ್ರಿ ಶಾಂತೇಗೌಡ ಅವರಿಗೆ ಮೇಲುಗೈ ದೊರೆತಿದೆ. ಚಿಕ್ಕಮಗಳೂರು ಕ್ಷೇತ್ರದ ವಿಧಾನ ಪರಿಷತ್ ಸ್ಥಾನಕ್ಕೆ 2021ರ ಡಿಸೆಂಬರ್‌ನಲ್ಲಿ ಚುನಾವಣೆ ನಡೆದಿತ್ತು. ಚುನಾವಣೆಯಲ್ಲಿ ಒಟ್ಟು 2,410 ಮತಗಳು ಚಲಾವಣೆಯಾಗಿದ್ದು, ಅದರಲ್ಲಿ 39 ಮತಗಳು ಅಸಿಂಧುಗೊಂಡಿದ್ದವು.

ಪ್ರಾಣೇಶ್ ಅವರು 1,188 ಮತಗಳನ್ನು ಪಡೆದು ಕೇವಲ ಆರು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು. ಅವರ ಎದುರಾಳಿ ಗಾಯತ್ರಿ ಶಾಂತೇಗೌಡ ಅವರು 1,182 ಮತಗಳನ್ನು ಪಡೆದಿದ್ದರು. ಆದರೆ, ಶೃಂಗೇರಿ, ಕೊಪ್ಪ, ಎನ್.ಆರ್.ಪುರ ಹಾಗೂ ಮೂಡಿಗೆರೆ ಪಟ್ಟಣ ಪಂಚಾಯಿತಿಗಳ 12 ನಾಮನಿರ್ದೇಶಿತ ಸದಸ್ಯರು ಚುನಾವಣೆಯಲ್ಲಿ ಮತ ಚಲಾಯಿಸಿದ್ದರು. ಈ ಸದಸ್ಯರಿಗೆ ಮತದಾನದ ಹಕ್ಕಿಲ್ಲ ಎಂದು ಆಕ್ಷೇಪಿಸಿ ಗಾಯತ್ರಿ ಶಾಂತೇಗೌಡ ಅವರು ಹೈಕೋರ್ಟ್ ಮೊರೆ ಹೋಗಿದ್ದರು.

ವಿಚಾರಣೆ ನಡೆಸಿದ ಹೈಕೋರ್ಟ್, ಸ್ಥಳೀಯ ಸಂಸ್ಥೆಗಳ ನಾಮನಿರ್ದೇಶಿತ ಸದಸ್ಯರಿಗೆ ವಿಧಾನ ಪರಿಷತ್ ಚುನಾವಣೆಯಲ್ಲಿ ಮತದಾನದ ಹಕ್ಕಿಲ್ಲ ಎಂದು ತೀರ್ಪು ನೀಡಿತ್ತು. ಈ ಆದೇಶವನ್ನು ಪ್ರಶ್ನಿಸಿ ಎಂ.ಕೆ. ಪ್ರಾಣೇಶ್ ಅವರು ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು.

ಆದರೆ, ಸುಪ್ರೀಂ ಕೋರ್ಟ್ ಕೂಡ ಪ್ರಾಣೇಶ್ ಅವರ ಅರ್ಜಿಯನ್ನು ತಿರಸ್ಕರಿಸುವ ಮೂಲಕ ಹೈಕೋರ್ಟ್ ತೀರ್ಪನ್ನು ಎತ್ತಿಹಿಡಿದಿದೆ.

## ಸುರಂಗ ರಸ್ತೆ ಯೋಜನೆ: ಹೈಕೋರ್ಟ್‌ನಲ್ಲಿ ವಿಚಾರಣೆ ಮುಂದೂಡಿಕೆ

ಬೆಂಗಳೂರು: ಬೆಂಗಳೂರಿನ ಸಂಚಾರ ದಟ್ಟಣೆ ಕಡಿಮೆ ಮಾಡುವ ಉದ್ದೇಶದಿಂದ ಪ್ರಸ್ತಾಪಿಸಿರುವ ಹೆಬ್ಬಾಳದಿಂದ ಸಿಲ್ಕ್ ಬೋರ್ಡ್‌ವರೆಗಿನ ಸುರಂಗ ರಸ್ತೆ ಯೋಜನೆಗೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಆಗಸ್ಟ್ 20ಕ್ಕೆ ಮುಂದೂಡಿದೆ.

ಸುರಂಗ ರಸ್ತೆ ಯೋಜನೆಗೆ ಮಧ್ಯಂತರ ತಡೆಯಾಜ್ಞೆ ನೀಡುವಂತೆ ಪ್ರಕಾಶ್ ಬೆಳವಾಡಿ, ಡಾ. ಎ. ರವೀಂದ್ರ ಹಾಗೂ ಸಿಟಿಜನ್ ಆಕ್ಷನ್ ಫೋರಂ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ, ಯೋಜನೆಯ ಕಾಮಗಾರಿ ಹೈಕೋರ್ಟ್‌ನ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ ಎಂದು ಸ್ಪಷ್ಟಪಡಿಸಿದೆ.

ಅರ್ಜಿಯ ವಿಚಾರಣೆ ವೇಳೆ, ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಬಾಕಿ ಇರುವ ಮಾಹಿತಿಯನ್ನು ಗುತ್ತಿಗೆದಾರರಿಗೆ ನೀಡುವಂತೆ ನ್ಯಾಯಾಲಯ ಸೂಚನೆ ನೀಡಿತು. ಬಳಿಕ ವಿಚಾರಣೆಯನ್ನು ಆಗಸ್ಟ್ 20ಕ್ಕೆ ಮುಂದೂಡಿತು. ಅರ್ಜಿದಾರರ ಪರವಾಗಿ ಹಿರಿಯ ವಕೀಲ ಡಿ.ಆರ್. ರವಿಶಂಕರ್ ಹಾಗೂ ಸಂಸದ ತೇಜಸ್ವಿ ಸೂರ್ಯ ವಾದ ಮಂಡಿಸಿದರು.

ಹಿಂದಿನ ವಿಚಾರಣೆಯಲ್ಲಿ ಹೈಕೋರ್ಟ್ ರಾಜ್ಯ ಸರ್ಕಾರ, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ರಾಜ್ಯ ಪರಿಸರ ಪರಿಣಾಮ ಮೌಲ್ಯಮಾಪನ ಪ್ರಾಧಿಕಾರ, ನಗರ ಭೂಸಾರಿಗೆ ನಿರ್ದೇಶನಾಲಯ, ಬೆಂಗಳೂರು ಸ್ಮಾರ್ಟ್ ಮೂಲಸೌಕರ್ಯ ನಿಯಮಿತ ಸೇರಿದಂತೆ ಹಲವು ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿತ್ತು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
17/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಅಂತರ ಶಾಲಾ ವಾಲಿಬಾಲ್ ಚಾಂಪಿಯನ್‌ಶಿಪ್‌ಗೆ ಸಚಿವ ರಾಮಲಿಂಗರೆಡ್ಡಿ ಚಾಲನೆ

ಬೆಂಗಳೂರು: ಜಯನಗರದ ಕಿತ್ತೂರು ರಾಣಿ ಚೆನ್ನಮ್ಮ ಕ್ರೀಡಾಂಗಣದಲ್ಲಿ ನಡೆದ 29ನೇ ರಾಜ್ಯ ಮಟ್ಟದ ಅಂತರ ಶಾಲಾ ವಾಲಿಬಾಲ್ ಚಾಂಪಿಯನ್‌ಶಿಪ್ (ಬಾಲಕರು ಮತ್ತು ಬಾಲಕಿಯರು) ಹಾಗೂ ಬಂಧವ ಕಪ್–2026 ಉದ್ಘಾಟನಾ ಸಮಾರಂಭವು ಅದ್ದೂರಿಯಾಗಿ ನಡೆಯಿತು.

14 ವರ್ಷ ಹಾಗೂ 17 ವರ್ಷ ವಯೋಮಿತಿಯೊಳಗಿನ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗಾಗಿ ಆಯೋಜಿಸಲಾಗಿರುವ ಈ ಕ್ರೀಡಾಕೂಟವನ್ನು ಫಿಸಿಕಲ್ ಎಜುಕೇಶನ್ ಅಂಡ್ ಸ್ಪೋರ್ಟ್ಸ್ ಅಕಾಡೆಮಿ (ಕಇಖಂ) ಆಯೋಜಿಸಿದೆ. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ಯುವ ಕ್ರೀಡಾಪಟುಗಳು ಉತ್ಸಾಹದಿಂದ ಸ್ಪರ್ಧೆಯಲ್ಲಿ ಭಾಗವಹಿಸಿದರು.

ಕಾರ್ಯಕ್ರಮಕ್ಕೆ ಕರ್ನಾಟಕ ಸರ್ಕಾರದ ಜಲಸಂಪನ್ಮೂಲ ಸಚಿವರಾದ ರಾಮಲಿಂಗರೆಡ್ಡಿ ಚಾಲನೆ ನೀಡಿ, ಕ್ರೀಡೆಯು ವಿದ್ಯಾರ್ಥಿಗಳ




ದೈಹಿಕ ಮತ್ತು ಮಾನಸಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ತಿಳಿಸಿದರು. ಯುವ ಕ್ರೀಡಾಪಟುಗಳು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವಂತಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಮಾಜಿ ನಗರಸಭಾ ಸದಸ್ಯ ನಾಗರಾಜ್, ಬಿಜೆಪಿ ಮುಖಂಡ ಎನ್.ಆರ್. ರಮೇಶ್, ಬೆಟ್ಟೆಗೌಡ, ಜಿಬಿಎ ಅಧಿಕಾರಿ ಕೆ. ಗಗನಾ, ನಟ ಹಾಗೂ ನಿರ್ಮಾಪಕರಾದ ಗಂಡಸಿ ಸದಾನಂದ ಸ್ವಾಮಿ, ನಿಸಾರ್ ಅಹ್ಮದ್, ಸುರೇಶ್ ಆರ್ , ಪ್ರಮೋದ್ ಶ್ರೀನಿವಾಸ್, ಕವಿತಾ ಜೋಡಿಧರ್, ಅಮ್ಮುಲು ನಾಯ್ಡು, ಶ್ರೀಕಾಂತ್, ಚಂದನ್ ಹಾಗೂ ನರೇಂದ್ರ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.



ಈ ಸಂದರ್ಭದಲ್ಲಿ ಕ್ರೀಡಾ ಕ್ಷೇತ್ರಕ್ಕೆ ಹಾಗೂ ಸಮಾಜಕ್ಕೆ ನೀಡಿದ ಕೊಡುಗೆಯನ್ನು ಪರಿಗಣಿಸಿ ಕ್ರೀಡಾಶ್ರೀ ಪ್ರಶಸ್ತಿ–2026 ಅನ್ನು ಶಿಕ್ಷಣ ತಜ್ಞ ಡಾ. ಮುನಿರಾಜು ಹಾಗೂ ಉದ್ಯಮಿ ಭಕ್ತವತ್ಸಲ ಅವರಿಗೆ ಪ್ರದಾನ ಮಾಡಿ ಸನ್ಮಾನಿಸಲಾಯಿತು.

ರಾಜ್ಯ ಮಟ್ಟದ ಈ ಪಂದ್ಯಾವಳಿಯು ಯುವ ಕ್ರೀಡಾಪಟುಗಳಿಗೆ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಭವಿಷ್ಯದ ಕ್ರೀಡಾ ಜೀವನಕ್ಕೆ ಭದ್ರ ಬುನಾದಿ ಹಾಕಿಕೊಡುವ ವೇದಿಕೆಯಾಗಲಿದೆ ಎಂದು ಆಯೋಜಕರು ಅಭಿಪ್ರಾಯಪಟ್ಟರು.

## ಮತದಾರರ ಪಟ್ಟಿ ಪರಿಷ್ಕರಣೆಗೆ ಸಹಕರಿಸಿ

ದೇವನಹಳ್ಳಿ

ಪ್ರಜಾಪ್ರಭುತ್ವದ ಬಲವರ್ಧನೆಗೆ ಪ್ರತಿಯೊಬ್ಬರ ಮತ ಅಮೂಲ್ಯವಾಗಿದ್ದು, ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಜವಾಬ್ದಾರಿಯಿಂದ ಪಾಲ್ಗೊಂಡು ಮನೆ ಮನೆಗೆ ಬರುವ ಬಿಎಲ್‌ಒ ಅಧಿಕಾರಿಗಳಿಗೆ ಸಮರ್ಪಕ ಮಾಹಿತಿ ನೀಡಬೇಕು ಎಂದು ಅಣ್ಣೇಶ್ವರ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಕೃಷ್ಣಮೂರ್ತಿ ಕರೆ ನೀಡಿದರು.

ದೇವನಹಳ್ಳಿ ತಾಲೂಕಿನ ಅಣ್ಣೇಶ್ವರ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಸಾರ್ವಜನಿಕರಿಗೆ ನಮೂನೆಗಳನ್ನು ವಿತರಿಸಿ ಮಾತನಾಡಿದ ಅವರು, ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ ಹಾಗೂ ಮೃತ ಮತ್ತು ಸ್ಥಳಾಂತರಗೊಂಡ ಮತದಾರರ ಹೆಸರನ್ನು ತೆಗೆದುಹಾಕುವ ಕುರಿತು ಅಗತ್ಯ ಮಾಹಿತಿಯನ್ನು ನೀಡಿದರು.

18 ವರ್ಷ ಪೂರ್ಣಗೊಳಿಸಿರುವ ಯುವಜನರು ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಈಗಾಗಲೇ ಹೆಸರು ನೋಂದಾಯಿಸಿರುವ ಮತದಾರರು ತಮ್ಮ ವಿವರಗಳನ್ನು ಪರಿಶೀಲಿಸಿ ಅಗತ್ಯ ತಿದ್ದುಪಡಿಗಳನ್ನು ಮಾಡಿಸಿಕೊಳ್ಳುವಂತೆ ಅವರು ಮನವಿ ಮಾಡಿದರು.

ಮನೆ ಮನೆಗೆ ಭೇಟಿ ನೀಡುವ ಬಿಎಲ್‌ಒಗಳಿಗೆ ಸರಿಯಾದ ಮಾಹಿತಿ ಹಾಗೂ ಅಗತ್ಯ ದಾಖಲೆಗಳನ್ನು ಒದಗಿಸುವ ಮೂಲಕ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕೆ ಸಾರ್ವಜನಿಕರು ಸಹಕರಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದ್ವಿತೀಯ ದರ್ಜೆ ಸಹಾಯಕ ವಿಶ್ವಾಸ್, ಕಂಪ್ಯೂಟರ್ ಆಪರೇಟರ್ ರೇಣುಕಾ, ಬಿಎಲ್‌ಒ ಸುಜಾತ, ಗ್ರಾಮ ಪಂಚಾಯಿತಿ ಸಿಬ್ಬಂದಿಗಳಾದ ಮಂಜುನಾಥ್, ಶ್ರೀನಿವಾಸ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ‘ಪ್ರತಿ ಎಕರೆಗೆ ರೂ.25 ಸಾವಿರ ಪರಿಹಾರ ನೀಡಿ’

ಚಿಂತಾಮಣಿ

ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ಪ್ರತಿಯೊಬ್ಬ ರೈತರಿಗೆ ಪ್ರತಿ ಎಕರೆಗೆ ರೂ.25 ಸಾವಿರ ಪರಿಹಾರ ಘೋಷಿಸಿ ಬಿಡುಗಡೆ ಮಾಡಬೇಕು ಎಂದು ಜೆಡಿಎಸ್ ಕೋರ್ ಕಮಿಟಿ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಜೆಕೆ ಕೃಷ್ಣಾರೆಡ್ಡಿ ಆಗ್ರಹಿಸಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮುಂಗಾರು ಮಳೆ ಕೈಕೊಟ್ಟಿರುವ ಪರಿಣಾಮ ರಾಜ್ಯದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೆಲವೆಡೆ ಉಳುಮೆ ಸಾಧ್ಯವಾಗಿಲ್ಲ, ಇನ್ನೂ ಕೆಲವು ಕಡೆ ಉಳುಮೆ ಮಾಡಿದರೂ ಬಿತ್ತನೆ ಮಾಡಲು ಸಾಧ್ಯವಾಗಿಲ್ಲ. ಬಿತ್ತನೆ ಮಾಡಿದ ಪ್ರದೇಶಗಳಲ್ಲಿಯೂ ಮಳೆ ಕೊರತೆಯಿಂದ ಬೀಜಗಳು ಮೊಳಕೆಯೊಡೆಯದೆ ನಾಶವಾಗಿವೆ ಎಂದು ಹೇಳಿದರು.

## ವರ್ಚುವಲ್ ಗ್ಯಾಲಕ್ಸಿ ಇನ್ಫೋಟೆಕ್‌ಗೆ ಟೆಕ್ನೋವಿಟಿ–2026 ಪ್ರಶಸ್ತಿ

ಬೆಂಗಳೂರು

ನಾಗ್ಪುರ ಮೂಲದ ಎನ್‌ಎಸ್‌ಇ ಎಮರ್ಜ್‌ನಲ್ಲಿ ಪಟ್ಟಿಗೊಂಡಿರುವ ವರ್ಚುವಲ್ ಗ್ಯಾಲಕ್ಸಿ ಇನ್ಫೋಟೆಕ್ ಲಿಮಿಟೆಡ್ (ವಿಜಿಐಎಲ್) ತನ್ನ ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಸೈಬರ್ ಭದ್ರತಾ ವೇದಿಕೆ ‘ಸೈಬರ್ ಸೆಂಟಿನಲ್’ ಅಭಿವೃದ್ಧಿಗೆ ಪ್ರತಿಷ್ಠಿತ ಟೆಕ್ನೋವಿಟಿ–2026 ಪ್ರಶಸ್ತಿ ಪಡೆದುಕೊಂಡಿದೆ.




ಬ್ಯಾಂಕಿಂಗ್ ಫ್ರಾಂಟಿಯರ್ಸ್ ಆಯೋಜಿಸಿದ್ದ 13ನೇ ಟೆಕ್ನೋವಿಟಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಗೌರವವನ್ನು ಸಂಸ್ಥೆಗೆ ಪ್ರದಾನ ಮಾಡಲಾಯಿತು. ಬ್ಯಾಂಕುಗಳು, ಹಣಕಾಸು ಸಂಸ್ಥೆಗಳು, ಫಿನ್‌ಟೆಕ್ ಕಂಪನಿಗಳು ಹಾಗೂ ಸರ್ಕಾರಿ ಸಂಸ್ಥೆಗಳ ಡಿಜಿಟಲ್ ಭದ್ರತೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಅಭಿವೃದ್ಧಿಪಡಿಸಲಾದ ‘ಸೈಬರ್ ಸೆಂಟಿನಲ್’ ಅತ್ಯಾಧುನಿಕ ಎಐ ತಂತ್ರಜ್ಞಾನವನ್ನು ಬಳಸಿಕೊಂಡು ಕಾರ್ಯನಿರ್ವಹಿಸುತ್ತದೆ.

ಈ ವೇದಿಕೆಯು ಎಐ ಆಧಾರಿತ ಸೈಬರ್ ಬೆದರಿಕೆಗಳ ತ್ವರಿತ ಪತ್ತೆ, ನಿರಂತರ ಭದ್ರತಾ ಮೇಲ್ವಿಚಾರಣೆ, ಸ್ವಯಂಚಾಲಿತ ಪ್ರತಿಕ್ರಿಯೆ ವ್ಯವಸ್ಥೆ ಹಾಗೂ ನಿಯಮಾನುಸರಣೆ ನಿರ್ವಹಣೆ ಇದರಿಂದ ಬ್ಯಾಂಕಿಂಗ್ ಮತ್ತು ಹಣಕಾಸು ಸಂಸ್ಥೆಗಳು ಸೈಬರ್ ದಾಳಿಗಳ ವಿರುದ್ಧ ಹೆಚ್ಚು ಸುರಕ್ಷಿತವಾಗಿ ಕಾರ್ಯನಿರ್ವಹಿಸಲು ನೆರವಾಗುತ್ತದೆ. ಬ್ಯಾಂಕಿಂಗ್ ಮತ್ತು ಹಣಕಾಸು ಕ್ಷೇತ್ರಕ್ಕೆ ಅತ್ಯಾಧುನಿಕ ಸೈಬರ್ ಭದ್ರತಾ ಪರಿಹಾರಗಳನ್ನು ಅಭಿವೃದ್ಧಿಪಡಿಸಿ ಯಶಸ್ವಿಯಾಗಿ ಜಾರಿಗೆ ತಂದಿರುವ ಸಂಸ್ಥೆಯ ಸಾಧನೆಯನ್ನು ಪರಿಗಣಿಸಿ ವರ್ಚುವಲ್ ಗ್ಯಾಲಕ್ಸಿ ಇನ್ಫೋಟೆಕ್‌ಗೆ ಈ ಪ್ರತಿಷ್ಠಿತ ಪ್ರಶಸ್ತಿ ನೀಡಲಾಗಿದೆ.

# 526 ಕಿ.ಮೀ. ಸಂಚಾರ ಸಾಮರ್ಥ್ಯದ ‘ಸೈರೋಸ್ ಇವಿ’ ಅನಾವರಣ

ನವದೆಹಲಿ

ದೇಶದ ಪ್ರಮುಖ ಮಾಸ್–ಪ್ರೀಮಿಯಂ ವಾಹನ ತಯಾರಕರಲ್ಲಿ ಒಂದಾದ ಕಿಯಾ ಇಂಡಿಯಾ ತನ್ನ ಎರಡನೇ ಮಾಸ್–ಮಾರ್ಕೆಟ್ ಎಲೆಕ್ಟ್ರಿಕ್ ಎಸ್‌ಯುವಿಯಾದ ‘ಸೈರೋಸ್ ಇವಿ’ಯನ್ನು ಅಧಿಕೃತವಾಗಿ ಅನಾವರಣಗೊಳಿಸಿದೆ. ಇದೇ ವೇಳೆ, ಕಂಪನಿಯ ಅಧಿಕೃತ ವೆಬ್‌ಸೈಟ್ ಹಾಗೂ ದೇಶಾದ್ಯಂತದ ಡೀಲರ್‌ಶಿಪ್‌ಗಳ ಮೂಲಕ ರೂ 25,000 ಮುಂಗಡ ಪಾವತಿಯೊಂದಿಗೆ ಪೂರ್ವ ಬುಕ್ಕಿಂಗ್ ಆರಂಭಿಸಲಾಗಿದೆ.

ಹೊಸ ಸೈರೋಸ್ ಇವಿ 526 ಕಿಲೋಮೀಟರ್‌ಗಳ ಎಆರ್‌ಎಐ ಪ್ರಮಾಣೀಕೃತ ಗರಿಷ್ಠ ಸಂಚಾರ ಸಾಮರ್ಥ್ಯ ಹೊಂದಿದ್ದು, ತನ್ನ ವಿಭಾಗದಲ್ಲಿ 500 ಕಿಲೋಮೀಟರ್‌ಗಳ ಗಡಿಯನ್ನು ದಾಟಿದ ಮೊದಲ ಎಲೆಕ್ಟ್ರಿಕ್ ವಾಹನ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಎಲೆಕ್ಟ್ರಿಕ್ ವಾಹನಗಳ ಬಳಕೆಯಲ್ಲಿ ಗ್ರಾಹಕರಿಗೆ ಎದುರಾಗುವ ಪ್ರಮುಖ ಆತಂಕಗಳನ್ನು ನಿವಾರಿಸುವ ಉದ್ದೇಶದಿಂದ ಕಂಪನಿಯು ಈ ವಾಹನದೊಂದಿಗೆ ವಿಶೇಷ ಮಾಲೀಕತ್ವ ಪ್ಯಾಕೇಜ್‌ಗಳನ್ನು ಪರಿಚಯಿಸಿದೆ. ಇದರಲ್ಲಿ ಜೀವಮಾನದ ಹೈ–ವೋಲ್ಟೇಜ್ ಬ್ಯಾಟರಿ



ವಾರಂಟಿ, ಖಾತರಿಯ ಮರುಖರೀದಿ ಯೋಜನೆ ಹಾಗೂ ಬ್ಯಾಟರಿ–ಆಸ್–ಎ–ಸರ್ವಿಸ್ (ಬಿಎಎಎಸ್) ಹಣಕಾಸು ಸೌಲಭ್ಯಗಳು ಸೇರಿವೆ.

ಭಾರತದಲ್ಲಿ ಎಲೆಕ್ಟ್ರಿಕ್ ವಾಹನಗಳ ಬೇಡಿಕೆ ವೇಗವಾಗಿ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಸೈರೋಸ್ ಇವಿ ಬಿಡುಗಡೆ ಕಿಯಾ ಇಂಡಿಯಾದ ವಿದ್ಯುತ್ ವಾಹನ ವಲಯದ ವಿಸ್ತರಣೆಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ.

## ಕ್ಯೂಬ್ ಹೈವೇಸ್ ಟ್ರಸ್ಟ್ ಐಪಿಒಗೆ ಬೆಲೆ ಪಟ್ಟಿ ಪ್ರಕಟ

ನವದೆಹಲಿ

ಕ್ಯೂಬ್ ಹೈವೇಸ್ ಫಂಡ್ ಅಡ್ವೈಸರ್ಸ್ ಪ್ರೈವೇಟ್ ಲಿಮಿಟೆಡ್ ನಿರ್ವಹಣೆಯಲ್ಲಿರುವ ಕ್ಯೂಬ್ ಹೈವೇಸ್ ಟ್ರಸ್ಟ್ ತನ್ನ ಆರಂಭಿಕ ಸಾರ್ವಜನಿಕ ಕೊಡುಗೆ (ಐಪಿಒ)ಗೆ ಬೆಲೆ ಪಟ್ಟಿಯನ್ನು ಪ್ರಕಟಿಸಿದೆ. ಈ ಮೂಲಕ ಇದುವರೆಗೆ ಖಾಸಗಿಯಾಗಿ ವಹಿವಾಟು ನಡೆಸುತ್ತಿದ್ದ ಮೂಲಸೌಕರ್ಯ ಹೂಡಿಕೆ ಟ್ರಸ್ಟ್ (ಇನ್ವಿಟ್) ಸಾರ್ವಜನಿಕವಾಗಿ ವಹಿವಾಟು ನಡೆಸುವ ಸಂಸ್ಥೆಯಾಗಿ ಪರಿವರ್ತನೆಯಾಗುತ್ತಿದೆ.

ಕಂಪನಿಯು ಪ್ರತಿ ಯೂನಿಟ್‌ಗೆ ರೂ.151 ರಿಂದ ರೂ.152ರವರೆಗೆ ಬೆಲೆ ನಿಗದಿಪಡಿಸಿದೆ. ಈ ಸಾರ್ವಜನಿಕ ಕೊಡುಗೆಯ ಮೂಲಕ ಗರಿಷ್ಠ ರೂ.5,000 ಕೋಟಿ ಸಂಗ್ರಹಿಸುವ ಗುರಿಯನ್ನು ಟ್ರಸ್ಟ್ ಹೊಂದಿದೆ.

ಐಪಿಒಗೆ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಜುಲೈ 22ರಂದು ಆರಂಭವಾಗಿ ಜುಲೈ 24ರಂದು ಮುಕ್ತಾಯವಾಗಲಿದೆ. ಸಾಂಸ್ಥಿಕ ಹೂಡಿಕೆದಾರರು ಹಾಗೂ ದೀರ್ಘಾವಧಿಯ ಕಾರ್ಯತಂತ್ರದ ಹೂಡಿಕೆದಾರರನ್ನು ಹೊರತುಪಡಿಸಿ, ಇತರ ಹೂಡಿಕೆದಾರರು ಕನಿಷ್ಠ 95 ಯೂನಿಟ್‌ಗಳಿಗೆ ಹಾಗೂ ನಂತರ 95 ಯೂನಿಟ್‌ಗಳ ಗುಣಕಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಇದಕ್ಕೂ ಮುನ್ನ, ಜುಲೈ 13ರಂದು ಟ್ರಸ್ಟ್ ಕಾರ್ಯತಂತ್ರದ ಹೂಡಿಕೆದಾರರೊಂದಿಗೆ ಯೂನಿಟ್ ಚಂದಾದಾರಿಕೆ ಒಪ್ಪಂದಗಳನ್ನು ಮಾಡಿಕೊಂಡಿದೆ. ಈ ಒಪ್ಪಂದದಡಿ ದೀರ್ಘಾವಧಿಯ ಕಾರ್ಯತಂತ್ರದ ಹೂಡಿಕೆದಾರರು ಪ್ರತಿ ಯೂನಿಟ್‌ಗೆ ರೂ.152 ದರದಲ್ಲಿ 8,22,36,840 ಯೂನಿಟ್‌ಗಳನ್ನು ಖರೀದಿಸಲು ಒಪ್ಪಿಕೊಂಡಿದ್ದಾರೆ. ಇದರ ಒಟ್ಟು ಮೌಲ್ಯ ರೂ.1,250 ಕೋಟಿ ಆಗಿದ್ದು, ಇದು ಸಾರ್ವಜನಿಕ ಕೊಡುಗೆಯ ನಿಯಮಗಳು ಮತ್ತು ಷರತ್ತುಗಳಿಗೆ ಒಳಪಟ್ಟಿರುತ್ತದೆ. ದೇಶದ ಮೂಲಸೌಕರ್ಯ ಕ್ಷೇತ್ರದಲ್ಲಿ ಹೂಡಿಕೆ ಅವಕಾಶಗಳನ್ನು ವಿಸ್ತರಿಸುವ ಉದ್ದೇಶದಿಂದ ಸಾರ್ವಜನಿಕ ಮಾರುಕಟ್ಟೆಗೆ ಪ್ರವೇಶಿಸುತ್ತಿರುವ ಕ್ಯೂಬ್ ಹೈವೇಸ್ ಟ್ರಸ್ಟ್‌ನ ಈ ಐಪಿಒ ಹೂಡಿಕೆದಾರರ ಗಮನ ಸೆಳೆದಿದ್ದು, ರಸ್ತೆ ಮತ್ತು ಹೆದ್ದಾರಿ ಮೂಲಸೌಕರ್ಯ ವಲಯದಲ್ಲಿ ಹೂಡಿಕೆ ಮಾಡಲು ಬಯಸುವವರಿಗೆ ಹೊಸ ಅವಕಾಶ ಕಲ್ಪಿಸಲಿದೆ.

## ಸಾಮಾಜಿಕ ಉದ್ಯಮಿ ಆಫ್ ದಿ ಇಯರ್–2026: ಐವರು ಅಂತಿಮ ಸ್ಪರ್ಧಿಗಳ ಘೋಷಣೆ

ನೋಯ್ಡಾ

ಜುಬಿಲೆಂಟ್ ಭಾರತಿಯಾ ಫೌಂಡೇಶನ್ (ಜೆಬಿಎಫ್) ಹಾಗೂ ಶ್ವಾಬ್ ಫೌಂಡೇಶನ್ ಫಾರ್ ಸೋಶಿಯಲ್ ಎಂಟ್ರಪ್ರೆನರ್‌ಶಿಪ್ ಸಹಯೋಗದಲ್ಲಿ ನೀಡಲಾಗುವ ಪ್ರತಿಷ್ಠಿತ 17ನೇ ‘ಸೋಶಿಯಲ್ ಎಂಟ್ರಪ್ರೆನರ್ ಆಫ್ ದಿ ಇಯರ್ ಇಂಡಿಯಾ–2026’ ಪ್ರಶಸ್ತಿಗೆ ಐವರು ಅಂತಿಮ ಸ್ಪರ್ಧಿಗಳನ್ನು ಘೋಷಿಸಲಾಗಿದೆ.

2009ರಿಂದ ನೀಡಲಾಗುತ್ತಿರುವ ಈ ಪ್ರಶಸ್ತಿಯು ಸಮಾಜದಲ್ಲಿ ಪರಿಣಾಮಕಾರಿ ಬದಲಾವಣೆ ತರುತ್ತಿರುವ ಸಾಮಾಜಿಕ ಉದ್ಯಮಿಗಳನ್ನು ಗುರುತಿಸಿ ಗೌರವಿಸುವ ಭಾರತದ ಪ್ರಮುಖ ವೇದಿಕೆಯಾಗಿದೆ.

SCHWAB FOUNDATION FOR SOCIAL ENTREPRENEURSHIP

ಈ ಬಾರಿ ದೇಶದ ವಿವಿಧ ಭಾಗಗಳಿಂದ ಒಟ್ಟು 208 ಅರ್ಜಿಗಳು ಸಲ್ಲಿಕೆಯಾಗಿದ್ದು, ಅವುಗಳಲ್ಲಿ ಸುಮಾರು ಶೇ.70ರಷ್ಟು ಮೊದಲ ಬಾರಿಗೆ ಸ್ಪರ್ಧೆಯಲ್ಲಿ ಭಾಗವಹಿಸಿದ್ದವು.

ಸಾಮಾಜಿಕ ಪರಿಣಾಮ, ನವೀನತೆ, ವಿಸ್ತರಣಾ ಸಾಮರ್ಥ್ಯ ಹಾಗೂ ಸುಸ್ಥಿರತೆಯ ಮಾನದಂಡಗಳ ಆಧಾರದ ಮೇಲೆ ಐವರು ಅಂತಿಮ ಹಂತಕ್ಕೆ ಆಯ್ಕೆಯಾಗಿದ್ದಾರೆ.

ಡಾ. ನೇಹಾ ವರ್ಮಾ (ಮಹಾರಾಷ್ಟ್ರ) – ಇಂಟೆಲ್ಹೆಲ್ತ್ ಸಂಸ್ಥೆಯ ಮೂಲಕ ಕೃತಕ ಬುದ್ಧಿಮತ್ತೆ ಆಧಾರಿತ ಟೆಲಿಮೆಡಿಸಿನ್ ಸೇವೆಯನ್ನು ಗ್ರಾಮೀಣ ಪ್ರದೇಶಗಳಿಗೆ ತಲುಪಿಸುತ್ತಿದ್ದಾರೆ. ನಿಧಿ ಪಂತ್ (ಮಹಾರಾಷ್ಟ್ರ) – ಎಸ್4ಎಸ್ ಟೆಕ್ನಾಲಜೀಸ್ ಮೂಲಕ ಸೌರಶಕ್ತಿ ಆಧಾರಿತ ಆಹಾರ ಸಂಸ್ಕರಣೆಗೆ ಉತ್ತೇಜನ ನೀಡಿ ಮಹಿಳಾ ರೈತರ ಸಬಲೀಕರಣಕ್ಕೆ ಕೊಡುಗೆ ನೀಡುತ್ತಿದ್ದಾರೆ.

ನುನೆಸೆನೊ ಚೇಸ್ (ನಾಗಾಲ್ಯಾಂಡ್) – ಯೂತ್‌ನೆಟ್ ಸಂಸ್ಥೆಯ ಮೂಲಕ ಶಿಕ್ಷಣ, ಉದ್ಯೋಗ ಹಾಗೂ ಯುವ ಉದ್ಯಮಶೀಲತೆಯನ್ನು ಉತ್ತೇಜಿಸುತ್ತಿದ್ದಾರೆ.

ವಿನಯ್ ಕುಮಾರ್ ರೆಡ್ಡಿ ವದ್ದೆ (ತೆಲಂಗಾಣ) – ಸಿಕಲ್ ಇನೋವೇಷನ್ಸ್ ಮೂಲಕ ಕೃಷಿ ಉತ್ಪಾದಕತೆ ಹೆಚ್ಚಿಸುವ ತಂತ್ರಜ್ಞಾನಗಳನ್ನು ಅಭಿವೃದ್ಧಿ ಪಡಿಸುತ್ತಿದ್ದಾರೆ.

## ಸೌತ್ ಇಂಡಿಯನ್ ಬ್ಯಾಂಕ್‌ಗೆ ಭರ್ಜರಿ ಲಾಭ

ಬೆಂಗಳೂರು

ಪ್ರಮುಖ ಖಾಸಗಿ ವಲಯದ ಬ್ಯಾಂಕಿಂಗ್ ಸಂಸ್ಥೆಯಾದ ಸೌತ್ ಇಂಡಿಯನ್ ಬ್ಯಾಂಕ್ 2026–27ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಉತ್ತಮ ಹಣಕಾಸು ಸಾಧನೆ ದಾಖಲಿಸಿದೆ. ಜೂನ್ 30ಕ್ಕೆ ಅಂತ್ಯಗೊಂಡ ತ್ರೈಮಾಸಿಕದಲ್ಲಿ ಬ್ಯಾಂಕ್ ರೂ. 377.63 ಕೋಟಿ ನಿವ್ವಳ ಲಾಭ ಗಳಿಸಿದ್ದು, ವಿವಿಧ ವ್ಯವಹಾರ ವಲಯಗಳಲ್ಲಿ ಗಮನಾರ್ಹ ಬೆಳವಣಿಗೆಯನ್ನು ದಾಖಲಿಸಿದೆ.

ಬ್ಯಾಂಕಿನ ಒಟ್ಟು ಮುಂಗಡಗಳು ವಾರ್ಷಿಕ ಆಧಾರದ ಮೇಲೆ 17.01 ಶೇಕಡಾ ಏರಿಕೆಯಾಗಿ ರೂ. 1,04,368 ಕೋಟಿ ತಲುಪಿವೆ. ಚಿಲ್ಲರೆ ಸಾಲ, ವಾಹನ ಸಾಲ ಮತ್ತು ವಿಶೇಷವಾಗಿ ಚಿನ್ನದ ಸಾಲ ವಿಭಾಗದಲ್ಲಿ ಗಮನಾರ್ಹ ವೃದ್ಧಿ ಕಂಡುಬಂದಿದ್ದು, ಚಿನ್ನದ ಸಾಲ ಪೋರ್ಟ್ಫೋಲಿಯೊ 42.90 ಶೇಕಡಾ ಏರಿಕೆಯೊಂದಿಗೆ ರೂ. 24,930 ಕೋಟಿ ತಲುಪಿದೆ. ಅಡಮಾನ ಸಾಲ ವಿಭಾಗದಲ್ಲಿಯೂ 78.65 ಶೇಕಡಾ ಭಾರೀ ಬೆಳವಣಿಗೆ ದಾಖಲಾಗಿದೆ.

ಬ್ಯಾಂಕಿನ ದೊಡ್ಡ ಕಾರ್ಪೊರೇಟ್ ಸಾಲಗಳಲ್ಲಿ 98.81 ಶೇಕಡಾ ಸಾಲಗಳು ‘ಎ’ ಮತ್ತು ಅದಕ್ಕಿಂತ ಹೆಚ್ಚಿನ ರೇಟಿಂಗ್ ಹೊಂದಿರುವುದು ಬ್ಯಾಂಕಿನ ಸಾಲದ ಗುಣಮಟ್ಟವನ್ನು ಪ್ರತಿಬಿಂಬಿಸುತ್ತದೆ.

ಠೇವಣಿ ಸಂಗ್ರಹದಲ್ಲಿಯೂ ಬ್ಯಾಂಕ್ ಉತ್ತಮ ಸಾಧನೆ ಮಾಡಿದೆ. ಚಿಲ್ಲರೆ ಠೇವಣಿಗಳು 13.66 ಶೇಕಡಾ ಹೆಚ್ಚಳದೊಂದಿಗೆ ರೂ. 1,24,306 ಕೋಟಿ ತಲುಪಿವೆ. ಅನಿವಾಸಿ ಭಾರತೀಯರ ಠೇವಣಿಗಳು 12.82 ಶೇಕಡಾ ಏರಿಕೆಯಾಗಿ ರೂ. 36,432 ಕೋಟಿ ತಲುಪಿವೆ. ಬ್ಯಾಂಕಿನ ಕಾಸಾ ಠೇವಣಿಗಳು 14.61 ಶೇಕಡಾ ಹೆಚ್ಚಳ ಕಂಡಿದ್ದು, ಉಳಿತಾಯ ಖಾತೆ ಠೇವಣಿಗಳು 16.51 ಶೇಕಡಾ ಏರಿಕೆ ದಾಖಲಿಸಿವೆ.

ಆಸ್ತಿ ಗುಣಮಟ್ಟದಲ್ಲೂ ಬ್ಯಾಂಕ್ ಮಹತ್ವದ ಸುಧಾರಣೆ ಸಾಧಿಸಿದೆ. ಒಟ್ಟು ಸುಸ್ತಿ ಸಾಲದ ಪ್ರಮಾಣ (ಗ್ರಾಸ್ ಎನ್‌ಪಿಎ) ಕಳೆದ ವರ್ಷದ 3.15 ಶೇಕಡಾದಿಂದ 1.38 ಶೇಕಡಾಕ್ಕೆ ಇಳಿದಿದೆ. ನಿವ್ವಳ ಸುಸ್ತಿ ಸಾಲದ ಪ್ರಮಾಣ (ನೆಟ್ ಎನ್‌ಪಿಎ) 0.26 ಶೇಕಡಾಕ್ಕೆ ಕುಸಿದಿರುವುದು ಬ್ಯಾಂಕಿನ ಪರಿಣಾಮಕಾರಿ ಸಾಲ ನಿರ್ವಹಣೆಯನ್ನು ತೋರಿಸುತ್ತದೆ.

ಬ್ಯಾಂಕಿನ ನಿವ್ವಳ ಬಡ್ಡಿ ಆದಾಯ 23.05 ಶೇಕಡಾ ಹೆಚ್ಚಳ ಕಂಡು ರೂ. 1,025 ಕೋಟಿ ತಲುಪಿದೆ. ಸುರಕ್ಷಿತ ಹಾಗೂ ಕಡಿಮೆ ಅಪಾಯದ ಸಾಲ ವಲಯಗಳಿಗೆ ಆದ್ಯತೆ ನೀಡಿ ಗುಣಮಟ್ಟದ ಸಾಲ ವಿಸ್ತರಣೆ ಮೂಲಕ ಲಾಭದಾಯಕತೆಯನ್ನು ಕಾಯ್ದುಕೊಳ್ಳುವ ತಂತ್ರವನ್ನು ಬ್ಯಾಂಕ್ ಮುಂದುವರಿಸಿದೆ ಎಂದು ಆಡಳಿತ ಮಂಡಳಿ ತಿಳಿಸಿದೆ.

ಈ ಹಣಕಾಸು ಫಲಿತಾಂಶಗಳಲ್ಲಿ ಬ್ಯಾಂಕಿನ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾದ ಎಸ್‌ಐಬಿಒಎಸ್‌ಎಲ್ ಸಂಸ್ಥೆಯ ಹಣಕಾಸು ಸಾಧನೆಯೂ ಒಳಗೊಂಡಿದೆ.

## ಎಐ ಯುಗಕ್ಕೆ ಶಿಕ್ಷಣ ಸಜ್ಜುಗೊಳಿಸುವ ಸಂಕಲ್ಪ

ಬೆಂಗಳೂರು

ಕೃತಕ ಬುದ್ಧಿಮತ್ತೆ (ಎಐ) ಯುಗದಲ್ಲಿ ಶಾಲಾ ಶಿಕ್ಷಣವನ್ನು ಭವಿಷ್ಯದ ಅಗತ್ಯಗಳಿಗೆ ಅನುಗುಣವಾಗಿ ರೂಪಿಸುವ ಉದ್ದೇಶದಿಂದ ದೀಕ್ಷಾ ವೇದಾಂತು ಆಯೋಜಿಸಿದ್ದ ‘ಶಿಕ್ಷಣವಿಷನ್–2026’ ನಾಯಕತ್ವ ಸಮಾವೇಶವು ಬೆಂಗಳೂರಿನಲ್ಲಿ ಯಶಸ್ವಿಯಾಗಿ ನಡೆಯಿತು. ನಗರದ ಚಾನ್ಸರಿ ಪೆವಿಲಿಯನ್‌ನಲ್ಲಿ ನಡೆದ ಈ ಸಮಾವೇಶದಲ್ಲಿ 100ಕ್ಕೂ ಹೆಚ್ಚು ಶಾಲಾ ಪ್ರಾಂಶುಪಾಲರು ಹಾಗೂ ಶಿಕ್ಷಣ ಕ್ಷೇತ್ರದ ನಾಯಕರು ಭಾಗವಹಿಸಿ, ಕೆ–12 ಶಿಕ್ಷಣದ ಭವಿಷ್ಯಕ್ಕಾಗಿ ಹತ್ತು ಅಂಶಗಳ ಕ್ರಿಯಾ ಕಾರ್ಯಸೂಚಿಯನ್ನು ಒಳಗೊಂಡ ಶಿಕ್ಷಣವಿಷನ್ ಸಮಾವೇಶ ನಿರ್ಣಯವನ್ನು ಅಂಗೀಕರಿಸಿದರು.



“ಇಂದು ನಾಳೆಯ ಶಾಲೆಗಳನ್ನು ರೂಪಿಸುವುದು” ಎಂಬ ಧ್ಯೇಯದಡಿ ನಡೆದ ದಿನಪೂರ್ತಿ ಸಮಾವೇಶದಲ್ಲಿ 15ಕ್ಕೂ ಹೆಚ್ಚು ಶಿಕ್ಷಣ ತಜ್ಞರು ಪ್ರಮುಖ ಭಾಷಣಗಳನ್ನು ನೀಡಿದರು. ಜೊತೆಗೆ 12 ದುಂಡುಮೇಜಿನ ಚರ್ಚೆಗಳು, ಫಲಕ ಸಂವಾದಗಳು ಹಾಗೂ ವಿಚಾರ ವಿನಿಮಯ ಅಧಿವೇಶನಗಳ ಮೂಲಕ ಎಐ ಯುಗದಲ್ಲಿ ಶಾಲಾ ಶಿಕ್ಷಣದ ಅವಕಾಶಗಳು ಮತ್ತು ಸವಾಲುಗಳ ಕುರಿತು ವ್ಯಾಪಕ ಚರ್ಚೆ ನಡೆಯಿತು. ಸಮಾವೇಶವನ್ನು ಉದ್ಘಾಟಿಸಿದ ದೀಕ್ಷಾ ವೇದಾಂತು ಸಂಸ್ಥಾಪಕ ಡಾ. ಶ್ರೀಧರ್ ಜಿ., “ಭಾರತದಲ್ಲಿ ಕೆ–12 ಶಿಕ್ಷಣದ ಭವಿಷ್ಯ” ವಿಷಯದ ಕುರಿತು ಮಾತನಾಡಿ, ದೇಶದಲ್ಲಿ ಶಾಲಾ ದಾಖಲಾತಿ ಪ್ರಮಾಣ ಹೆಚ್ಚಾಗಿದ್ದರೂ, ಮಕ್ಕಳಲ್ಲಿ ಕಲಿಕೆಯ ಗುಣಮಟ್ಟ, ವಿಮರ್ಶಾತ್ಮಕ ಚಿಂತನೆ ಹಾಗೂ ಭವಿಷ್ಯದ ಸವಾಲುಗಳನ್ನು ಎದುರಿಸುವ ಸಾಮರ್ಥ್ಯ ಬೆಳೆಸುವುದು ಇನ್ನೂ ಪ್ರಮುಖ ಸವಾಲಾಗಿ ಉಳಿದಿದೆ ಎಂದು ಅಭಿಪ್ರಾಯಪಟ್ಟರು.

“ಸರಿಯಾದ ಉತ್ತರವನ್ನು ನೀಡುವ ಶಿಕ್ಷಣ ವ್ಯವಸ್ಥೆಯನ್ನು ನಿರ್ಮಿಸಲು ನಾವು ದಶಕಗಳನ್ನು ಕಳೆದಿದ್ದೇವೆ. ಆದರೆ ಕೃತಕ ಬುದ್ಧಿಮತ್ತೆಯ ಯುಗದಲ್ಲಿ ಕೇವಲ ಉತ್ತರ ತಿಳಿದಿರುವುದು ಸಾಕಾಗುವುದಿಲ್ಲ. ವಿದ್ಯಾರ್ಥಿಗಳು ಆಲೋಚಿಸುವ, ಪ್ರಶ್ನಿಸುವ ಮತ್ತು ಹೊಸತನವನ್ನು ಸೃಷ್ಟಿಸುವ ಸಾಮರ್ಥ್ಯ ಹೊಂದಿರಬೇಕು,” ಎಂದು ಅವರು ಹೇಳಿದರು. “ನಿಮ್ಮ ಶಾಲೆ ಎಐ–ಸಿದ್ಧವಾಗಿದೆಯೇ? ಬೋಧನೆ, ಕಲಿಕೆ ಮತ್ತು ಮೌಲ್ಯಮಾಪನವನ್ನು ಪುನರ್ವಿಮರ್ಶಿಸುವುದು” ವಿಷಯದ ಮೊದಲ ಫಲಕ ಚರ್ಚೆಯಲ್ಲಿ, ಶಿಕ್ಷಣದ ಮಾನವೀಯ ಮೌಲ್ಯಗಳನ್ನು ಕಾಪಾಡಿಕೊಂಡೇ ಎಐ ತಂತ್ರಜ್ಞಾನವನ್ನು ಶಾಲಾ ಶಿಕ್ಷಣದಲ್ಲಿ ಜವಾಬ್ದಾರಿಯುತವಾಗಿ ಅಳವಡಿಸುವ ಕುರಿತು ತಜ್ಞರು ಅಭಿಪ್ರಾಯ ಹಂಚಿಕೊಂಡರು.

## ಬೃಹತ್ ಉಚಿತ ಆರೋಗ್ಯ, ಯೋಗ–ಆಯುರ್ವೇದ ಶಿಬಿರ

ವಿಜಯಪುರ

ಸಾರ್ವಜನಿಕರ ಆರೋಗ್ಯ ಕಾಳಜಿಗೆ ಆದ್ಯತೆ ನೀಡುವ ಉದ್ದೇಶದಿಂದ ಪ್ರಜಾಪಿತ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ ಹಾಗೂ ಲ್ಯಾಂಡ್ ಮಾರ್ಕ್ ಫೌಂಡೇಶನ್ ಸಹಯೋಗದಲ್ಲಿ ಜುಲೈ 19ರಂದು ಬೃಹತ್ ಉಚಿತ ಆರೋಗ್ಯ ಮತ್ತು ಯೋಗ–ಆಯುರ್ವೇದ ಶಿಬಿರವನ್ನು ಆಯೋಜಿಸಲಾಗಿದೆ.

ಭಾನುವಾರ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಬಸವೇಶ್ವರನಗರದ 1ನೇ ಮುಖ್ಯರಸ್ತೆಯ ಶಿವಶಕ್ತಿ ಭವನದಲ್ಲಿರುವ ಪ್ರಜಾಪಿತ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯದ ಆವರಣದಲ್ಲಿ ಶಿಬಿರ ನಡೆಯಲಿದೆ.

ಶಿಬಿರದಲ್ಲಿ ಸಾರ್ವಜನಿಕರಿಗೆ ಉಚಿತವಾಗಿ ರಕ್ತದೊತ್ತಡ (ಬಿಪಿ), ರಕ್ತದಲ್ಲಿನ ಸಕ್ಕರೆ (ಶುಗರ್) ಪರೀಕ್ಷೆ, ಮಹಿಳೆಯರಿಗೆ ಹಿಮೋಗ್ಲೋಬಿನ್ ತಪಾಸಣೆ ಹಾಗೂ ಹತ್ತಿರದ ದೃಷ್ಟಿದೋಷ ಇರುವವರಿಗೆ ಉಚಿತ ಕನ್ನಡಕ ವಿತರಣೆ ಮಾಡಲಾಗುತ್ತದೆ.

ಇದರೊಂದಿಗೆ ದೈಹಿಕ ಕ್ಷಮತೆ ಮತ್ತು ಆರೋಗ್ಯ ಸುಧಾರಣೆ ಕುರಿತು ತಜ್ಞರಿಂದ ಸಲಹೆ, ಆಯುರ್ವೇದ ತಜ್ಞರಿಂದ ಆರೋಗ್ಯ ಸಮಾಲೋಚನೆ, ಫಿಜಿಯೋಥೆರಪಿಸ್ಟ್‌ಗಳಿಂದ ಮಂಡಿನೋವು ಸೇರಿದಂತೆ ವಿವಿಧ ದೈಹಿಕ ಸಮಸ್ಯೆಗಳ ಕುರಿತು ಮಾರ್ಗದರ್ಶನ ಹಾಗೂ ಚಿಕಿತ್ಸೆ ಸಲಹೆ ನೀಡಲಾಗುತ್ತದೆ. ರಾಜಯೋಗ ಧ್ಯಾನದ ಅನುಭವಕ್ಕೂ ಅವಕಾಶ ಕಲ್ಪಿಸಲಾಗಿದೆ.

“ಆರೋಗ್ಯವೇ ನಿಜವಾದ ಸಂಪತ್ತು” ಎಂಬ ಧ್ಯೇಯದೊಂದಿಗೆ ಆಯೋಜಿಸಿರುವ ಈ ಉಚಿತ ಆರೋಗ್ಯ ಶಿಬಿರದ ಪ್ರಯೋಜನವನ್ನು ಸಾರ್ವಜನಿಕರು ಹಾಗೂ ತಮ್ಮ ಕುಟುಂಬದ ಸದಸ್ಯರು ಪಡೆದುಕೊಳ್ಳುವಂತೆ ಸಂಘಟಕರು ಮನವಿ ಮಾಡಿದ್ದಾರೆ.

ಶಿಬಿರಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ಪ್ರಜಾಪಿತ ಬ್ರಹ್ಮಕುಮಾರೀಸ್ ಈಶ್ವರೀಯ ವಿಶ್ವವಿದ್ಯಾಲಯ, ಬಸವೇಶ್ವರನಗರ, ವಿಜಯಪುರವನ್ನು ಸಂಪರ್ಕಿಸಬಹುದಾಗಿದೆ.

# ಮನೆ ಕಟ್ಟಡವನ್ನು ಪೂರ್ಣಗೊಳಿಸಲು ಸೂಚನೆ

ರಾಮನಗರ

ರಾಮನಗರ ನಗರಸಭೆಯ 2010–11ನೇ ಸಾಲಿನಿಂದ 2021–22ನೇ ಸಾಲಿನವರೆಗೆ ರಾಜ್ಯ ಪುರಸ್ಕೃತ ಯೋಜನೆಗಳಾದ ವಾಜಪೇಯಿ ನಗರ ವಸತಿ ಯೋಜನೆ ಮತ್ತು ಡಾ. ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ (ನಗರ), ಪೌರ ಕಾರ್ಮಿಕರ ಗೃಹಭಾಗ್ಯ ಯೋಜನೆ ಹಾಗೂ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಆವಾಜ್ ಯೋಜನೆಯಡಿ ವಿವಿಧ ಹಂತಗಳಲ್ಲಿ ಮನೆಯ ಕಟ್ಟಡವನ್ನು ಸ್ಥಗಿತಗೊಳಿಸಿರುವ ಫಲಾನುಭವಿಗಳು ಮನೆಯ ಕಟ್ಟಡವನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಅವಾಜ್ ಯೋಜನೆಯಡಿ ಈಗಾಗಲೇ ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸುವ ಉದ್ದೇಶದಿಂದ ಅಭಿಯಾನದ ಅವಧಿಯನ್ನು 2025ರ ನವೆಂಬರ್ 31 ರಿಂದ 2026ರ ಸೆಪ್ಟೆಂಬರ್ 30ರ ವರೆಗೆ ವಿಸ್ತರಿಸಲಾಗಿದ್ದು, ಇದು ಅಂತಿಮ ಕಾಲಾವಕಾಶ ನೀಡಲಾಗಿದೆ. ಕಾರಣ ಮನೆ ನಿರ್ಮಾಣ ಕಾರ್ಯವು 2026ರ ಸೆಪ್ಟೆಂಬರ್ 30ರೊಳಗೆ ಪೂರ್ಣಗೊಳ್ಳದಿದ್ದಲ್ಲಿ ಕೇಂದ್ರ ಸರ್ಕಾರದಿಂದ ಯಾವುದೇ ಬಾಕಿ ಅನುದಾನ ಬಿಡುಗಡೆ ಮಾಡಲಾಗುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಿರುತ್ತಾರೆ.

ಕಾರಣ ಎಲ್ಲಾ ಯೋಜನೆಗಳ ಮನೆ ಕಟ್ಟಡ ನಿರ್ಮಾಣ ಕಾರ್ಯವನ್ನು ಸೆಪ್ಟೆಂಬರ್–2026ರ ಅಂತ್ಯದೊಳಗೆ ಪೂರ್ಣಗೊಳಿಸಲು ಸಾರ್ವಜನಿಕ ಪ್ರಕಟಣೆ ಹೊರಡಿಸಲಾಗಿರುತ್ತದೆ.

ಅಲ್ಲದೆ ನೋಟಿಸ್ ಜಾರಿ ಮಾಡುವ ಸಂದರ್ಭದಲ್ಲಿ ಪ್ರಸ್ತುತ ವಿಳಾಸದಲ್ಲಿ ಇಲ್ಲದೆ ಇರುವ ಕಾರಣ ನೋಟಿಸ್ ಜಾರಿ ಮಾಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಹೆಚ್ಚಿನ ಮಾಹಿತಿಗಾಗಿ ರಾಮನಗರ ನಗರಸಭೆಯ ವಸತಿ ಯೋಜನೆ ವಿಷಯ ನಿರ್ವಾಹಕರನ್ನು ಸಂಪರ್ಕಿಸಿ ಲಿಖಿತವಾಗಿ ಉತ್ತರ ನೀಡಬೇಕು. ತಪ್ಪಿದ್ದಲ್ಲಿ ಮುಂದಿನ ಆಗು–ಹೋಗುಗಳಿಗೆ ಹೊಣೆಗಾರರಾಗಿರುತ್ತೀರಿ ಎಂಬ ಅಂಶವನ್ನು ಮತ್ತೊಮ್ಮೆ ತಿಳಿಸಲಾಗಿದೆ ಎಂದು ರಾಮನಗರ ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಡಿಕೆ ಖರೀದಿ ಕೇಂದ್ರ ಆರಂಭ

ತಿಪಟೂರು

ರೈತರ ಉತ್ಪನ್ನಗಳಿಗೆ ಗುಣಮಟ್ಟದ ಮಾರುಕಟ್ಟೆ ಒದಗಿಸುವುದು ಸರ್ಕಾರದ ಆದ್ಯತೆಯಾಗಿದ್ದು, ರಾಸಾಯನಿಕ ಮುಕ್ತ ಅಡಿಕೆ ಉತ್ಪಾದನೆ ಮತ್ತು ಮಾರಾಟಕ್ಕೆ ಹೆಚ್ಚಿನ ಉತ್ತೇಜನ ನೀಡಲಾಗುತ್ತಿದೆ ಎಂದು ಶಾಸಕ ಕೆ.ಷಡಕ್ಷರಿ ಹೇಳಿದರು.

ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿ ಕ್ಯಾಂಪ್ಕೊ ವತಿಯಿಂದ ಆರಂಭಿಸಲಾದ ಅಡಿಕೆ ಖರೀದಿ ಕೇಂದ್ರವನ್ನು ಉದ್ಘಾಟಿಸಿ ಹಾಗೂ ಸದಸ್ಯ ಬೆಳೆಗಾರರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ರೈತರ ಹಿತದೃಷ್ಟಿಯಿಂದ ಸ್ಥಗಿತಗೊಂಡಿದ್ದ ಹಲವು ಕೃಷಿ ಮಾರುಕಟ್ಟೆ ಚಟುವಟಿಕೆಗಳನ್ನು ಪುನರುಜ್ಜೀವನಗೊಳಿಸಲಾಗುತ್ತಿದೆ ಎಂದರು.

ತಿಪಟೂರು ಎಪಿಎಂಸಿ ಈ ಹಿಂದೆ ತೆಂಗಿನಕಾಯಿ, ಬೆಲ್ಲ ಹಾಗೂ ತೆಂಗಿನಕಾಯಿ ಕಡ್ಡಿ ಸೇರಿದಂತೆ ವಿವಿಧ ಕೃಷಿ ಉತ್ಪನ್ನಗಳ ಖರೀದಿ ಮತ್ತು ಮಾರಾಟಕ್ಕೆ ಹೆಸರುವಾಸಿಯಾಗಿತ್ತು. ಇದೀಗ ಅಡಿಕೆ ಖರೀದಿ ಕೇಂದ್ರ ಆರಂಭವಾಗಿರುವುದು ಅಡಿಕೆ ಬೆಳೆಗಾರರಿಗೆ ಮತ್ತಷ್ಟು ಅನುಕೂಲವಾಗಲಿದೆ ಎಂದು ಹೇಳಿದರು.

ರೈತರು ಆರ್ಥಿಕವಾಗಿ ಸದೃಢರಾಗುವ ಜೊತೆಗೆ ಉತ್ತಮ ಶಿಕ್ಷಣ ಹಾಗೂ ಆರೋಗ್ಯ ಸೌಲಭ್ಯಗಳನ್ನು ಪಡೆಯುವ ಉದ್ದೇಶದಿಂದ ಸರ್ಕಾರ ಮತ್ತು ಸಹಕಾರಿ ಸಂಸ್ಥೆಗಳು ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿವೆ. ಕ್ಯಾಂಪ್ಕೊ ಜೊತೆಗೆ ಖಾಸಗಿ ವ್ಯಾಪಾರಿಗಳಿಗೂ ಅಡಿಕೆ ಖರೀದಿ ಮತ್ತು ವ್ಯಾಪಾರಕ್ಕೆ ಅವಕಾಶ ಕಲ್ಪಿಸಲಾಗಿದ್ದು, ಇದರಿಂದ ಸ್ಪರ್ಧಾತ್ಮಕ ಬೆಲೆ ರೂಪುಗೊಂಡು ರೈತರಿಗೆ ಹೆಚ್ಚಿನ ಲಾಭವಾಗಲಿದೆ ಎಂದು ತಿಳಿಸಿದರು.

ಸಹಕಾರ ಕ್ಷೇತ್ರದಲ್ಲಿ ಸುಧಾರಣೆಗಳನ್ನು ತರಲು ಸರ್ಕಾರ ಬದ್ಧವಾಗಿದ್ದು, ಮಾರುಕಟ್ಟೆ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕ್ಯಾಂಪ್ಕೊ ವತಿಯಿಂದ ಪ್ರತಿ ಕೆ.ಜಿ. ಅಡಿಕೆಯನ್ನು 525 ದರದಲ್ಲಿ ಖರೀದಿ ಆರಂಭಿಸಲಾಯಿತು. ಜೊತೆಗೆ ಶಿಕ್ಷಣ ಮತ್ತು ಆರೋಗ್ಯ ನಿಧಿಯಡಿ ಫಲಾನುಭವಿಗಳಿಗೆ ನೆರವು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎಪಿಎಂಸಿ ಆಡಳಿತಾಧಿಕಾರಿ ಬಿ.ಎಲ್. ಕೃಷ್ಣಪ್ಪ, ಕಾರ್ಯದರ್ಶಿ ಎಸ್.ಬಿ. ನ್ಯಾಮೇಗೌಡ, ಕ್ಯಾಂಪ್ಕೊ ಆಡಳಿತ ಮಂಡಳಿ ಅಧ್ಯಕ್ಷ ಸತೀಶ್‌ಚಂದ್ರ, ವ್ಯವಸ್ಥಾಪಕ ನಿರ್ದೇಶಕ ಡಾ. ಬಿ.ವಿ. ಸತ್ಯನಾರಾಯಣ, ನಿರ್ದೇಶಕರಾದ ರಾಧಾಕೃಷ್ಣ ಮಹೇಶ್, ತೀರ್ಥರಾಮ, ವೆಂಕಟರಮಣ, ವಿವೇಕಾನಂದ, ಗಣೇಶ್, ಮಾಲಿನಿ ಪ್ರಸಾದ್, ಸೌಮ್ಯ ಪ್ರಕಾಶ್, ಗಣೇಶ್ ಪರಕಟ್ಟೆ, ಎಪಿಎಂಸಿ ಸಹ ಕಾರ್ಯದರ್ಶಿ ಹನಮಂತರಾಜು, ರಾಮನಾಥಪುರ ಹಾಗೂ ಅರಸೀಕೆರೆ ಘಟಕಗಳ ಅಧಿಕಾರಿಗಳು, ಅಡಿಕೆ ಮತ್ತು ತೆಂಗು ಬೆಳೆಗಾರರು ಉಪಸ್ಥಿತರಿದ್ದರು.

# 17ರಂದು ನೇರ ಸಂದರ್ಶನ

ತುಮಕೂರು

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಕೊಟ್ಯಾಕ್ ಮಹಿಂದ್ರ ಬ್ಯಾಂಕ್ ಹಾಗೂ ಮುತ್ತೂಟ್ ಫಿನ್‌ಕಾರ್ಪ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಸಹಭಾಗಿತ್ವದಲ್ಲಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಸಂಬಂಧ ಜುಲೈ 17ರಂದು ಬೆಳಿಗ್ಗೆ 10 ಗಂಟೆಗೆ ನೇರ ಸಂದರ್ಶನ ನಡೆಯಲಿದೆ.

ಅಸಿಸ್ಟೆಂಟ್ ಮ್ಯಾನೇಜರ್ ಹಾಗೂ ಬ್ಯುಸಿನೆಸ್ ಡೆವಲಪ್‌ಮೆಂಟ್ ಎಕ್ಸಿಕ್ಯೂಟೀವ್ ಹುದ್ದೆಗಳಿಗೆ ಪುರುಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ನೇರಸಂದರ್ಶನ ನಡೆಯಲಿದ್ದು, ಪಿಯುಸಿ ಮತ್ತು ಯಾವುದೇ ಪದವಿ ಪಾಸಾದ ಅಭ್ಯರ್ಥಿಗಳು ನೇರಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ವೇತನ 20,000 ರೂ.ಗಳಿಂದ 29,000 ರೂ.ಗಳವರೆಗೆ ನೀಡಲಾಗುತ್ತದೆ.

ಅರ್ಹ ಅಭ್ಯರ್ಥಿಗಳು ಜುಲೈ 17ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಡಿ.ಡಿ.ಪಿ.ಐ ಬಸ್ ನಿಲ್ದಾಣ, ವಾಸನ್ ಕಣ್ಣಿನ ಆಸ್ಪತ್ರೆ ಹತ್ತಿರ, ಮೂಲೆಮನೆ ಹೋಟಲ್ ಪಕ್ಕ, ಸೋಮೇಶ್ವರಪುರಂ, 14ನೇ ಕ್ರಾಸ್, ತುಮಕೂರು–572102 ಇಲ್ಲಿ ತಮ್ಮ ಬಯೋಡೇಟಾದೊಂದಿಗೆ ಸಂದರ್ಶನಕ್ಕೆ

# ಗ್ಯಾರಂಟಿ ಯೋಜನೆಗಳಿಂದ ಅರ್ಹರು ವಂಚಿತರಾಗದಂತೆ ಕ್ರಮ

ರಾಮನಗರ



ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಿಂದ ಅರ್ಹ ಯಾವುದೇ ಫಲಾನುಭವಿ ಹೊರಗುಳಿಯದಂತೆ ಸಂಬಂಧಿತ ಇಲಾಖೆಗಳ ಅಧಿಕಾರಿಗಳು ಸಮರ್ಪಕ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಕೆ. ರಾಜು ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಬುಧವಾರ ನಡೆದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಪರಿಷ್ಕರಣೆ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸಿ, ಅರ್ಹರಿಗೆ ಮಾತ್ರ ಯೋಜನೆಯ ಸೌಲಭ್ಯ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಹೇಳಿದರು. ಗೃಹಲಕ್ಷ್ಮೀ ಯೋಜನೆಯಡಿ ನೋಂದಣಿಯಾಗಿ ಮೃತಪಟ್ಟಿರುವ ಫಲಾನುಭವಿಗಳ ಹೆಸರನ್ನು ಪಟ್ಟಿಯಿಂದ ಕೈಬಿಡಬೇಕು. ಹಾಗೆಯೇ ಅನ್ನಭಾಗ್ಯ ಯೋಜನೆಯಡಿ ಅರ್ಹ ಬಿಪಿಎಲ್ ಪಡಿತರ ಚೀಟಿದಾರರಿಗೆ ಯಾವುದೇ ತೊಂದರೆಯಾಗದಂತೆ ಯೋಜನೆಯ ಲಾಭ ತಲುಪಿಸಬೇಕು ಎಂದು ಸೂಚಿಸಿದರು.

ಸರ್ಕಾರದ ಮಾನದಂಡಗಳಿಗೆ ಒಳಪಡುವುದಿಲ್ಲದ ಅಂತ್ಯೋದಯ ಪಡಿತರ ಚೀಟಿಗಳನ್ನು ಎಪಿಎಲ್‌ಗೆ ಪರಿವರ್ತಿಸುವ ಮೂಲಕ ಸರ್ಕಾರದ ಆರ್ಥಿಕ ಹೊರೆ ತಗ್ಗಿಸಬಹುದು ಎಂದು ಹೇಳಿದ ಅವರು, ಈ ಪ್ರಕ್ರಿಯೆಯಲ್ಲಿ ಅರ್ಹರು ಯೋಜನೆಯಿಂದ ವಂಚಿತರಾಗದಂತೆ ಅಧಿಕಾರಿಗಳು ಸೂಕ್ಷ್ಮವಾಗಿ ಪರಿಶೀಲನೆ ನಡೆಸುವಂತೆ ನಿರ್ದೇಶಿಸಿದರು.

ಸಭೆಯಲ್ಲಿ ನೀಡಿದ ಮಾಹಿತಿ ಪ್ರಕಾರ, ಜಿಲ್ಲೆಯಲ್ಲಿ 291 ಎಪಿಎಲ್ ಪಡಿತರ ಚೀಟಿಗಳನ್ನು ಬಿಪಿಎಲ್‌ಗೆ ಪರಿವರ್ತಿಸಲಾಗಿದೆ. 2025ರ ಫೆಬ್ರವರಿಯಿಂದ 2026ರ ಜುಲೈವರೆಗೆ 1.70 ಕೋಟಿ ಫಲಾನುಭವಿಗಳಿಗೆ 7.82 ಲಕ್ಷ ಕ್ವಿಂಟಾಲ್ ಅಕ್ಕಿ ವಿತರಿಸಲಾಗಿದೆ.

ಸಾರಿಗೆ ವ್ಯವಸ್ಥೆ ಕುರಿತು ಮಾತನಾಡಿದ ಕೆ. ರಾಜು, ಬೆಂಗಳೂರಿನಿಂದ ಚನ್ನಪಟ್ಟಣಕ್ಕೆ ಸಂಚರಿಸುತ್ತಿರುವ 6 ಹಾಗೂ ರಾಮನಗರಕ್ಕೆ ಸಂಚರಿಸುತ್ತಿರುವ 2 ಹವಾನಿಯಂತ್ರಿತ ಬಿಎಂಟಿಸಿ ಬಸ್‌ಗಳ ಜೊತೆಗೆ ರಾಮನಗರ ಮಾರ್ಗಕ್ಕೆ ಇನ್ನೂ ನಾಲ್ಕು ಹೆಚ್ಚುವರಿ ಬಸ್‌ಗಳನ್ನು ಒದಗಿಸುವಂತೆ ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕರಿಗೆ ಪತ್ರ ಬರೆಯಲು ಅಧಿಕಾರಿಗಳಿಗೆ ಸೂಚಿಸಿದರು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಜನದಟ್ಟಣೆ ಇರುವ ಸಮಯದಲ್ಲಿ ಹೆಚ್ಚುವರಿ ಬಸ್‌ಗಳನ್ನು ಓಡಿಸುವಂತೆಯೂ ತಿಳಿಸಿದರು.

ಶಕ್ತಿ ಯೋಜನೆಯಡಿ 2023ರ ಜೂನ್‌ನಿಂದ 2026ರ ಮೇವರೆಗೆ ಜಿಲ್ಲೆಯಲ್ಲಿ 12.48 ಕೋಟಿ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣ ಮಾಡಿದ್ದು, ಸರ್ಕಾರವು ರೂ.373.51 ಕೋಟಿ ಪರಿಹಾರ ಮೊತ್ತವನ್ನು ಪಾವತಿಸಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಯುವನಿಧಿ ಯೋಜನೆಯಡಿ 2026ರ ಜುಲೈ ಮೊದಲ ವಾರದವರೆಗೆ 5,080 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದು, 4,368 ಅರ್ಹ ಡಿಪ್ಲೊಮಾ ಮತ್ತು ಪದವೀಧರರಿಗೆ ರೂ.13.27 ಕೋಟಿ ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಗೃಹಲಕ್ಷ್ಮೀ ಯೋಜನೆಯಡಿ ಜಿಲ್ಲೆಯಲ್ಲಿ 7,886 ಮೃತ ಫಲಾನುಭವಿಗಳ ಪಟ್ಟಿಯನ್ನು ಸರ್ಕಾರ ನೀಡಿದ್ದು, ಅವರ ಖಾತೆಗಳಿಗೆ ಮರಣಾನಂತರ ಜಮೆಯಾಗಿರುವ ಹಣದ ವಿವರವನ್ನು ಬ್ಯಾಂಕುಗಳಿಂದ ಪಡೆದು ಅಗತ್ಯ ಕ್ರಮ ಕೈಗೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸೂಚಿಸಲಾಯಿತು. ಜೊತೆಗೆ ಐಟಿ/ಜಿಎಸ್‌ಟಿ ಪಾವತಿಸುವ 4,800 ಫಲಾನುಭವಿಗಳನ್ನು ಯೋಜನೆಯ ಪಟ್ಟಿಯಿಂದ ಕೈಬಿಡುವಂತೆ ನಿರ್ದೇಶನ ನೀಡಲಾಯಿತು.

ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯ 2,94,399 ಅರ್ಹ ಫಲಾನುಭವಿಗಳ ಪೈಕಿ 2,82,393 ಮಂದಿ (95.92%) ನೋಂದಾಯಿಸಿಕೊಂಡಿದ್ದು, ಉಳಿದ 12,006 ಮಂದಿಯ ನೋಂದಣಿ ಬಾಕಿಯಿದೆ. 30 ಕಂತುಗಳಲ್ಲಿ 2,56,952 ಫಲಾನುಭವಿಗಳಿಗೆ ರೂ.1,586 ಕೋಟಿ ಪಾವತಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,34,268 ಮಂದಿ ನೋಂದಾಯಿಸಿಕೊಂಡಿದ್ದು, ಯೋಜನೆ ಆರಂಭವಾದ ಬಳಿಕ ಇದುವರೆಗೆ ರೂ.436.34 ಕೋಟಿ ವೆಚ್ಚ ಮಾಡಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಸಭೆಯಲ್ಲಿ ಸಮಿತಿಯ ಉಪಾಧ್ಯಕ್ಷರು, ಸದಸ್ಯರು, ವಿವಿಧ ತಾಲ್ಲೂಕುಗಳ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಧನರಾಜ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತ್ಯೇಕ ಪೊಲೀಸ್ ಠಾಣೆ ಸ್ಥಾಪನೆಗೆ ಆಗ್ರಹ

ಚಿಂತಾಮಣಿ

ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಹಾಗೂ ಸಂಚಾರ ಸಮಸ್ಯೆಗಳನ್ನು ನಿಯಂತ್ರಿಸುವ ಉದ್ದೇಶದಿಂದ ಚಿಂತಾಮಣಿ ನಗರಕ್ಕೆ ಪ್ರತ್ಯೇಕ ಸಂಚಾರಿ (ಟ್ರಾಫಿಕ್) ಪೊಲೀಸ್ ಠಾಣೆಯನ್ನು ತಕ್ಷಣ ಮಂಜೂರು ಮಾಡಬೇಕು ಎಂದು ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪಕ್ಷ ರಾಜ್ಯ ಸರ್ಕಾರವನ್ನು ಆಗ್ರಹಿಸಿದೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಕೆಆರ್‌ಎಸ್ ಪಕ್ಷದ ಚಿಂತಾಮಣಿ ತಾಲ್ಲೂಕು ಘಟಕದ ಅಧ್ಯಕ್ಷ ಅಬ್ದುಲ್ ಖಯ್ಯೂಂ, ನಗರದಲ್ಲಿ ದಿನದಿಂದ ದಿನಕ್ಕೆ ವಾಹನಗಳ ಸಂಖ್ಯೆ ಹೆಚ್ಚುತ್ತಿರುವ ಪರಿಣಾಮ ಪ್ರಮುಖ ರಸ್ತೆಗಳಲ್ಲಿ ತೀವ್ರ ಟ್ರಾಫಿಕ್ ದಟ್ಟಣೆ ಉಂಟಾಗುತ್ತಿದೆ. ಇದರಿಂದ ಸಾರ್ವಜನಿಕರು, ವಿದ್ಯಾರ್ಥಿಗಳು, ಹಿರಿಯ ನಾಗರಿಕರು ಹಾಗೂ ವ್ಯಾಪಾರಿಗಳು ಪ್ರತಿದಿನ ಸಂಕಷ್ಟ ಅನುಭವಿಸುವಂತಾಗಿದೆ ಎಂದು ತಿಳಿಸಿದ್ದಾರೆ.

ನಗರದಲ್ಲಿ ಸುಗಮ ವಾಹನ ಸಂಚಾರ, ರಸ್ತೆ ಅಪಘಾತಗಳ ನಿಯಂತ್ರಣ, ಪಾದಚಾರಿಗಳ ಸುರಕ್ಷತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪ್ರತ್ಯೇಕ ಸಂಚಾರಿ ಪೊಲೀಸ್ ಠಾಣೆಯ ಅಗತ್ಯತೆ ಅನಿವಾರ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಈ ವಿಷಯದಲ್ಲಿ ಮಾಜಿ ಸಚಿವರು ಹಾಗೂ ಚಿಂತಾಮಣಿ ವಿಧಾನಸಭಾ ಕ್ಷೇತ್ರದ ಶಾಸಕರು ತಕ್ಷಣ ಮಧ್ಯಪ್ರವೇಶಿಸಿ, ರಾಜ್ಯ ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಂಡು ಚಿಂತಾಮಣಿ ನಗರಕ್ಕೆ ಶೀಘ್ರದಲ್ಲೇ ಸಂಚಾರಿ ಪೊಲೀಸ್ ಠಾಣೆ ಮಂಜೂರು ಮಾಡಿಸಬೇಕು ಎಂದು ಕೆಆರ್‌ಎಸ್ ಪಕ್ಷ ಒತ್ತಾಯಿಸಿದೆ.

ಸಾರ್ವಜನಿಕರ ಹಿತದೃಷ್ಟಿಯಿಂದ ಈ ಬೇಡಿಕೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ, ಶೀಘ್ರದಲ್ಲೇ ಅನುಮೋದನೆ ನೀಡುವಂತೆ ಕೆಆರ್‌ಎಸ್ ಪಕ್ಷದ ಚಿಂತಾಮಣಿ ತಾಲ್ಲೂಕು ಘಟಕ ಮನವಿ ಮಾಡಿದೆ.

# ಶ್ರೀ ಚೌಡೇಶ್ವರಿ ದೇವಿ ದೇವಾಲಯದಲ್ಲಿ ಆಶಾಡ ಮಾಸದ ವಿಶೇಷ ಪೂಜೆ



ದೇವನಹಳ್ಳಿ

ಸರ್ವಶಕ್ತ್ಯಾತ್ಮಕ ಶ್ರೀ ಚೌಡೇಶ್ವರಿ ದೇವಾಲಯದಲ್ಲಿ ಆಶಾಡ ಮಾಸದ ಶುಕ್ರವಾರಗಳಂದು ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಚೌಡೇಶ್ವರಿ ಟ್ರಸ್ಟ್‌ನ ಪಿ. ಗಂಗಾಧರ್ ತಿಳಿಸಿದರು.

ಅವರು ಸರ್ವಶಕ್ತ್ಯಾತ್ಮಕ ಶ್ರೀ ಚೌಡೇಶ್ವರಿ ದೇವಿಯ ದೇವಾಲಯದಲ್ಲಿ ಪೂಜಾ ಕಾರ್ಯಕ್ರಮಗಳ ಬಗ್ಗೆ ವಿವರಣೆ ನೀಡಿ ಮಾತನಾಡಿ ಪ್ರತಿ ತಿಂಗಳು ನಡೆಯುವ ಅಮಾವಾಸ್ಯೆ ಪೂಜೆ, ಪೌರ್ಣಮಿಯಂದು ಶ್ರೀ ಸತ್ಯನಾರಾಯಣಪೂಜೆ ಮತ್ತು ದಾಸೋಹವನ್ನು ನಡೆಸಲಾಗುತ್ತಿದ್ದು, ಪ್ರತಿ ಶುಕ್ರವಾರ ರಾಹುಕಾಲ ಪೂಜೆ, ಮಂಗಳವಾರದಂದು ವಿಶೇಷ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಭಕ್ತಾದಿಗಳು ತಮ್ಮ ಅಭೀಷ್ಟೆಗಳನ್ನು ದೇವಿಗೆ ಅರ್ಪಿಸುತ್ತಿದ್ದು ಸಕಲರಿಗೂ ದೇವಿ ಅನುಗ್ರಹ ತೋರಿದ್ದಾಳೆ ಎಂದರು.

2014ರ ಅಕ್ಷಯ ತೃತೀಯೆಯಂದು ಪ್ರತಿಷ್ಠಾಪನೆಗೊಂಡು ಸಾವಿರಾರು ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುತ್ತಾ ಪ್ರಸಿದ್ಧಿ ಪಡೆದಿರುವ ಅಲಂಕಾರ ಪ್ರಿಯಳಾದ ಶ್ರೀ ಚೌಡೇಶ್ವರಿ ಅಮ್ಮನವರ ಸನ್ನಿಧಿಯಲ್ಲಿ ಆಷಾಢ ಮಾಸದ ವಿಶೇಷ ಆಚರಣೆಗಳು ನಡೆಯಲಿವೆ.

ಜುಲೈ 14ರಂದು (ಮಂಗಳವಾರ) ಅಮಾವಾಸ್ಯೆ ಹಾಗೂ ಶ್ರೀ ಚೌಡೇಶ್ವರಿ ಅಮ್ಮನವರ ಜಯಂತಿ ಪ್ರಯುಕ್ತ ಅರಿಶಿನ–ಕುಂಕುಮ ಅಲಂಕಾರ ನಡೆಯಲಿದೆ. ಜುಲೈ 29ರಂದು (ಬುಧವಾರ) ಗುರುಪೂರ್ಣಿಮೆ ಅಂಗವಾಗಿ ಬೆಳಿಗ್ಗೆ 11 ಗಂಟೆಗೆ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ ಹಾಗೂ ದಾಸೋಹ ಸೇವೆ ಏರ್ಪಡಿಸಲಾಗಿದೆ.

ಆಷಾಢ ಮಾಸದ ಪ್ರತಿ ಶುಕ್ರವಾರ ಸಂಜೆ 6.30ಕ್ಕೆ ಸಾಮೂಹಿಕ ಕುಂಕುಮಾರ್ಚನೆ ನಡೆಯಲಿದ್ದು, ಸುಮಂಗಲಿಯರು ಭಾಗವಹಿಸಬಹುದಾಗಿದೆ. ಕುಂಕುಮಾರ್ಚನೆಗೆ ಲಕ್ಷ್ಮೀ ಅಮ್ಮನವರ ವಿಗ್ರಹಗಳನ್ನು ಶ್ರೀಮತಿ ಮತ್ತು ಶ್ರೀ ಎಸ್.ಶ್ರೀಧರ್ (ಅಪ್ಪು), ಸಮಾಜ ಸೇವಕರು, ದೇವನಹಳ್ಳಿ ಅವರು ಸೇವೆಯಾಗಿ ಸಮರ್ಪಿಸಿದ್ದಾರೆ. ಇದೇ ವೇಳೆ ಪರಮಪೂಜ್ಯ ಶ್ರೀ ಅಶ್ವತ್ಥಪ್ಪ ಗುರೂಜಿಯವರ ಎಸ್.ಎ.ವೈ. ತಂಡ ಹಾಗೂ ಭಕ್ತರಿಂದ ಪ್ರತಿ ಶುಕ್ರವಾರ ಸಂಜೆ 5.30ರಿಂದ ಲಲಿತ ಸಹಸ್ರನಾಮ ಪಾರಾಯಣ, ಸತ್ಸಂಗ ಹಾಗೂ ಭಜನೆ ಕಾರ್ಯಕ್ರಮಗಳು ನಡೆಯಲಿವೆ.

ಆಷಾಢ ಮಾಸದ ನಾಲ್ಕು ಶುಕ್ರವಾರಗಳಂದು ವಿಶೇಷ ಅಲಂಕಾರಗಳನ್ನು ವಿವಿಧ ಸೇವಾಕರ್ತರ ಸಹಯೋಗದಲ್ಲಿ ನೆರವೇರಿಸಲಾಗುತ್ತದೆ.

ಜುಲೈ 17ರಂದು ಮೊದಲನೇ ಆಷಾಢ ಶುಕ್ರವಾರ ವಿಳ್ಯೆದೆಲೆ ಮತ್ತು ಹೂವಿನ ಅಲಂಕಾರ, ಜುಲೈ 24ರಂದು ಎರಡನೇ ಆಷಾಢ ಶುಕ್ರವಾರ ಲಾಡು ಮತ್ತು ಹೂವಿನ ಅಲಂಕಾರ, ಜುಲೈ 31ರಂದು ಮೂರನೇ ಆಷಾಢ ಶುಕ್ರವಾರ ಬಳೆ ಮತ್ತು ಹೂವಿನ ಅಲಂಕಾರ, ಆಗಸ್ಟ್ 7ರಂದು ನಾಲ್ಕನೇ ಆಷಾಢ ಶುಕ್ರವಾರ ಹಣ್ಣು ಮತ್ತು ಹೂವಿನ ಅಲಂಕಾರ, ಇದೇ ವೇಳೆ ಶ್ರಾವಣ ಮಾಸ ಹಾಗೂ ನವರಾತ್ರಿ ಮಹೋತ್ಸವದಲ್ಲಿಯೂ ವಿಶೇಷ ಅಲಂಕಾರಗಳು, ಪೂಜೆಗಳು ಹಾಗೂ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ದೇವಾಲಯ ಆಡಳಿತ ಮಂಡಳಿ ತಿಳಿಸಿದೆ. ಸಮಸ್ತ ಭಕ್ತಾದಿಗಳು ಆಷಾಢ ಮಾಸದ ಎಲ್ಲಾ ಪೂಜಾ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಶ್ರೀ ಚೌಡೇಶ್ವರಿ ಅಮ್ಮನವರ ಕೃಪೆಗೆ ಪಾತ್ರರಾಗುವಂತೆ ದೇವಾಲಯ ಅಭಿವೃದ್ಧಿ ಸಮಿತಿ ಸದಸ್ಯ ಪಿ. ಗಂಗಾಧರ್ ಮನವಿ ಮಾಡಿದ್ದಾರೆ

ಈ ಸಮಯದಲ್ಲಿ ದೇವಾಲಯ ಅಭಿವೃದ್ಧಿ ಟ್ರಸ್ಟ್‌ನ ಎನ್. ಮುನಿರಾಜು, ಟೌನ್ ಎಂ.ಪಿ.ಸಿ.ಎಸ್ ಅಧ್ಯಕ್ಷ ಕಾಂತಪ್ಪನವರ ವಿ.ಕೃಷ್ಣಪ್ಪ, ಮಾಜಿ ಪುರಸಭಾ ಸದಸ್ಯ ಪಿ. ಜಯರಾಮ್, ಬಸ್ ಮಾಲೀಕ ರಾಜು, ದೊಡ್ಡಚೀಮನಹಳ್ಳಿ ದೇವರಾಜು, ಶ್ರೀರಾಮಯ್ಯ, ತೇಜಕುಮಾರ್, ಗೋಪಾಲ್, ದೇವಾಲಯದ ಅರ್ಚಕ ಮಂಜುನಾಥ್ ಸೇರಿದಂತೆ ಟ್ರಸ್ಟ್‌ನ ಸದಸ್ಯರು ಭಾಗವಹಿಸಿದ್ದರು.

# ‘ಬೆಳೆ ವಿಮೆ ನೋಂದಣಿ ಗುರಿ ತಲುಪದಿದ್ದರೆ ಶಿಸ್ತು ಕ್ರಮ’

ಚಿಕ್ಕಬಳ್ಳಾಪುರ



ಕೃಷಿ ಮತ್ತು ತೋಟಗಾರಿಕಾ ಬೆಳೆಗಳಿಗೆ ಸಾಲ ನೀಡುವ ವೇಳೆ ರೈತರಿಗೆ ಬೆಳೆ ವಿಮೆಯ ಮಹತ್ವವನ್ನು ತಿಳಿಸಿ, ಕಡ್ಡಾಯವಾಗಿ ನೋಂದಾಯಿಸಿಕೊಳ್ಳುವಂತೆ ಪ್ರೇರೇಪಿಸಬೇಕು ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಅವರು ಬ್ಯಾಂಕ್ ವ್ಯವಸ್ಥಾಪಕರಿಗೆ ಸೂಚನೆ ನೀಡಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ 2026–27ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ (ಕಒಈಃಐ) ಯೋಜನೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈ ವರ್ಷ 80 ಸಾವಿರ ರೈತರನ್ನು ಬೆಳೆ ವಿಮೆಗೆ ನೋಂದಾಯಿಸುವ ಗುರಿ ನಿಗದಿಪಡಿಸಲಾಗಿದ್ದರೂ, ಇದುವರೆಗೆ ಕೇವಲ 22,406 ರೈತರು ಮಾತ್ರ ನೋಂದಾಯಿಸಿಕೊಂಡಿದ್ದಾರೆ. ಬಾಗೇಪಲ್ಲಿ ಹಾಗೂ ಗೌರಿಬಿದನೂರು ತಾಲ್ಲೂಕುಗಳನ್ನು ಹೊರತುಪಡಿಸಿ ಉಳಿದ ತಾಲ್ಲೂಕುಗಳಲ್ಲಿ ಪ್ರಗತಿ ತೀರಾ ಕಳಪೆಯಾಗಿದ್ದು, ಕೃಷಿ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ನಿರ್ಲಕ್ಷ್ಯವೇ ಇದಕ್ಕೆ ಕಾರಣವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಧೋರಣೆಯನ್ನು ಸಹಿಸಲಾಗುವುದಿಲ್ಲ. ಇದನ್ನೇ ಅಂತಿಮ ಎಚ್ಚರಿಕೆ ಎಂದು ಪರಿಗಣಿಸಿ ಉಳಿದ ಅವಧಿಯಲ್ಲಿ ಗುರಿ ಸಾಧಿಸಬೇಕು. ವಿಫಲವಾದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಂದು ಜಿಲ್ಲಾಧಿಕಾರಿ ಕಟ್ಟುನಿಟ್ಟಾಗಿ ಎಚ್ಚರಿಕೆ ನೀಡಿದರು.

ಬೆಳೆ ಸಾಲ ಪಡೆದಿದ್ದರೂ ಇನ್ನೂ ವಿಮೆ ಮಾಡಿಸಿಕೊಳ್ಳದ ರೈತರ ಮಾಹಿತಿಯನ್ನು ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಎರಡು ದಿನಗಳೊಳಗೆ ಸಂಗ್ರಹಿಸಿ ಸಲ್ಲಿಸಬೇಕು. ಪ್ರತಿದಿನದ ನೋಂದಣಿ ಪ್ರಗತಿಯನ್ನು ಪರಿಶೀಲಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ವರದಿ ಸಲ್ಲಿಸುವಂತೆ ನಿರ್ದೇಶಿಸಿದರು.

ಜಿಲ್ಲೆಯಲ್ಲಿ ಇದುವರೆಗೆ ಶೇ.80ರಷ್ಟು ಮಳೆಯ ಕೊರತೆ ದಾಖಲಾಗಿದ್ದು, ಮುಂದಿನ ದಿನಗಳಲ್ಲಿ ಮಳೆ ಬಂದರೂ ಬೆಳೆ ಹಾನಿಯಾಗುವ ಸಾಧ್ಯತೆ ಹೆಚ್ಚಿದೆ. ಇಂತಹ ಸಂದರ್ಭದಲ್ಲಿ ರೈತರು ಬೆಳೆ ವಿಮೆ ಮಾಡಿಸಿಕೊಳ್ಳುವುದು ಅತ್ಯಗತ್ಯ ಎಂದು ಜಿಲ್ಲಾಧಿಕಾರಿ ಹೇಳಿದರು.

ಉದಾಹರಣೆಗೆ, ಒಂದು ಎಕರೆ ರಾಗಿ ಬೆಳೆಗೆ ಕೇವಲ 399 ವಿಮಾ ಪ್ರೀಮಿಯಂ ಪಾವತಿಸಿದರೆ ಬೆಳೆ ಹಾನಿಯ ಪ್ರಮಾಣಕ್ಕೆ ಅನುಗುಣವಾಗಿ ಪರಿಹಾರ ದೊರೆಯಲಿದೆ. ಕೇವಲ 399 ಪಾವತಿಸುವ ಮೂಲಕ ರೈತರು ದೊಡ್ಡ ಆರ್ಥಿಕ ನಷ್ಟದಿಂದ ಪಾರಾಗಬಹುದು. ರಸಗೊಬ್ಬರ ಬಳಕೆಯನ್ನು ಸ್ವಲ್ಪ ಕಡಿಮೆ ಮಾಡಿದರೂ ಪರವಾಗಿಲ್ಲ, ಆದರೆ ಬೆಳೆ ವಿಮೆಯನ್ನು ತಪ್ಪದೇ ಮಾಡಿಸಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ಜಿಲ್ಲೆಯ ಎಲ್ಲಾ ರೈತರು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರಗಳು, ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ ಹಾಗೂ ಧರ್ಮಸ್ಥಳ ಸ್ವಸಹಾಯ ಸಂಘಗಳ ಪ್ರತಿನಿಧಿಗಳನ್ನು ಸಂಪರ್ಕಿಸಿ ಹವಾಮಾನ ಆಧಾರಿತ ಹಾಗೂ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ನೋಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಕರೆ ನೀಡಿದರು.

ಸಭೆಯಲ್ಲಿ ಕೃಷಿ ಜಂಟಿ ನಿರ್ದೇಶಕ ಅಬಿದ್, ತೋಟಗಾರಿಕೆ ಜಂಟಿ ನಿರ್ದೇಶಕ ದೇವರಾಜ್, ಟಾಟಾ ಎಐಜಿ ವಿಮಾ ಸಂಸ್ಥೆಯ ಪ್ರತಿನಿಧಿಗಳು ಹಾಗೂ ವಿವಿಧ ಬ್ಯಾಂಕ್‌ಗಳ ವ್ಯವಸ್ಥಾಪಕರು ಉಪಸ್ಥಿತರಿದ್ದರು.

# ರಾಮಪ್ಪ ಕೆರೆಯಲ್ಲಿ ಅಕ್ರಮ ಮಣ್ಣು ಸಾಗಣೆ ತಡೆಗೆ ಗ್ರಾಮಸ್ಥರ ಒತ್ತಾಯ

ಗುಡಿಬಂಡೆ



ತಾಲೂಕಿನ ಉಲ್ಲೋಡು ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಮಪ್ಪ ಕೆರೆಯಿಂದ ಅಕ್ರಮವಾಗಿ ಮಣ್ಣು ತೆಗೆಯುವ ಹಾಗೂ ಸಾಗಣೆ ಮಾಡುತ್ತಿರುವ ದಂಧೆಯನ್ನು ತಕ್ಷಣವೇ ನಿಲ್ಲಿಸಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಹಳೇ ಗುಡಿಬಂಡೆ ಹಾಗೂ ನಿಚ್ಚನಬಂಡಹಳ್ಳಿ ಗ್ರಾಮಸ್ಥರು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ನಾಗಮಣಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಹಳೇ ಗುಡಿಬಂಡೆ ಗ್ರಾಮದ ಯುವ ಮುಖಂಡ ಮನೋಜ್, ಕಳೆದ ಹಲವು ತಿಂಗಳಿಂದ ಕೆಲ ಟಿಪ್ಪರ್ ಲಾರಿ ಮಾಲೀಕರು ಹಾಗೂ ಇಟ್ಟಿಗೆ ಕಾರ್ಖಾನೆಗಳಿಗೆ ಸಂಬಂಧಿಸಿದವರು ಯಾವುದೇ ಅಧಿಕೃತ ಅನುಮತಿ ಇಲ್ಲದೆ ರಾಮಪ್ಪ ಕೆರೆಯಿಂದ ಮಣ್ಣನ್ನು ಅಕ್ರಮವಾಗಿ ತೆಗೆದು ಸಾಗಣೆ ಮಾಡಿ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಅಕ್ರಮ ಮಣ್ಣು ಗಣಿಗಾರಿಕೆಯಿಂದ ಕೆರೆಯಲ್ಲಿ ಸುಮಾರು 10 ಅಡಿಗೂ ಹೆಚ್ಚು ಆಳದ ಗುಂಡಿಗಳು ನಿರ್ಮಾಣವಾಗಿದ್ದು, ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ಜೀವಾಪಾಯ ಉಂಟಾಗುವ ಸಾಧ್ಯತೆ ಇದೆ. ಜೊತೆಗೆ ಮಣ್ಣು ತುಂಬಿದ ಟಿಪ್ಪರ್ ಲಾರಿಗಳು ಗ್ರಾಮ ರಸ್ತೆಗಳ ಮೂಲಕ ಅತಿವೇಗದಲ್ಲಿ ಸಂಚರಿಸುತ್ತಿರುವುದರಿಂದ ಧೂಳು ಹೆಚ್ಚಾಗಿ ಏಳಿ ರಸ್ತೆ ಬದಿಯ ಕೃಷಿ ಬೆಳೆಗಳಿಗೆ ಹಾನಿಯಾಗುತ್ತಿದ್ದು, ರೈತರು ಆರ್ಥಿಕ ನಷ್ಟ ಅನುಭವಿಸುತ್ತಿದ್ದಾರೆ ಎಂದು ದೂರಿದರು.

ಬಳಿಕ ಮಾತನಾಡಿದ ಹೆಚ್.ಪಿ. ಲಕ್ಷ್ಮೀನಾರಾಯಣ, ಸಾಮಾನ್ಯ ರೈತರಿಗೆ ಕೃಷಿ ಜಮೀನುಗಳಿಗೆ ಅಗತ್ಯವಿರುವಷ್ಟು ಮಣ್ಣು ಪಡೆಯುವುದಕ್ಕೂ ತೊಂದರೆಯಾಗುತ್ತಿರುವ ಸಂದರ್ಭದಲ್ಲಿ ಕೆಲವರು ಕೆರೆಯ ಮಣ್ಣನ್ನೇ ವ್ಯಾಪಾರವನ್ನಾಗಿ ಮಾಡಿಕೊಂಡು ಮಾಫಿಯಾ ರೀತಿಯಲ್ಲಿ ಮಾರಾಟ ನಡೆಸುತ್ತಿದ್ದಾರೆ. ಇದು ಸಾರ್ವಜನಿಕ ಆಸ್ತಿಯ ದುರುಪಯೋಗವಾಗಿದ್ದು, ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಂಡು ಅಕ್ರಮ ಚಟುವಟಿಕೆಗೆ ತೆರೆ ಎಳೆಯಬೇಕು ಎಂದು ಆಗ್ರಹಿಸಿದರು.

ಗ್ರಾಮಸ್ಥರ ಮನವಿ ಸ್ವೀಕರಿಸಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ನಾಗಮಣಿ ಪ್ರತಿಕ್ರಿಯಿಸಿ, ಕೆರೆಯಿಂದ ಮಣ್ಣು ತೆಗೆಯಬಾರದು ಎಂದು ಈಗಾಗಲೇ ಹಲವು ಬಾರಿ ಸೂಚನೆ ನೀಡಲಾಗಿದೆ. ಆದರೂ ಅಕ್ರಮ ಚಟುವಟಿಕೆ ಮುಂದುವರಿದಿರುವ ಬಗ್ಗೆ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಸ್ಥಳ ಪರಿಶೀಲನೆ ನಡೆಸಿ, ಅಕ್ರಮ ಮಣ್ಣು ಸಾಗಣೆ ಹಾಗೂ ಮಾರಾಟವನ್ನು ತಕ್ಷಣವೇ ನಿಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

# ಕೊನಘಟ್ಟ ಸರ್ಕಾರಿ ಆಸ್ಪತ್ರೆ ವೈದ್ಯೆ ವಿರುದ್ಧ ಗ್ರಾಮಸ್ಥರ ಆಕ್ರೋಶ

ದೊಡ್ಡಬಳ್ಳಾಪುರ

ತಾಲೂಕಿನ ಕೊನಘಟ್ಟ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಫರ್ಹಾನ ಅವರ ವಿರುದ್ಧ ದುರ್ವರ್ತನೆ ಹಾಗೂ ನಿರ್ಲಕ್ಷ್ಯದ ಆರೋಪ ಕೇಳಿಬಂದಿದ್ದು, ಅವರನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಆಗ್ರಹಿಸಿ ಗ್ರಾಮಸ್ಥರು ಸೋಮವಾರ ಆರೋಗ್ಯ ಕೇಂದ್ರದ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಮುಖಂಡ ಜಿ. ಲಕ್ಷ್ಮೀಪತಿ ಮಾತನಾಡಿ, ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುವ ರೈತರು ಹಾಗೂ ಸಾರ್ವಜನಿಕರೊಂದಿಗೆ ವೈದ್ಯೆ ಸೌಜನ್ಯದಿಂದ ವರ್ತಿಸುತ್ತಿಲ್ಲ ಎಂದು ಆರೋಪಿಸಿದರು. ತಲೆನೋವು, ಜ್ವರ, ಕೆಮ್ಮು, ನೆಗಡಿ ಸೇರಿದಂತೆ ಸಾಮಾನ್ಯ ಆರೋಗ್ಯ ಸಮಸ್ಯೆಗಳೊಂದಿಗೆ ಆಸ್ಪತ್ರೆಗೆ ಬರುವ ರೋಗಿಗಳಿಗೆ ಏಕವಚನದಲ್ಲಿ ಮಾತನಾಡಿ ಅವಮಾನಿಸುತ್ತಿದ್ದು, ಸಮರ್ಪಕವಾಗಿ ಪರೀಕ್ಷಿಸದೆ ಚಿಕಿತ್ಸೆ ನೀಡಿ ಕಳುಹಿಸುತ್ತಿದ್ದಾರೆ ಎಂದು ದೂರಿದರು.

ಪ್ರತಿದಿನ ಸುಮಾರು ಹತ್ತು ದೂರುಗಳು ಬರುತ್ತಿದ್ದು, ಪ್ರಶ್ನಿಸಿದರೆ ಪೊಲೀಸ್ ಠಾಣೆಗೆ ದೂರು ನೀಡುವುದಾಗಿ ರೋಗಿಗಳಿಗೆ ಬೆದರಿಕೆ ಹಾಕುತ್ತಿದ್ದಾರೆ. ಇಂತಹ ವೈದ್ಯರ ಸೇವೆ ಗ್ರಾಮಕ್ಕೆ ಅಗತ್ಯವಿಲ್ಲ. ಕೂಡಲೇ ಅವರನ್ನು ವರ್ಗಾವಣೆ ಮಾಡಿ ಹೊಸ ವೈದ್ಯರನ್ನು ನೇಮಿಸಬೇಕು ಎಂದು ಒತ್ತಾಯಿಸಿದರು.

ಈ ಸಂಬಂಧ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿಯೂ ನಿರ್ಣಯ ಕೈಗೊಳ್ಳಲಾಗಿದ್ದು, ಒಂದು ವಾರದೊಳಗೆ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ದೂರು ಸಲ್ಲಿಸಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಗ್ರಾಮಾಂತರ ವಿಧಾನಸಭಾ ಕ್ಷೇತ್ರ: ಶೇ.98.66ರಷ್ಟು ಮ್ಯಾಪಿಂಗ್ ಪೂರ್ಣ

ತುಮಕೂರು

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026 ಸಂಬಂಧ ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದಲ್ಲಿ ಜೂನ್ 30ರವರೆಗೂ ಶೇ.98.66ರಷ್ಟು ಮ್ಯಾಪಿಂಗ್ ಕಾರ್ಯವನ್ನು ಪೂರ್ಣಗೊಳಿಸಲಾಗಿದೆ ಎಂದು ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ನಾಹಿದಾ ಜ಼ಂ ಜ಼ಂ ತಿಳಿಸಿದ್ದಾರೆ.

ಈ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 2,11,783 ಮತದಾರರಿದ್ದು, ಮನೆ–ಮನೆ ಭೇಟಿ ನೀಡಿ ಈವರೆಗೂ ಒಟ್ಟು 2,06,309(ಶೇ.97.42) ಗಣತಿ ನಮೂನೆಗಳನ್ನು ವಿತರಿಸಲಾಗಿದೆ. ಈ ಪೈಕಿ 75,613 ಗಣತಿ ನಮೂನೆಗಳ ಗಣಕೀಕರಣ ಪೂರ್ಣಗೊಂಡಿದೆ.

ಒಟ್ಟು 1146 ಗಣತಿ ನಮೂನೆಗಳನ್ನು ಸಂಗ್ರಹಿಸಲಾಗಿದೆ. ಇದರಲ್ಲಿ 14 ಸಂಗ್ರಹಿಸಲಾಗದ/ಗೈರು ಮತದಾರರಿದ್ದು, 331 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಹಾಗೂ 679 ಮತದಾರರು ಮರಣ ಹೊಂದಿದ್ದು, 104 ಮತದಾರರು ಪುನರಾವರ್ತನೆಯಾಗಿರುತ್ತಾರೆ ಎಂದು ಅವರು ತಿಳಿಸಿದ್ದಾರೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
17/07/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಪಂಚಪಾಲಿಕೆಗಳ ಚುನಾವಣಾ ಭವಿಷ್ಯ 17ರಂದು ನಿರ್ಧಾರ ಸಾಧ್ಯತೆ

ಬೆಂಗಳೂರು

ಯಾವುದೇ ಕಾರಣಕ್ಕೂ ಚುನಾವಣೆ ಮುಂದೂಡಿಕೆಗೆ ಮತ್ತೆ ಅವಕಾಶ ನೀಡುವುದಿಲ್ಲ ಹೀಗಾಗಿ ಆ.31 ರೊಳಗೆ ಚುನಾವಣಾ ಪ್ರಕ್ರಿಯೆ ಪೂರ್ಣಗೊಳಿಸುವಂತೆ ನ್ಯಾಯಲಯ ಕಟ್ಟುನಿಟ್ಟಿನ ಆದೇಶ ನೀಡಿದ್ದರೂ ಕರ್ನಾಟಕ ಸರ್ಕಾರ ಮತ್ತೆ ಅರ್ಜಿ ಸಲ್ಲಿಸಿರುವುದು ಸುಪ್ರೀಂ ಕೆಂಗಣ್ಣಿಗೆ ಗುರಿಯಾಗಿದೆ.

ಈ ಮಧ್ಯೆ ಸಂಘ ಪರಿವಾರದವರು ಜಿಬಿಎ ಚುನಾವಣೆ ಮುಂದೂಡಲು ಕರ್ನಾಟಕ ಸರ್ಕಾರ ಇಲ್ಲಸಲ್ಲದ ಸಬೂಬು ಹೇಳುತ್ತಿದೆ ಅವರ ಮಾತಿಗೆ ಮನ್ನಣೆ ನೀಡದೆ ಆ.31 ರೊಳಗೆ ಚುನಾವಣೆ ನಡೆಸಲು ಆದೇಶಿಸಬೇಕು ಎಂದು ಇಂಪ್ಲೀಡ್ ಅರ್ಜಿ ಸಲ್ಲಿಸಿರುವುದರಿಂದ ಶುಕ್ರವಾರದ ವಿಚಾರಣೆ ತೀವ್ರ ಕುತುಹಲ ಕೆರಳಿಸಿದೆ.

ಕರ್ನಾಟಕ ಸರ್ಕಾರ ಸಲ್ಲಿಸಿರುವ ಅರ್ಜಿಯಲ್ಲಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ನಡೆಯುತ್ತಿರುವುದರಿಂದ ಆಡಳಿತಾತ್ಮಕ ಸವಾಲುಗಳು ಎದುರಾಗಿವೆ. ಮನೆಮನೆಗೆ ತೆರಳಿ ಮತದಾರರ ವಿವರ ಪರಿಶೀಲಿಸುವ ಕಾರ್ಯದಲ್ಲಿ ಸಿಬ್ಬಂದಿ ನಿರತರಾಗಿರುವ ಕಾರಣ, ಅದೇ ಸಮಯದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಅಗತ್ಯವಿರುವ ಭಾರೀ ಪ್ರಮಾಣದ ಸಿಬ್ಬಂದಿಯನ್ನು ನಿಯೋಜಿಸುವುದು ಸಾಧ್ಯವಾಗುತ್ತಿಲ್ಲ ಎಂದು ವಾದಿಸಿದೆ.

ಬೆಂಗಳೂರು ನಗರದಲ್ಲೇ ಸುಮಾರು 1.03 ಕೋಟಿ ಮತದಾರರು ಹಾಗೂ 40 ಲಕ್ಷ ಮನೆಗಳಿದ್ದು, ಐದು ನಗರ ಪಾಲಿಕೆಗಳ ಚುನಾವಣೆಗೆ ಮತದಾನದ ದಿನ ಮಾತ್ರವೇ ಭದ್ರತಾ ಸಿಬ್ಬಂದಿಯನ್ನು ಹೊರತುಪಡಿಸಿ ಸುಮಾರು 60 ಸಾವಿರ ಸಿಬ್ಬಂದಿ ಅಗತ್ಯವಿದೆ. ಹೀಗಾಗಿ ಎರಡೂ ಪ್ರಕ್ರಿಯೆಗಳನ್ನು ಏಕಕಾಲದಲ್ಲಿ ನಿರ್ವಹಿಸುವುದು ಅತ್ಯಂತ ಕಷ್ಟಕರವಾಗಿದೆ ಎನ್ನುವುದು ಸರ್ಕಾರದ ವಾದವಾಗಿದೆ.

ಕರ್ನಾಟಕ ಸರ್ಕಾರ ಹಾಗೂ ಸಂಘ ಪರಿವಾರದವರು ಸಲ್ಲಿಸಿರುವ ಅರ್ಜಿ ವಿಚಾರಣೆ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ಯಾವ ತೀರ್ಮಾನ ಕೈಗೊಳ್ಳಲಿದೆ ಎನ್ನುವುದರ ಮೇಲೆ ಜಿಬಿಎ ಚುನಾವಣಾ ಭವಿಷ್ಯ ನಿರ್ಧಾರವಾಗಲಿದೆ.

ಮರು ವಿಭಜನೆ ಸಾಧ್ಯತೆ: ಒಂದು ವೇಳೆ ಸುಪ್ರೀಂ ಕೋರ್ಟ್ ಡಿ.31 ರವರೆಗೆ ಅವಕಾಶ ನೀಡಿದರೆ ಕರ್ನಾಟಕ ಸರ್ಕಾರದವರು ಬರುವ ಅಧಿವೇಶನದಲ್ಲಿ ಪಂಚ ಪಾಲಿಕೆಗಳಲ್ಲಿ ಆರ್ಥಿಕ ಅಸಮತೋಲನ ಇರುವುದರಿಂದ ಐದು ಪಾಲಿಕೆಗಳ ಬದಲಿಗೆ ಎರಡು ಇಲ್ಲವೇ ಮೂರು ಪಾಲಿಕೆ ರಚಿಸಿ ಚುನಾವಣೆ ನಡೆಸುವ ಬಗ್ಗೆ ಅನುಮತಿ ಪಡೆದುಕೊಂಡು ಮತ್ತೆ ಎರಡು ವರ್ಷಗಳ ವರೆಗೆ ಜಿಬಿಎಗೆ ಚುನಾವಣೆ ನಡೆಸು ಸಾಧ್ಯತೆ ಇಲ್ಲ ಹೀಗಾಗಿ ಹೇಗಾದರೂ ಮಾಡಿ ಆ.31ರೊಳಗೆ ಚುನಾವಣೆ ಆಗುವಂತೆ ನೋಡಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

# ಹೊಸ ಯೋಜನೆಗೆ ಶೀಘ್ರ ಚಾಲನೆ

ಬೆಂಗಳೂರು

ಪಾವಗಡದ ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಹಾಗೂ ಸ್ವಾಮಿ ವಿವೇಕಾನಂದ ಸಂಘಟಿತ ಗ್ರಾಮಾಂತರ ಆರೋಗ್ಯ ಕೇಂದ್ರದ ಸೇವಾ ಕಾರ್ಯಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ಶ್ಲಾಘಿಸಿದ್ದು, ಆಸ್ಪತ್ರೆಯಲ್ಲಿ ಆರಂಭವಾಗಲಿರುವ ರೂ.1 ಕೋಟಿ ವೆಚ್ಚದ ನೂತನ ಯೋಜನೆ ಮತ್ತು ಘಟಕಕ್ಕೆ ಶೀಘ್ರದಲ್ಲೇ ಚಾಲನೆ ನೀಡುವುದಾಗಿ ಭರವಸೆ ನೀಡಿದ್ದಾರೆ.



ಪರಮಪೂಜ್ಯ ಸ್ವಾಮಿ ಜಪಾನಂದಜೀ ಅವರು ಬುಧವಾರ ಬೆಂಗಳೂರಿನಲ್ಲಿ ಆರೋಗ್ಯ ಸಚಿವರನ್ನು ಭೇಟಿಯಾಗಿ ಸಂಸ್ಥೆಯ ವಿವಿಧ ಆರೋಗ್ಯ ಹಾಗೂ ಸೇವಾ ಚಟುವಟಿಕೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಈ ವೇಳೆ ಸಚಿವರು, ತಾವು ಸುಮಾರು ಹನ್ನೆರಡು ವರ್ಷಗಳ ಹಿಂದೆ ಆರೋಗ್ಯ ಸಚಿವರಾಗಿದ್ದ ಸಂದರ್ಭದಲ್ಲಿ ಪಾವಗಡಕ್ಕೆ ಭೇಟಿ ನೀಡಿದ್ದನ್ನು ನೆನಪಿಸಿಕೊಂಡರು. ಸಭೆಯಲ್ಲಿ ಸ್ವಾಮಿ ವಿವೇಕಾನಂದ ಸಂಘಟಿತ ಗ್ರಾಮಾಂತರ ಆರೋಗ್ಯ ಕೇಂದ್ರ, ಶ್ರೀ ಶಾರದಾದೇವಿ ಕಣ್ಣಿನ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ ಹಾಗೂ ಶ್ರೀ ರಾಮಕೃಷ್ಣ ಹೃದ್ರೋಗ ಚಿಕಿತ್ಸಾ ಕೇಂದ್ರಗಳ ಕಾರ್ಯವೈಖರಿಯ ಕುರಿತು ಸಚಿವರು ವಿವರವಾಗಿ ಮಾಹಿತಿ ಪಡೆದು, ಸರ್ಕಾರದ ಪರವಾಗಿ ಸಂಸ್ಥೆಯ ಸೇವೆಯನ್ನು ಹೃತ್ಪೂರ್ವಕವಾಗಿ ಅಭಿನಂದಿಸಿದರು. ಇದೇ ಸಂದರ್ಭದಲ್ಲಿ ಆರೋಗ್ಯ ಇಲಾಖೆಯ ಹೊಣೆಗಾರಿಕೆಯನ್ನು ಮತ್ತೊಮ್ಮೆ ವಹಿಸಿಕೊಂಡಿರುವ ಸಚಿವ ಯು.ಟಿ. ಖಾದರ್ ಅವರಿಗೆ ಸೇವಾಶ್ರಮ ಹಾಗೂ ಆಸ್ಪತ್ರೆಯ ಪರವಾಗಿ ಅಭಿನಂದನೆ ಸಲ್ಲಿಸಲಾಯಿತು. ಈ ಭೇಟಿಯ ಸಂದರ್ಭದಲ್ಲಿ ಸಂಸ್ಥೆಯ ಹಿರಿಯ ಸದಸ್ಯರು ಹಾಗೂ ಸುಪ್ರೀಂ ಕೋರ್ಟ್ ಮತ್ತು ಹೈಕೋರ್ಟ್‌ನ ಹಿರಿಯ ವಕೀಲ ಹೊನ್ನಪ್ಪ ಉಪಸ್ಥಿತರಿದ್ದರು.

# ಮಳೆರಾಯನ ಆಗಮನ ವಿಳಂಬ, ಆತಂಕದಲ್ಲಿ ರೈತರು

ಬೆಂಗಳೂರು ಗ್ರಾಮಾಂತರ

ಎಲ್–ನಿನೊ ಪರಿಣಾಮದಿಂದ ರಾಜ್ಯದಲ್ಲಿ ಮುಂಗಾರು ಮಳೆ ತೀವ್ರ ಕೊರತೆಯಾಗಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲೂ ಮಳೆರಾಯನ ವಿಳಂಬ ರೈತರಲ್ಲಿ ಆತಂಕ ಹೆಚ್ಚಿಸಿದೆ. ಜೂನ್ ಅಂತ್ಯದಿಂದ ಸಮರ್ಪಕ ಮಳೆಯಾಗದ ಕಾರಣ ಬಿತ್ತನೆ ಕಾರ್ಯ ಕುಂಠಿತಗೊಂಡಿದ್ದು, ಈಗಾಗಲೇ ಬಿತ್ತನೆ ಮಾಡಿರುವ ಬೆಳೆಗಳು ಮಳೆಗಾಗಿ ಕಾಯುತ್ತಿವೆ.

ರಾಜ್ಯದ ಹಲವು ಭಾಗಗಳಲ್ಲಿ ಬರದ ಪರಿಸ್ಥಿತಿ ಉಲ್ಬಣಗೊಂಡಿರುವ ಹಿನ್ನೆಲೆಯಲ್ಲಿ ಸರ್ಕಾರವು ವಿಪತ್ತು ನಿರ್ವಹಣೆಗೆ ಜಿಲ್ಲಾ ಉಸ್ತುವಾರಿ ಸಚಿವರನ್ನು ನೇಮಿಸಿ ಕುಡಿಯುವ ನೀರಿನ ಪೂರೈಕೆಗೆ ಆದ್ಯತೆ ನೀಡಿದೆ. ಬರಪೀಡಿತ ಪ್ರದೇಶಗಳ ಘೋಷಣೆ ಕುರಿತೂ ನಿಯಮಾನುಸಾರ ಪರಿಶೀಲನೆ ನಡೆಯುತ್ತಿದೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲೂ ಮೋಡಗಳು ಕಾಣಿಸಿಕೊಂಡರೂ ಮಳೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಜುಲೈ ತಿಂಗಳ ಅರ್ಧ ಭಾಗ ಕಳೆದರೂ ಸಮರ್ಪಕ ಮಳೆಯಾಗದ ಕಾರಣ ಭೂಮಿ ಸಿದ್ಧಪಡಿಸಿಕೊಂಡ ರೈತರು ಬಿತ್ತನೆ ಕಾರ್ಯ ಆರಂಭಿಸಲು ಸಾಧ್ಯವಾಗುತ್ತಿಲ್ಲ. ಈಗಾಗಲೇ ಬಿತ್ತನೆ ಮಾಡಿರುವ ಬೆಳೆಗಳು ಒಣಗುವ ಭೀತಿಯಲ್ಲಿವೆ.

ಜಿಲ್ಲೆಯ ಹಲವು ಕೆರೆಗಳು ನೀರಿನ ಕೊರತೆಯಿಂದ ಬರಿದಾಗುತ್ತಿದ್ದು, ರೈತರು ಹಾಗೂ ಜಾನುವಾರು ಸಾಕಾಣಿಕೆದಾರರಲ್ಲಿ ಆತಂಕ ಮನೆಮಾಡಿದೆ. ಮಳೆಗಾಗಿ ಗ್ರಾಮೀಣ ಪ್ರದೇಶದ ರೈತರು ಆಕಾಶದತ್ತ ಕಾದು ನೋಡುತ್ತಿರುವ ಪರಿಸ್ಥಿತಿ ನಿರ್ಮಾಣವಾಗಿದೆ.

ಜಿಲ್ಲೆಯಲ್ಲಿ ಈ ವರ್ಷ ಜನವರಿಯಿಂದ ಜುಲೈ ಆರಂಭದವರೆಗೆ ವಾಡಿಕೆಗಿಂತ ಹೆಚ್ಚು ಮಳೆಯಾಗಿದ್ದರೂ, ಜೂನ್ ಕೊನೆಯ ವಾರದಿಂದ ಮಳೆ ಸಂಪೂರ್ಣ ಕೈಕೊಟ್ಟಿರುವುದು ಕೃಷಿ ಚಟುವಟಿಕೆಗಳಿಗೆ ಹಿನ್ನಡೆಯಾಗಿದೆ.

ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ 69,548 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ನಿಗದಿಪಡಿಸಲಾಗಿದ್ದು, ರಾಗಿ, ಮುಸುಕಿನ ಜೋಳ, ತೊಗರಿ, ನೆಲಗಡಲೆ ಸೇರಿದಂತೆ ವಿವಿಧ ಬೆಳೆಗಳಿಗೆ ಅಗತ್ಯ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳನ್ನು ಸರ್ಕಾರ ಲಭ್ಯವಾಗುವಂತೆ ಕ್ರಮ ಕೈಗೊಂಡಿದೆ. ರೈತ ಸಂಪರ್ಕ ಕೇಂದ್ರಗಳಿಗೆ ಈಗಾಗಲೇ ಬಿತ್ತನೆ ಬೀಜಗಳನ್ನು ಪೂರೈಸಲಾಗಿದ್ದು, ರೈತರಿಗೆ ವಿತರಣೆ ಕಾರ್ಯವೂ ಪ್ರಗತಿಯಲ್ಲಿದೆ.

ಜಾನುವಾರುಗಳಿಗೆ ಜಿಲ್ಲೆಯಲ್ಲಿ ಸುಮಾರು 2.93 ಲಕ್ಷ ಟನ್ ಮೇವು ಲಭ್ಯವಿದ್ದು, ಮುಂದಿನ 42 ವಾರಗಳಿಗೆ ಸಾಕಾಗುವಷ್ಟು ದಾಸ್ತಾನು ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಮಳೆ ಕೊರತೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತವು 24 ಗಂಟೆಗಳ ತುರ್ತು ಕಾರ್ಯಾಚರಣೆ ಕೇಂದ್ರವನ್ನು ತೆರೆಯುವ ಮೂಲಕ ಹವಾಮಾನ ಮುನ್ಸೂಚನೆಗಳ ಬಗ್ಗೆ ರೈತರಿಗೆ ನಿರಂತರ ಮಾಹಿತಿ ನೀಡುತ್ತಿದೆ. ಭಾರತೀಯ ಹವಾಮಾನ ಇಲಾಖೆ ಹಾಗೂ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಸೂಚನೆಗಳಂತೆ ರೈತರಿಗೆ ಜಾಗೃತಿ ಮೂಡಿಸಲಾಗುತ್ತಿದೆ.

ತಜ್ಞರ ಪ್ರಕಾರ, ಮುಂದಿನ ದಿನಗಳಲ್ಲಿ ಸಮರ್ಪಕ ಮಳೆಯಾಗದಿದ್ದರೆ ಕೃಷಿ ಉತ್ಪಾದನೆ ಕುಸಿತ, ಮೇವು ಕೊರತೆ, ಜಾನುವಾರುಗಳ ಆರೋಗ್ಯ ಸಮಸ್ಯೆ ಹಾಗೂ ಕುಡಿಯುವ ನೀರಿನ ಅಭಾವ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆ ಇದೆ.

ಜಿಲ್ಲೆಯ ನಾಲ್ಕೂ ತಾಲೂಕುಗಳು ಪೂರ್ವ ಒಣವಲಯಕ್ಕೆ ಸೇರಿರುವುದರಿಂದ ಎಲ್–ನಿನೊ ಪರಿಣಾಮ ಹೆಚ್ಚು ಕಾಣಿಸಿಕೊಳ್ಳುತ್ತಿದೆ. ಅನಿಯಮಿತ ಮಳೆ ಹಾಗೂ ತೇವಾಂಶದ ಕೊರತೆಯಿಂದ ತೋಟಗಾರಿಕೆ ಬೆಳೆಗಳ ಮೇಲೂ ಪ್ರತಿಕೂಲ ಪರಿಣಾಮ ಉಂಟಾಗುವ ಸಾಧ್ಯತೆ ಇರುವುದರಿಂದ ರೈತರು ತೋಟಗಾರಿಕೆ ಇಲಾಖೆಯ ತಾಂತ್ರಿಕ ಸಲಹೆಗಳನ್ನು ಪಾಲಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ‘ಸರ್ವ ರೋಗಗಳಿಗೆ ಯೋಗವು ದಿವ್ಯ ಔಷಧ’

ತುಮಕೂರು



ಮನುಷ್ಯನ ಮನಸ್ಸು, ದೇಹದ ಆಧ್ಯಾತ್ಮಿಕ ಅಂಶಗಳಲ್ಲಿ ಕಂಡುಬರುವ ಎಲ್ಲಾ ನ್ಯೂನ್ಯತೆಗಳಿಗೆ ಯೋಗವು ಸಿದ್ಧ ಔಷಧವಾಗಿದೆ. ನಿತ್ಯ ಯೋಗಾಭ್ಯಾಸ ಮಾಡುವುದರ ಮೂಲಕ ಆರೋಗ್ಯಯುತವಾದ ಜೀವನ ನಡೆಸಬಹುದು. ಸರ್ವರೋಗಗಳಿಗೆ ಯೋಗ ದಿವ್ಯ ಔಷಧ ಎಂದು ನಿವೃತ್ತ ಅಧಿಕಾರಿ ನಾಗರಾಜು ಹೇಳಿದರು.

ಶುದ್ಧಿ ಚಾರಿಟಬಲ್ ಅಂಡ್ ಎಜುಕೇಷನಲ್ ಟ್ರಸ್ಟ್‌ನಿಂದ ಬೆಳಗುಂಬದಲ್ಲಿ ನೂತನವಾಗಿ ಪ್ರಾರಂಭವಾಗಿರುವ ಶ್ರೀ ಚಂದ್ರ ಯೋಗಮಂದಿರದಲ್ಲಿ ಬುಧವಾರ ಬೆಳಿಗ್ಗೆ ಯೋಗಾಸನ ತರಗತಿಗಳನ್ನು ಪ್ರಾರಂಭ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಪ್ರೊ.ಕೆ. ಚಂದ್ರಣ್ಣನವರು ಪ್ರಾರಂಭಿಸಿರುವ ಈ ಯೋಗಮಂದಿರ ಶಾಶ್ವತವಾಗಿ ಉಳಿಯುತ್ತದೆ. ಕುವೆಂಪುರವರು ಹೇಳಿದಂತೆ ‘ನಾನಳಿವೆ ನೀನಳಿವೆ ಮೂಡುವುದು ಮೂಡುವುದು ನಮ್ಮೆಲುಬುಗಳ ಮೇಲೆ ನವಭಾರತದ ಲೀಲೆ’ ಎಂಬುವಂತೆ ನಾವೆಲ್ಲ ಅಳಿದರೂ ಗುರು ಚಂದ್ರಣ್ಣನವರ ಸಾಧನೆ ಈ ಯೋಗಮಂದಿರದ ಮುಖಾಂತರ ಉಳಿಯುತ್ತದೆ. ಎಂದು ಶ್ಲಾಘಿಸಿದರು.

ಪ್ರಜಾಪ್ರಗತಿ ಸಂಪಾದಕ ಡಾ.ಎಸ್. ನಾಗಣ್ಣ ಅವರು ಯೋಗದ ಮಹತ್ವವನ್ನು ತಿಳಿಸುತ್ತಾ, ಸಾಮಾಜಿಕವಾದ ಇಂತಹ ಜವಾಬ್ದಾರಿಯುತ ಕಾರ್ಯಗಳಿಂದಾಗಿ ಸಮಾಜದ ಆರೋಗ್ಯ ಉತ್ತಮಪಡಿಸಬಹುದಾಗಿದೆ. ಈ ಯೋಗಮಂದಿರದ ಮುಖಾಂತರ ಕೇವಲ ಯೋಗಾಭ್ಯಾಸಿಗಳ ಆರೋಗ್ಯ, ಈ ಮುಖಾಂತರ ಕುಟುಂಬ, ಸಮಾಜ ಆರೋಗ್ಯ ಉತ್ತಮವಾಗುತ್ತದೆ ಎಂದು ತಿಳಿಸಿದರು. ನಿವೃತ್ತ ಅಧಿಕಾರಿ ಬಿ.ಸಿ. ವಿಜಯಕುಮಾರ್ ಅವರು, ಬೆಳಗುಂಬ ಗ್ರಾಮದ ಹಾಗೂ ಸುತ್ತಮುತ್ತಲಿನ ಪ್ರದೇಶದ ಜನ ಯೋಗಮಂದಿರದ ಪ್ರಯೋಜನ ಪಡೆಯುವಂತಾಗಬೇಕು. ಇದಕ್ಕಾಗಿ ತಾವು ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಹೇಳಿದರು.

ಯೋಗ ಶಿಕ್ಷಕರಾದ ರಮೇಶ್, ಸತೀಶ್, ಲೋಕೇಶ್, ಶಿಲ್ಪ ಟಿ.ಎಸ್, ಅವರು ನಿತ್ಯ ಯೋಗಾಭ್ಯಾಸ ಮಾಡುವುದರ ಮಹತ್ವ ತಿಳಿಸಿಕೊಟ್ಟರು. ಪ್ರತಿ ನಿತ್ಯ ಬೆಳಿಗ್ಗೆ 6 ಗಂಟೆಯಿಂದ 7 ಗಂಟೆಯ ತನಕ ಲೋಕೇಶ್ ಹಾಗೂ ಸಂಜೆ 4 ರಿಂದ 5 ಗಂಟೆಯ ತನಕ ಶಿಲ್ಪ ಟಿ.ಎಸ್. ಅವರು ಯೋಗತರಗತಿಗಳನ್ನು ತೆಗೆದುಕೊಳ್ಳುತ್ತಾರೆ. ಈ ಭಾಗದ ಆಸಕ್ತರು ಇವರಿಂದ ತರಬೇತಿ ಪಡೆಯಬೇಕೆಂದು ಪ್ರೊ.ಕೆ. ಚಂದ್ರಣ್ಣ ವಿನಂತಿಸಿದರು.

# ಎಸ್‌ಐಆರ್‌ಗೆ ವೇಗ: ಶೇ.100 ನಮೂನೆ ವಿತರಣೆ, ಶೇ.60 ಗಣಕೀಕರಣ ಪೂರ್ಣ

ಶಿಡ್ಲಘಟ್ಟ

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರವು ಮಹತ್ವದ ಪ್ರಗತಿ ಸಾಧಿಸಿದ್ದು, ಕ್ಷೇತ್ರದ ಶೇ.100 ಮತದಾರರಿಗೆ ಎನ್ಯುಮರೇಷನ್ ನಮೂನೆಗಳನ್ನು ವಿತರಿಸಲಾಗಿದೆ ಎಂದು ಮತದಾರರ ನೋಂದಣಾಧಿಕಾರಿ ಎಸ್.ಎಸ್. ಅಬೀದ್ ತಿಳಿಸಿದ್ದಾರೆ.

ಪ್ರಜಾಸೌಧದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂನ್ 16ರ ಅನ್ವಯ ಕ್ಷೇತ್ರದಲ್ಲಿ ಒಟ್ಟು 2,09,793 ಮತದಾರರಿದ್ದು, ಅವರಲ್ಲಿ 2,09,752 ಮಂದಿಗೆ ಎನ್ಯುಮರೇಷನ್ ನಮೂನೆಗಳನ್ನು ವಿತರಿಸುವ ಮೂಲಕ ಶೇ.100ರಷ್ಟು ವಿತರಣಾ ಕಾರ್ಯ ಪೂರ್ಣಗೊಳಿಸಲಾಗಿದೆ ಎಂದು ಹೇಳಿದರು.

ಮಂಗಳವಾರ ಸಂಜೆ 6 ಗಂಟೆಯ ವೇಳೆಗೆ 1,26,665 ಎನ್ಯುಮರೇಷನ್ ನಮೂನೆಗಳ ಗಣಕೀಕರಣ ಪೂರ್ಣಗೊಂಡಿದ್ದು, ಇದು ಒಟ್ಟು ಪ್ರಕ್ರಿಯೆಯ ಶೇ.60ರಷ್ಟು ಸಾಧನೆಯಾಗಿದೆ ಎಂದು ವಿವರಿಸಿದರು. ಗಣತಿ ಪ್ರಕ್ರಿಯೆಯಲ್ಲಿ ನಮೂನೆಗಳನ್ನು ಸ್ವೀಕರಿಸದವರು, ಶಾಶ್ವತವಾಗಿ ಸ್ಥಳಾಂತರಗೊಂಡವರು, ಮೃತಪಟ್ಟವರು, ಒಂದಕ್ಕಿಂತ ಹೆಚ್ಚು ಮತಗಟ್ಟೆಗಳಲ್ಲಿ ಹೆಸರು ಹೊಂದಿರುವವರು ಸೇರಿದಂತೆ ವಿವಿಧ ಕಾರಣಗಳಿಂದ 2,583 ಮಂದಿಯನ್ನು ತಾತ್ಕಾಲಿಕವಾಗಿ ಅನರ್ಹ ಮತದಾರರೆಂದು ಗುರುತಿಸಲಾಗಿದೆ. ಆದರೆ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಳ್ಳುವ ಮುನ್ನ ಮತ್ತೊಮ್ಮೆ ಸ್ಥಳ ಪರಿಶೀಲನೆ ನಡೆಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಹಾಯಕ ಮತದಾರರ ನೋಂದಣಾಧಿಕಾರಿ ಹಾಗೂ ತಹಸೀಲ್ದಾರ್ ಎನ್. ಗಗನಸಿಂಧು ಮಾತನಾಡಿ, 2002ಕ್ಕೂ ಮೊದಲು ತಮ್ಮ ಅಥವಾ ತಂದೆಯ ಹೆಸರು ಮತದಾರರ ಪಟ್ಟಿಯಲ್ಲಿ ಲಭ್ಯವಾಗದಿದ್ದರೂ ಮತದಾರರು ಆತಂಕಪಡುವ ಅಗತ್ಯವಿಲ್ಲ. ಈ ಕುರಿತು ಘೋಷಣೆ ನೀಡಿ, ಮತಗಟ್ಟೆ ಮಟ್ಟದ ಅಧಿಕಾರಿಯೊಂದಿಗೆ ಎನ್ಯುಮರೇಷನ್ ನಮೂನೆಯಲ್ಲಿ ಸಹಿ ಮಾಡಿದರೆ ಹೆಸರು ಮತದಾರರ ಪಟ್ಟಿಯಲ್ಲಿ ಸೇರಿಸಲು ಅವಕಾಶವಿದೆ ಎಂದು ಸ್ಪಷ್ಟಪಡಿಸಿದರು.

# ರಸ್ತೆ ಉಬ್ಬು ನಿರ್ಮಾಣಕ್ಕೆ ಮೆಚ್ಚುಗೆ

ಕೋಲಾರ

ಆಸ್ಪತ್ರೆ ಮತ್ತು ಶಾಲಾ ವಲಯವಾದ ಕೋಲಾರದ ಎಸ್‌ಎನ್‌ಆರ್ ಆಸ್ಪತ್ರೆ/ಮಹಿಳಾ ಸಮಾಜ ವೃತ್ತದಲ್ಲಿ ಆಸ್ಪತ್ರೆಗೆ ಚಿಕಿತ್ಸೆಗೆ ಬರುವವರು, ಶಾಲಾ ಮಕ್ಕಳು ಮತ್ತು ಹಿರಿಯ ನಾಗರಿಕರು ವೇಗವಾಗಿ ಬರುವ ವಾಹನಗಳಿಂದ ತಪ್ಪಿಸಿಕೊಂಡು ರಸ್ತೆ ದಾಟುವುದು ಬಲು ದುಸ್ತರವಾಗಿತ್ತು.

ಹಿರಿಯ ನಾಗರಿಕರು ಮತ್ತು ಕನ್ನಡ ಪರ ಸಂಘಟನೆಗಳ ಮನವಿಗೆ ಸ್ಪಂದಿಸಿ, ಸಮಸ್ಯೆಯ ಮನಗಂಡು ಸಂಚಾರ ಪೊಲೀಸ್ ಠಾಣೆ ಮತ್ತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಇತ್ತೀಚಿಗೆ ವೇಗ ನಿಯಂತ್ರಕ ರಸ್ತೆ ಉಬ್ಬುಗಳ ಹಾಕಲು ಕ್ರಮ ಕೈಗೊಂಡು, ರಸ್ತೆ ಉಬ್ಬುಗಳ ನಿರ್ಮಿಸಿ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ.

ರಸ್ತೆ ಉಬ್ಬು ನಿರ್ಮಿಸಲು ಮನವಿ ಮಾಡಿದ್ದ ಹಿರಿಯ ನಾಗರಿಕರಾದ ಕೆ.ಎನ್ ರವೀಂದ್ರನಾಥ್, ಬೆಮೆಲ್ ಶ್ರೀನಿವಾಸ್, ಶಂಕರನಾರಾಯಣಪ್ಪ, ನಾರಾಯಣ್ ಹಾಗೂ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಪಿ.ನಾರಾಯಣಪ್ಪ ಮತ್ತು ಶ್ರೀ ಭುವನೇಶ್ವರಿ ಕನ್ನಡ ಸಂಘದ ಅಧ್ಯಕ್ಷರಾದ ಕೆ.ಆರ್ ತ್ಯಾಗರಾಜ್ ಎಲ್ಲರ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟ ಅಧಿಕಾರಿಗಳಿಗೆ ಧನ್ಯವಾದಗಳ ತಿಳಿಸಿದ್ದಾರೆ/ಅರ್ಪಿಸಿದ್ದಾರೆ.

# ‘ಮತದಾರರ ಪಟ್ಟಿಯಲ್ಲಿ ಹೆಸರು ಖಚಿತಪಡಿಸಿಕೊಳ್ಳಿ’

ತುಮಕೂರು

ಚುನಾವಣಾ ಆಯೋಗ ಕೈಗೊಂಡಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಕೇವಲ ಎನ್ಯೂಮರೇಷನ್ ಫಾರಂ ಅನ್ನು ಬಿಎಲ್‌ಒಗಳಿಗೆ ಸಲ್ಲಿಸುವುದಷ್ಟೇ ಸಾಕಾಗುವುದಿಲ್ಲ. ಬಳಿಕ ಪ್ರಕಟವಾಗುವ ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರಿರುವುದನ್ನು ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಪರಿಶೀಲಿಸಬೇಕು ಎಂದು ಮಾಜಿ ಶಾಸಕ ಡಾ. ಎಸ್. ರಫೀಕ್ ಅಹಮದ್ ಕರೆ ನೀಡಿದರು.

ನಗರದಲ್ಲಿರುವ ತಮ್ಮ ಗೃಹ ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಎಸ್‌ಐಆರ್ ಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಒಂದು ವೇಳೆ ಕರಡು ಪಟ್ಟಿಯಲ್ಲಿ ಹೆಸರು ಕೈಬಿಟ್ಟಿದ್ದರೆ, ತಮ್ಮ ಬಳಿ ಇರುವ ಸ್ವೀಕೃತಿ ಪತ್ರದೊಂದಿಗೆ ಆಕ್ಷೇಪಣೆ ಸಲ್ಲಿಸಿ ಹೆಸರು ಸೇರ್ಪಡೆ ಮಾಡಿಸಿಕೊಳ್ಳುವ ಜವಾಬ್ದಾರಿ ಮತದಾರರದ್ದೇ ಆಗಿದೆ ಎಂದು ತಿಳಿಸಿದರು.

ಅಂತಿಮ ಮತದಾರರ ಪಟ್ಟಿಯಿಂದ ಹೆಸರು ಕೈಬಿಟ್ಟರೆ ಅದನ್ನು ಮತ್ತೆ ಸೇರಿಸಿಕೊಳ್ಳುವುದು ಕಷ್ಟಕರವಾಗುತ್ತದೆ. ಜೊತೆಗೆ ವಿವಿಧ ಸರ್ಕಾರಿ ಸೌಲಭ್ಯಗಳಿಂದ ವಂಚಿತರಾಗುವ ಸಾಧ್ಯತೆಯೂ ಇದೆ ಎಂದು ಅವರು ಎಚ್ಚರಿಕೆ ನೀಡಿದರು.

ರಾಜ್ಯದಲ್ಲಿ ಎಸ್‌ಐಆರ್ ಪ್ರಕ್ರಿಯೆ ಆರಂಭವಾಗಿ ಈಗಾಗಲೇ 15 ದಿನಗಳು ಕಳೆದಿದ್ದು, ಮುಂದಿನ 15 ದಿನಗಳು ಅತ್ಯಂತ ಮಹತ್ವದ್ದಾಗಿವೆ. ಪ್ರತಿ ಬೂತ್‌ನ ಬಿಎಲ್‌ಒಗಳು ತಮ್ಮ ವ್ಯಾಪ್ತಿಯ ಮತದಾರರು ಎನ್ಯೂಮರೇಷನ್ ಫಾರಂ ಸಲ್ಲಿಸಿದ್ದಾರೆಯೇ ಎಂಬುದನ್ನು ಪರಿಶೀಲಿಸಬೇಕು. ಫಾರಂ ಸಲ್ಲಿಸಿದ ಬಳಿಕ ದೊರೆಯುವ ಸ್ವೀಕೃತಿ ಪತ್ರವನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು.

2002ರ ಮತದಾರರ ಪಟ್ಟಿಯ ಮಾಹಿತಿ ಇಲ್ಲದಿದ್ದರೂ ಆತಂಕಪಡಬೇಕಿಲ್ಲ. ಕುಟುಂಬದ ಹಿರಿಯ ಮತದಾರರ ವಿವರಗಳನ್ನು ಉಲ್ಲೇಖಿಸಿ ಅಗತ್ಯ ಮಾಹಿತಿಯನ್ನು ಸಲ್ಲಿಸಲು ಅವಕಾಶವಿದೆ. ಆದ್ದರಿಂದ ಪ್ರತಿಯೊಬ್ಬರೂ ಎಸ್‌ಐಆರ್ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಮನವಿ ಮಾಡಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ಡಾ. ಎಸ್. ಷಫಿ ಅಹಮದ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೂ ಪ್ರತಿಯೊಬ್ಬ ಮತದಾರರ ಹಕ್ಕು ರಕ್ಷಿಸುವ ನಿಟ್ಟಿನಲ್ಲಿ ಕ್ರಮ ಕೈಗೊಂಡಿದ್ದಾರೆ ಎಂದರು.

ಈ ಕಾರ್ಯವನ್ನು ಪಕ್ಷದ ಜವಾಬ್ದಾರಿಯಂತೆ ಪರಿಗಣಿಸಿ, ಪ್ರತಿ ಬಿಎಲ್‌ಒ ಹೆಚ್ಚು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು. ದಲಿತರು ಹಾಗೂ ಕೊಳಚೆ ಪ್ರದೇಶದ ನಿವಾಸಿಗಳಲ್ಲಿ ಇರುವ ಜಾಗೃತಿಯಂತೆ ಇತರ ವರ್ಗಗಳಲ್ಲಿಯೂ ಅರಿವು ಮೂಡಬೇಕು. ಮುಂದಿನ ದಿನಗಳಲ್ಲಿ ಇನ್ನಷ್ಟು ಜಾಗೃತಿ ಸಭೆಗಳನ್ನು ಆಯೋಜಿಸಲಾಗುವುದು ಎಂದು ಹೇಳಿದರು.


ನಗರಸಭೆಯ ಮಾಜಿ ಸದಸ್ಯ ತರುಣೇಶ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆ ಮತದಾನದ ಹಕ್ಕು ರಕ್ಷಿಸುವ ಮಹತ್ವದ ಕಾರ್ಯವಾಗಿದ್ದು, ಅಗತ್ಯವಿದ್ದರೆ ಒಂದು ದಿನದ ಕೆಲಸ ಬಿಟ್ಟು ಈ

# ಕಾಯಕಲ್ಪಕ್ಕಾಗಿ ಕಾಯುತ್ತಿರುವ ಐತಿಹಾಸಿಕ ಶ್ರೀ ಹಿರಣೇಶ್ವರ ದೇವಾಲಯ

ಬಾಗೇಪಲ್ಲಿ

ಇತಿಹಾಸದ ವೈಭವವನ್ನು ತನ್ನೊಳಗೆ ಹೊತ್ತಿರುವ ಗುಮ್ಮನಾಯಕನಪಾಳ್ಯ ಇಂದು ನಿರ್ಲಕ್ಷ್ಯದ ಕಾರಣದಿಂದ ತನ್ನ ಪುರಾತನ ಮಹಿಮೆಯನ್ನು ಕಳೆದುಕೊಳ್ಳುವ ಸ್ಥಿತಿಗೆ ತಲುಪಿದೆ. ಒಮ್ಮೆ 108 ದೇವಾಲಯಗಳ ಪವಿತ್ರ ಕ್ಷೇತ್ರವೆಂದು ಪ್ರಸಿದ್ಧಿಯಾಗಿದ್ದ ಈ ಪಾಳ್ಯದಲ್ಲಿ ಇಂದು ಕೆಲವೇ ದೇವಾಲಯಗಳು ಉಳಿದಿದ್ದು, ಅವುಗಳಲ್ಲಿ ಪ್ರಮುಖವಾದ ಶ್ರೀ ಹಿರಣೇಶ್ವರಸ್ವಾಮಿ ದೇವಾಲಯ ಕಾಯಕಲ್ಪಕ್ಕಾಗಿ ಕಾಯುತ್ತಿದೆ.

ಕಾಲದ ಹೊಡೆತ, ನಿಧಿ ಶೋಧಕರ ಹಾವಳಿ ಹಾಗೂ ನಿರ್ವಹಣೆಯ ಕೊರತೆಯಿಂದ ಅನೇಕ ಪುರಾತನ ದೇವಾಲಯಗಳು ನಾಶವಾಗಿವೆ. ಶಿಲ್ಪಕಲೆಯ ಅದ್ಭುತ ಮಾದರಿಯಾಗಿರುವ ರಾಮ ದೇವಾಲಯ ಇಂದು ಜಾನುವಾರುಗಳ ಕೊಟ್ಟಿಗೆಯಾಗಿ ಮಾರ್ಪಟ್ಟಿರುವುದು ವಿಷಾದನೀಯ. ಪರಶ ವೆಂಕಟರಮಣಸ್ವಾಮಿ





ದೇವಾಲಯ ಗಿಡಗಂಟಿಗಳ ಮಧ್ಯೆ ಕಣ್ಮರೆಯಾಗಿದ್ದು, ಮರಗಳ ಬೇರುಗಳಿಂದ ದೇವಾಲಯದ ಗೋಡೆಗಳೇ ಸೀಳಿಕೊಂಡಿವೆ.

ಇಂತಹ ಪರಿಸ್ಥಿತಿಯ ನಡುವೆಯೂ ರಸ್ತೆಯ ಪಕ್ಕದಲ್ಲಿರುವ ಶ್ರೀ ಹಿರಣೇಶ್ವರಸ್ವಾಮಿ ದೇವಾಲಯದಲ್ಲಿ ನಿತ್ಯ ಪೂಜೆಗಳು ನಡೆಯುತ್ತಿದ್ದು, ಭಕ್ತರ ಆರಾಧನಾ ಕೇಂದ್ರವಾಗಿ ಉಳಿದಿರುವುದು ಸಮಾಧಾನಕರ ಸಂಗತಿಯಾಗಿದೆ.

ಬಾಗೇಪಲ್ಲಿಯಿಂದ ಪಾತಪಾಳ್ಯಕ್ಕೆ ತೆರಳುವ ಮಾರ್ಗದಲ್ಲಿರುವ ಭೈರವಬೆಟ್ಟ ಹಾಗೂ ರಾಮಗಿರಿ ತಪ್ಪಲಿನಲ್ಲಿ ಈ ದೇವಾಲಯ ನೆಲೆಗೊಂಡಿದೆ. ಪುರಾಣಗಳ ಪ್ರಕಾರ ಋಷಿ ಪರಶುರಾಮರು ಇಲ್ಲಿ ಶಿವಲಿಂಗಗಳನ್ನು ಪ್ರತಿಷ್ಠಾಪಿಸಿದ್ದು, ರಾಮಗಿರಿಯಲ್ಲಿ ತಪಸ್ಸು ಮಾಡಿದ ಸಂದರ್ಭದಲ್ಲಿ ಶಿವ–ಪಾರ್ವತಿಯರು ಪ್ರತ್ಯಕ್ಷರಾಗಿ ಆಶೀರ್ವದಿಸಿದ್ದರೆಂದು ಹೇಳಲಾಗುತ್ತದೆ. ನಾಲ್ಕು ದಿಕ್ಕುಗಳಲ್ಲಿ ಹಾಗೂ ಮಧ್ಯಭಾಗದಲ್ಲಿ ಒಟ್ಟು ಐದು ಲಿಂಗಗಳನ್ನು ಪ್ರತಿಷ್ಠಾಪಿಸಿದ್ದರಿಂದ ಈ ಕ್ಷೇತ್ರವು ಪಂಚಲಿಂಗೇಶ್ವರ ಕ್ಷೇತ್ರವೆಂದೂ ಪ್ರಸಿದ್ಧಿಯಾಗಿದೆ.

ವಿಜಯನಗರ ಸಾಮ್ರಾಜ್ಯದ ಕಾಲದಲ್ಲೂ ಈ ದೇವಾಲಯ ಮಹತ್ವ ಪಡೆದಿತ್ತು. ಸೇನಾಪತಿ ಹಿರಣ್ಣಯ್ಯ ಹಾಗೂ ಕೆಂಪಣ್ಣರಾಯರೊಂದಿಗೆ ಸಂಬಂಧ ಹೊಂದಿರುವ ಈ ಕ್ಷೇತ್ರವು ನಂತರ "ಹಿರಣೇಶ್ವರ ದೇವಾಲಯ" ಎಂಬ ಹೆಸರಿನಿಂದ ಪ್ರಸಿದ್ಧಿಯಾಯಿತು. ದೇವಾಲಯದಲ್ಲಿರುವ ಪ್ರತಿಮೆಗಳು ಹಾಗೂ ಶಿಲಾಶಾಸನಗಳು ಆ ಕಾಲದ ಇತಿಹಾಸಕ್ಕೆ ಸಾಕ್ಷಿಯಾಗಿವೆ.

ಗುಮ್ಮನಾಯಕನಪಾಳ್ಯದ ಪಾಳೇಗಾರರ ಮೂಲಪುರುಷ ಖಾದ್ರಿಪತಿನಾಯಕರು ದೇವಾಲಯದ ಪೂಜಾ ಕೈಂಕರ್ಯಗಳಿಗಾಗಿ ಹಲವು ಗ್ರಾಮಗಳನ್ನು ದಾನವಾಗಿ ನೀಡಿದ್ದರು. ಒಮ್ಮೆ ದೇವಾಲಯಕ್ಕೆ ಸುಮಾರು 30 ಎಕರೆ ಭೂಮಿ ಇದ್ದು, ಅದರ ಆದಾಯದಿಂದ ಪೂಜೆ ಹಾಗೂ ಉತ್ಸವಗಳು ವಿಜೃಂಭಣೆಯಿಂದ ನಡೆಯುತ್ತಿದ್ದವು. ಆದರೆ ಭೂ ಸುಧಾರಣಾ ಕಾಯ್ದೆಯ ನಂತರ ದೇವಾಲಯದ ಆದಾಯ ಕುಂಠಿತಗೊಂಡಿತು.

ಇಂದಿಗೂ ನಿತ್ಯ ಪೂಜೆ, ಅಖಂಡ ದೀಪಾರಾಧನೆ ಹಾಗೂ ಕಲ್ಯಾಣೋತ್ಸವಗಳು ನಡೆಯುತ್ತಿವೆ. ಆದರೆ ಸುಮಾರು 70 ವರ್ಷಗಳಿಂದ ಬ್ರಹ್ಮರಥೋತ್ಸವ ನಿಂತಿದ್ದು, ಬೃಹತ್ ರಥದ ಚಕ್ರಗಳು ನೆಲಕಚ್ಚಿವೆ. ರಥದ ಸಾಮಗ್ರಿಗಳು ಗೆದ್ದಲು ಮತ್ತು ತುಕ್ಕಿನಿಂದ ಹಾಳಾಗುತ್ತಿವೆ.


ಉತ್ತಮ ಶಿಲ್ಪಕಲೆಯನ್ನು ಹೊಂದಿರುವ ಈ ದೇವಾಲಯ ಕೇವಲ ಧಾರ್ಮಿಕ ಕೇಂದ್ರವಲ್ಲ, ಇತಿಹಾಸ ಮತ್ತು ಸಂಸ್ಕೃತಿಯ ಜೀವಂತ ಸಾಕ್ಷಿಯಾಗಿದೆ.

ಹೀಗಾಗಿ ಶ್ರೀ ಹಿರಣೇಶ್ವರ ದೇವಾಲಯ ಸೇರಿದಂತೆ ಗುಮ್ಮನಾಯಕನಪಾಳ್ಯದ ಪುರಾತನ ದೇವಾಲಯಗಳ ಜೀರ್ಣೋದ್ಧಾರಕ್ಕೆ ಸರ್ಕಾರ ಹಾಗೂ ಪುರಾತತ್ವ ಇಲಾಖೆ ತಕ್ಷಣ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯ ಕೇಳಿಬರುತ್ತಿದೆ.

ಹಬ್ಬ–ಹರಿದಿನಗಳಲ್ಲಿ ವಿಶೇಷ ಪೂಜೆ, ತೀರ್ಥಪ್ರಸಾದ ವ್ಯವಸ್ಥೆ, ವಾರ್ಷಿಕ ಬ್ರಹ್ಮರಥೋತ್ಸವ ಪುನರಾರಂಭ ಹಾಗೂ ದೇವಾಲಯಗಳ ಸಂರಕ್ಷಣೆಗೆ ವಿಶೇಷ ಯೋಜನೆ ರೂಪಿಸುವ ಅಗತ್ಯವಿದೆ.

"ನೂರು ಹೊಸ ದೇವಾಲಯಗಳನ್ನು ಕಟ್ಟುವುದಕ್ಕಿಂತ ಒಂದು ಪುರಾತನ ದೇವಾಲಯವನ್ನು ಉಳಿಸುವುದು ಶ್ರೇಷ್ಠ" ಎಂಬ ಮಾತಿನಂತೆ, ಇತಿಹಾಸದ ವೈಭವವನ್ನು ಸಾರುವ ಶ್ರೀ ಹಿರಣೇಶ್ವರ ದೇವಾಲಯದ ಕಾಯಕಲ್ಪಕ್ಕೆ ಸರ್ಕಾರ ಹಾಗೂ ಸಾರ್ವಜನಿಕರು ಕೈಜೋಡಿಸಬೇಕಾಗಿದೆ. ಇದು ನಮ್ಮ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಉಳಿಸುವ ಜವಾಬ್ದಾರಿಯೂ ಆಗಿದೆ.

ಬಾಗೇಪಲ್ಲಿಯಿಂದ ಪಾತಪಾಳ್ಯಕ್ಕೆ ತೆರಳುವ ಮಾರ್ಗದಲ್ಲಿರುವ ಭೈರವಬೆಟ್ಟ ಹಾಗೂ ರಾಮಗಿರಿ ತಪ್ಪಲಿನಲ್ಲಿ ಈ ದೇವಾಲಯ ನೆಲೆಗೊಂಡಿದೆ. ಪುರಾಣಗಳ ಪ್ರಕಾರ ಋಷಿ ಪರಶುರಾಮರು ಇಲ್ಲಿ ಶಿವಲಿಂಗಗಳನ್ನು ಪ್ರತಿಷ್ಠಾಪಿಸಿದ್ದು, ರಾಮಗಿರಿಯಲ್ಲಿ ತಪಸ್ಸು ಮಾಡಿದ ಸಂದರ್ಭದಲ್ಲಿ ಶಿವ-ಪಾರ್ವತಿಯರು ಪ್ರತ್ಯಕ್ಷರಾಗಿ ಆಶೀರ್ವದಿಸಿದ್ದರೆಂದು ಹೇಳಲಾಗುತ್ತದೆ. ನಾಲ್ಕು ದಿಕ್ಕುಗಳಲ್ಲಿ ಹಾಗೂ ಮಧ್ಯಭಾಗದಲ್ಲಿ ಒಟ್ಟು ಐದು ಲಿಂಗಗಳನ್ನು ಪ್ರತಿಷ್ಠಾಪಿಸಿದ್ದರಿಂದ ಈ ಕ್ಷೇತ್ರವು ಪಂಚಲಿಂಗೇಶ್ವರ ಕ್ಷೇತ್ರವೆಂದೂ ಪ್ರಸಿದ್ಧಿಯಾಗಿದೆ.





## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಜಾಗೃತಿ

ದೇವನಹಳ್ಳಿ

ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣ ಹೋಬಳಿಯ ಚೆನ್ನಹಳ್ಳಿ ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮ ಹಾಗೂ ಶಾಲಾ ಮಕ್ಕಳ ಜಾಥಾ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಸಂತಿ ಅಮರ್ ಅವರು ರಾಜ್ಯದ 5ನೇ ಹಣಕಾಸು ಆಯೋಗದ ಅಧ್ಯಕ್ಷ ಹಾಗೂ ಮಾಜಿ ಸಂಸದ ಸಿ. ನಾರಾಯಣಸ್ವಾಮಿ ಅವರಿಗೆ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕುರಿತು ಮಾಹಿತಿ ನೀಡಿ, ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ವಸಂತಿ ಅಮರ್, ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆ ನಡೆಯುತ್ತಿದ್ದು, ಅರ್ಹ ಮತದಾರರು ಅಗತ್ಯ ದಾಖಲೆಗಳನ್ನು ಸಲ್ಲಿಸುವ ಮೂಲಕ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಮುಂದುವರಿಯುವಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಜೂನ್ 30ರಿಂದ ಜುಲೈ 29ರವರೆಗೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯೂಮರೇಷನ್ ನಮೂನೆಗಳನ್ನು ಎರಡು ಪ್ರತಿಗಳಲ್ಲಿ ವಿತರಿಸಲಿದ್ದು, ಅವುಗಳನ್ನು ಭರ್ತಿ ಮಾಡಲು ಸಹಾಯ ಮಾಡುವುದರ ಜೊತೆಗೆ ಭರ್ತಿ ಮಾಡಿದ ನಮೂನೆಗಳನ್ನು ಸ್ವೀಕರಿಸಿ ರಸೀದಿ ನೀಡಲಿದ್ದಾರೆ ಎಂದು ವಿವರಿಸಿದರು.

ಭರ್ತಿ ಮಾಡಿದ ಅರ್ಜಿಗಳನ್ನು ಬಿಎಲ್‌ಒಗಳಿಗೆ ಸಲ್ಲಿಸಿದರೆ ಮಾತ್ರ ಮತದಾರರ ಪಟ್ಟಿಯಲ್ಲಿ ಹೆಸರು ಮುಂದುವರಿಯಲಿದೆ. ಸಲ್ಲಿಸದಿದ್ದರೆ ಹೆಸರು ಅನರ್ಹವಾಗುವ ಸಾಧ್ಯತೆ ಇರುವುದರಿಂದ ಪ್ರತಿಯೊಬ್ಬ ಮತದಾರರೂ ಈ ಪ್ರಕ್ರಿಯೆಗೆ ಸ್ಪಂದಿಸಬೇಕು ಎಂದು ಮನವಿ ಮಾಡಿದರು.

ಬಳಿಕ ಶಾಲಾ ಮಕ್ಕಳ ಜಾಗೃತಿ ಜಾಥಾಗೆ ಚಾಲನೆ ನೀಡಿ, ಎಸ್‌ಐಆರ್ ಕುರಿತು ಕರಪತ್ರಗಳನ್ನು ವಿತರಿಸಲಾಯಿತು. ನಂತರ ಬಿಎಲ್‌ಒ ಹಾಗೂ ಮತದಾರರ ಸೌಲಭ್ಯ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ರಾಮಕೃಷ್ಣಯ್ಯ, ಕಾರ್ಯನಿರ್ವಾಹಕ ಅಧಿಕಾರಿ ಮುನಿರಾಜು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನಾಗರಾಜಯ್ಯ, ಗ್ರಾಮ ಪಂಚಾಯಿತಿ ಸಿಬ್ಬಂದಿ, ಬಿಎಲ್‌ಒಗಳು, ಪ್ರೌಢಶಾಲೆಯ ಮುಖ್ಯ ಶಿಕ್ಷಕರು, ಶಾಲಾ ಮಕ್ಕಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಜಿಲ್ಲಾಧಿಕಾರಿ ಚಾಲನೆ

ದೇವನಹಳ್ಳಿ

ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದ ಅಂಗವಾಗಿ ದೇವನಹಳ್ಳಿ ಪಟ್ಟಣದ ತಾಲೂಕು ಆರೋಗ್ಯಾಧಿಕಾರಿ ಕಚೇರಿಯಲ್ಲಿ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ ಅವರು ಪುಟ್ಟ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ. ಕೆ.ಎನ್. ಅನುರಾಧ, ಮಕ್ಕಳ ಆರೋಗ್ಯಕರ ಹಾಗೂ ಸುರಕ್ಷಿತ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಪೋಲಿಯೋ ಲಸಿಕೆ ನೀಡಲಾಗುತ್ತಿದೆ. ಭಾರತವನ್ನು ಪೋಲಿಯೋ ಮುಕ್ತ ರಾಷ್ಟ್ರವೆಂದು ಘೋಷಿಸಲಾಗಿದ್ದರೂ, ಕೆಲವು ದೇಶಗಳಲ್ಲಿ ಇನ್ನೂ ಪೋಲಿಯೋ ಸೋಂಕಿನ ಪ್ರಕರಣಗಳು ಕಂಡುಬರುತ್ತಿವೆ. ಹೀಗಾಗಿ ದೇಶದಲ್ಲಿ ಮತ್ತೆ ಪೋಲಿಯೋ ಕಾಣಿಸಿಕೊಳ್ಳದಂತೆ ಮುನ್ನೆಚ್ಚರಿಕಾ ಕ್ರಮವಾಗಿ ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಪೋಲಿಯೋ ಲಸಿಕೆ ನೀಡಲಾಗುತ್ತಿದೆ ಎಂದು ಹೇಳಿದರು.

ಪೋಷಕರು ತಮ್ಮ ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ವಾಸಂತಿ ಅಮರ್ ಮಾತನಾಡಿ, ಜೂನ್ 28ರಿಂದ ಜುಲೈ 1ರವರೆಗೆ ಐದು ದಿನಗಳ ಕಾಲ ನಡೆಯುವ ಈ ಅಭಿಯಾನದಲ್ಲಿ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಒಟ್ಟು 1,00,434 ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಜಿಲ್ಲೆಯಾದ್ಯಂತ 479 ಲಸಿಕಾ ಕೇಂದ್ರಗಳನ್ನು ತೆರೆಯಲಾಗಿದ್ದು, 2,046 ಆರೋಗ್ಯ ಸಿಬ್ಬಂದಿ ಮತ್ತು ಸ್ವಯಂಸೇವಕರು ಕರ್ತವ್ಯ ನಿರ್ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಲಕ್ಕಾ ಕೃಷ್ಣ ರೆಡ್ಡಿ, ಆರ್‌ಸಿಎಚ್ ಅಧಿಕಾರಿ ಡಾ. ಸೀಮಾ ಮಾಬಳೆ, ದೇವನಹಳ್ಳಿ ತಹಶೀಲ್ದಾರ್ ಅನಿಲ್ ಹಾಗೂ ಆರೋಗ್ಯ ಇಲಾಖೆಯ

## 'ಅರ್ಧಾವಧಿ ಅಭಿವೃದ್ಧಿ ವರದಿ ಬಿಡುಗಡೆ ಮಾಡಲಿ'

ದೊಡ್ಡಬಳ್ಳಾಪುರ

"ಐದು ವರ್ಷದ ಪ್ರೋಗ್ರೆಸ್ ಕಾರ್ಡ್‌ನೊಂದಿಗೆ ಬರುತ್ತೇನೆ" ಎಂದು ಭರವಸೆ ನೀಡಿದ್ದ ಶಾಸಕ ಧೀರಜ್ ಮುನಿರಾಜು ಅವರು ಮೂರು ವರ್ಷಗಳ ಆಡಳಿತ ಪೂರ್ಣಗೊಂಡಿದ್ದರೂ ಇದುವರೆಗೆ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳ ಮಧ್ಯಂತರ ವರದಿಯನ್ನು ಸಾರ್ವಜನಿಕರ ಮುಂದಿಡಬೇಕು ಎಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಶರತ್ ಪಟೇಲ್ ಒತ್ತಾಯಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಯುವ ಕಾಂಗ್ರೆಸ್ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ತಾಲೂಕಿನ ಜನತೆ ಶಾಸಕರ ಅಭಿವೃದ್ಧಿ ಕಾರ್ಯಗಳ ಬಗ್ಗೆ ಉತ್ತರ ಕೇಳುತ್ತಿದ್ದಾರೆ. ಶೀಘ್ರದಲ್ಲೇ ಯುವ ಕಾಂಗ್ರೆಸ್ ಕಾರ್ಯಕರ್ತರು ಶಾಸಕರ ಕಚೇರಿಗೆ ತೆರಳಿ ಅರ್ಧಾವಧಿಯ ಅಭಿವೃದ್ಧಿ ವರದಿ (ರಿಪೋರ್ಟ್ ಕಾರ್ಡ್) ನೀಡುವಂತೆ ಮನವಿ ಸಲ್ಲಿಸಲಿದ್ದಾರೆ ಎಂದು ತಿಳಿಸಿದರು.

ತಾಲೂಕು ಯುವ ಕಾಂಗ್ರೆಸ್ ಅಧ್ಯಕ್ಷ ಪುನೀತ್ ಗೌಡ ಮಾತನಾಡಿ, ದೊಡ್ಡಬಳ್ಳಾಪುರದಲ್ಲಿ ಜಿಲ್ಲಾಸ್ಪತ್ರೆ ಹಾಗೂ ಜಿಲ್ಲಾ ಕ್ರೀಡಾಂಗಣ ಉಳಿಯಲು ಮಾಜಿ ಶಾಸಕ ಟಿ. ವೆಂಕಟರಮಣಯ್ಯ ಅವರು ಪ್ರಮುಖ ಪಾತ್ರ ವಹಿಸಿದ್ದರು ಎಂದು ಹೇಳಿದರು. ಬಿಜೆಪಿ ಸರ್ಕಾರದ ಅವಧಿಯಲ್ಲೂ ಸಚಿವರನ್ನು ನಿರಂತರವಾಗಿ ಭೇಟಿ ಮಾಡಿ ಜಿಲ್ಲಾಸ್ಪತ್ರೆ ಮಂಜೂರಿಗೆ ಶ್ರಮಿಸಿದ್ದರು. ಆದರೆ ಈಗಿನ ಶಾಸಕ ಧೀರಜ್ ಮುನಿರಾಜು ಅವರು ಜಿಲ್ಲಾಸ್ಪತ್ರೆ ನಿರ್ಮಾಣದ ಕುರಿತು ಅಗತ್ಯ ಮಟ್ಟದಲ್ಲಿ ಸರ್ಕಾರದ ಮೇಲೆ ಒತ್ತಡ ತರಲು ವಿಫಲರಾಗಿದ್ದಾರೆ ಎಂದು ಆರೋಪಿಸಿದರು.



"ಪತ್ರ ಬರೆದಿದ್ದೇನೆ ಎನ್ನುವುದಷ್ಟೇ ಸಾಕಾಗುವುದಿಲ್ಲ. ಅಭಿವೃದ್ಧಿ ಕಾರ್ಯಗಳನ್ನು ಕಾರ್ಯರೂಪಕ್ಕೆ ತರುವ ಬದ್ಧತೆ ಇರಬೇಕು. 'ನವ ದೊಡ್ಡಬಳ್ಳಾಪುರ' ಹೆಸರಿನಲ್ಲಿ ಮತ ಕೇಳಿದ ಶಾಸಕರು ಆ ಕನಸನ್ನು ನನಸು ಮಾಡುವಲ್ಲಿ ಹಿಂದೆ ಬಿದ್ದಿದ್ದಾರೆ. ತಾಲೂಕಿನ ರಸ್ತೆಗಳ ದುಸ್ಥಿತಿ ಹಾಗೂ ನಗರಸಭೆಯಲ್ಲಿ ತಮ್ಮದೇ ಪಕ್ಷದ ಆಡಳಿತ ಇದ್ದರೂ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಯಾವುದೇ ಗಮನ ಹರಿಸಿಲ್ಲ" ಎಂದು ಟೀಕಿಸಿದರು.

ನೇಕಾರರ ಸೀರೆಗಳ ಮಾರಾಟ ಮಳಿಗೆ ನಿರ್ಮಾಣಕ್ಕಾಗಿ ಮಾಜಿ ಶಾಸಕ ವೆಂಕಟರಮಣಯ್ಯ ಅವರು 10 ಗುಂಟೆ ಜಾಗ ಮಂಜೂರು ಮಾಡಿಸಿದ್ದರು. ಎರಡು ಬಾರಿ ಭೂಮಿಪೂಜೆ ನಡೆದಿದ್ದರೂ ಕಾಮಗಾರಿ ಇನ್ನೂ ಆರಂಭವಾಗಿಲ್ಲ. ಕೇವಲ ಶಂಕುಸ್ಥಾಪನೆ ಮತ್ತು ಭೂಮಿಪೂಜೆಗಳನ್ನು ಅಭಿವೃದ್ಧಿಯೆಂದು ಬಿಂಬಿಸುವುದು ಸರಿಯಲ್ಲ ಎಂದು ಮುಖಂಡರು ಅಭಿಪ್ರಾಯಪಟ್ಟರು.

ಬಾಶೆಟ್ಟಿಹಳ್ಳಿಯಲ್ಲಿ ಕೆಂಪೇಗೌಡರ ಪ್ರತಿಮೆ ಶಂಕುಸ್ಥಾಪನೆ ವೇಳೆ ಪಟ್ಟಣ ಪಂಚಾಯಿತಿ ಅಧ್ಯಕ್ಷ ಪ್ರೇಮ್ ಕುಮಾರ್ ಅವರು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಮಾಜಿ ಶಾಸಕ ವೆಂಕಟರಮಣಯ್ಯ ಅವರನ್ನು ಟೀಕಿಸಿರುವುದನ್ನು ಖಂಡಿಸಿದ ಯುವ ಕಾಂಗ್ರೆಸ್ ಮುಖಂಡರು, ತಾಂತ್ರಿಕ ಇಲಾಖೆಯ ಅನುಮತಿ ಪಡೆಯುವ ಮೊದಲು ಭೂಮಿಪೂಜೆ ನಡೆಸಿರುವ ಕ್ರಮವನ್ನೂ ಪ್ರಶ್ನಿಸಿದರು. ಸಾರ್ವಜನಿಕರ ಪ್ರಶ್ನೆಗಳಿಗೆ ಉತ್ತರಿಸುವ ಬದಲು ಪ್ರಶ್ನಿಸಿದವರನ್ನೇ ಅವಹೇಳನ ಮಾಡಿರುವುದು ಅಧ್ಯಕ್ಷರ ಸರ್ವಾಧಿಕಾರಿ ಧೋರಣೆಯನ್ನು ತೋರಿಸುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯದರ್ಶಿ ಶಿವರಾಜ್, ಕಸಬಾ ಯುವ ಕಾಂಗ್ರೆಸ್ ಅಧ್ಯಕ್ಷ ಜಯಸಿಂಹ, ಎನ್‌ಎಸ್‌ಯುಐ ತಾಲೂಕು ಅಧ್ಯಕ್ಷ ಅಶ್ವತ್ ರೆಡ್ಡಿ, ಮುಖಂಡ ಶಿವಕುಮಾರ್ ಸೇರಿದಂತೆ ಹಲವು ಯುವ ಕಾಂಗ್ರೆಸ್ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಅವಹೇಳನ ಆರೋಪ

ದೇವನಹಳ್ಳಿ

ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಅವರ ಕುಟುಂಬದ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವುದಾಗಿ ಆರೋಪಿಸಿ, ಚಿಕ್ಕಬಳ್ಳಾಪುರ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಜೆಡಿಎಸ್ ವತಿಯಿಂದ ದೇವನಹಳ್ಳಿಯಲ್ಲಿ ಬೃಹತ್ ಪ್ರತಿಭಟನೆ ನಡೆಯಿತು.

ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ವಿ. ಮಂಜುನಾಥ್ ಹಾಗೂ ತಾಲೂಕು ಅಧ್ಯಕ್ಷ ಎಸ್. ಮಹೇಶ್ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ನೂರಾರು ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ, ಜವಾಬ್ದಾರಿಯುತ ಸ್ಥಾನದಲ್ಲಿರುವ ಶಾಸಕರು ಸಾರ್ವಜನಿಕವಾಗಿ ಮಾತನಾಡುವಾಗ ಸಂಯಮ ಪಾಲಿಸಬೇಕು. ಎಚ್.ಡಿ. ಕುಮಾರಸ್ವಾಮಿ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವುದು ಹಾಗೂ ಚಿಕ್ಕಬಳ್ಳಾಪುರದಲ್ಲಿ ನಡೆದ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಜನರನ್ನು ಪ್ರಚೋದಿಸಿರುವುದು ಗಂಭೀರ ವಿಷಯವಾಗಿದೆ ಎಂದು ಆರೋಪಿಸಿದರು.

ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಕಾನೂನು ಕ್ರಮ ಕೈಗೊಂಡು, ಅವರು ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿ ಕುಮಾರಸ್ವಾಮಿ ಅವರಲ್ಲಿ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.




ಬೆಂಗಳೂರು ಗ್ರಾಮಾಂತರ ಜಿಲ್ಲಾ ಜೆಡಿಎಸ್ ಅಧ್ಯಕ್ಷ ಕೆ.ವಿ. ಮಂಜುನಾಥ್ ಮಾತನಾಡಿ, ಶಿಕ್ಷಣ ಸಂಸ್ಥೆ ನಡೆಸುವ ವ್ಯಕ್ತಿಯೊಬ್ಬರು ಈ ರೀತಿಯ ವರ್ತನೆ ತೋರಿರುವುದು ಖಂಡನೀಯ. ಕಾರ್ಯಕ್ರಮದ ವೇಳೆ ಸನ್ನೆಗಳ ಮೂಲಕ ಜನರನ್ನು ಪ್ರಚೋದಿಸುವ ಪ್ರಯತ್ನ ನಡೆಸಲಾಗಿದೆ ಎಂದು ಆರೋಪಿಸಿದರು. ನಾಡಪ್ರಭು ಕೆಂಪೇಗೌಡರ ಜಯಂತಿಯಂತಹ ಕಾರ್ಯಕ್ರಮದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಶಾಸಕ ಪ್ರದೀಪ್ ಈಶ್ವರ್ ಅವರನ್ನು ಮೊದಲ ಆರೋಪಿಯನ್ನಾಗಿ (ಎ–1) ಪರಿಗಣಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

"ಚಿಕ್ಕಬಳ್ಳಾಪುರ ಜಿಲ್ಲೆಗೆ ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ಕೈವಾರ ತಾತಯ್ಯ ಅವರಂತಹ ಮಹನೀಯರ ಪರಂಪರೆ ಇದೆ. ಇಂತಹ ಜಿಲ್ಲೆಗೆ ಇಂತಹ ಘಟನೆಗಳಿಂದ ಕಳಂಕ ಬರುವುದು ದುಃಖಕರ" ಎಂದು ಅವರು ಹೇಳಿದರು.

ಪ್ರತಿಭಟನೆಯ ಬಳಿಕ, ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿಗಳ ಪರವಾಗಿ ತಹಸೀಲ್ದಾರ್ ರಾಜೀವ್ ಲೋಚನ ಅವರಿಗೆ ಜೆಡಿಎಸ್ ಮುಖಂಡರು ಮನವಿ ಪತ್ರ ಸಲ್ಲಿಸಿದರು.

ಈ ವೇಳೆ ಜೆಡಿಎಸ್‌ನ ವಿವಿಧ ಘಟಕಗಳ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



ಕೋಲಾರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಜುಲೈ 1 ರಂದು ಕೋಲಾರ ನಗರದ ಪತಕರ್ತರ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾಲೂರು ತಾಲ್ಲೂಕು ಪತ್ರಕರ್ತರ ಕೋಲಾರವಾಣಿ ವರದಿಗಾರ ಟಿ.ಕೆ.ನಾಗರಾಜ್ ಪುತ್ರ ಎಂ.ಟೆಕ್ ಪದವಿ ಮುಗಿಸಿದ ಗಗನ್ ನಾಯಕ್ ಎಂ.ಎನ್. ಅವರನ್ನು ಪ್ರಶಸ್ತಿ ನೀಡಿ ಗೌರವಿಸಿ ಅಭಿನಂದಿಸಲಾಯಿತು.

## 3ರಂದು "ಯುವ ಸೌರಭ" ಕಾರ್ಯಕ್ರಮ

ತುಮಕೂರು

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಸಂಯುಕ್ತ ಆಶ್ರಯದಲ್ಲಿ ಜುಲೈ 3ರಂದು ಬೆಳಿಗ್ಗೆ 10.30 ಗಂಟೆಗೆ ಹೆಬ್ಬೂರು ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ "ಯುವ ಸೌರಭ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಉದ್ಘಾಟಿಸಿ ಅಧ್ಯಕ್ಷತೆವಹಿಸಲಿದ್ದಾರೆ. ಜಿಲ್ಲಾ ಶಾಲಾ ಶಿಕ್ಷಣ(ಪದವಿ ಪೂರ್ವ) ಇಲಾಖೆಯ ಉಪನಿರ್ದೇಶಕ ರಾಧಾ ಎಂ.ಎಸ್. ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಉಪಸ್ಥಿತರಿರಲಿದ್ದಾರೆ.

ಇನ್‌ಫಾರ್ಮಟಿಕ್ಸ್ ಇಂಡಿಯಾ ಲಿಮಿಟೆಡ್‌ನ ಛೇರ್ಮನ್ ಮತ್ತು ವ್ಯವಸ್ಥಾಪಕ ನಿರ್ದೇಶಕ ಎನ್.ವಿ. ಸತ್ಯನಾರಾಯಣ, ಗಾಯತ್ರಿ ಜ್ಯುವೆಲರ್ಸ್ ನಾಗರಾಜು, ಹೆಬ್ಬೂರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಂಜಣ್ಣ ಎಸ್. ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಪ್ರದೀಪ್ ಹೆಚ್.ಆರ್. ಭಾಗವಹಿಸಲಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಕೋಲಾರ

ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್ ಮೆಂಟ್, ಸಹಕಾರ ತರಬೇತಿ ಸಂಸ್ಥೆಯು ಜುಲೈ 01 ರಿಂದ 6 ತಿಂಗಳ ಅವಧಿಯ ಡಿಪ್ಲೊಮಾ ಇನ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಯ ಅರ್ಜಿ ಸಲ್ಲಿಕೆಯ ಅವಧಿಯನ್ನು 10 ಜುಲೈ 2026 ರವರೆಗೆ ವಿಸ್ತರಿಸಲಾಗಿದೆ.

ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಗಳ ಖಾಸಗಿ ಅಭ್ಯರ್ಥಿಗಳಿಂದ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಂದ ಮತ್ತು ಎಲ್ಲಾ ವಿವಿಧ ಸಹಕಾರ ಸಂಘ/ಬ್ಯಾಂಕ್‌ಗಳ ಉದ್ಯೋಗಿಗಳು ಅರ್ಜಿ ಸಲ್ಲಿಸಬಹುದು.

ತರಬೇತಿ ಪಡೆಯಲು ಕನಿಷ್ಠ ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಖಾಸಗಿ ಅಭ್ಯರ್ಥಿಗಳಿಗೂ ಸಹ ಪ್ರವೇಶ ಪಡೆಯಲು ಅವಕಾಶವಿರುತ್ತದೆ. ವಯೋಮಿತಿ 16 ವರ್ಷ ದಾಟಿದವರಾಗಿರಬೇಕು. ಅರ್ಜಿಯನ್ನು ಜುಲೈ 10 ರ ಒಳಗಾಗಿ ಸಲ್ಲಿಸಬೇಕು. ತರಬೇತಿ ಪಡೆಯುವ ಎಲ್ಲಾ ಅಭ್ಯರ್ಥಿಗಳಿಗೆ ಮಾಸಿಕ ರೂ. 500/– ಶಿಷ್ಯ ವೇತನ ನೀಡಲಾಗುವುದು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಮಾಸಿಕ ರೂ. 600/– ಶಿಷ್ಯ ವೇತನ ನೀಡಲಾಗುವುದು, ಹೆಚ್ಚಿನ ವಿವರಗಳಿಗೆ ದೂ.080–35541407 ಅಥವಾ ಮೊ.90362 59781 ಸಂಪರ್ಕಿಸಬಹುದು ಅಥವಾ ಸಂಸ್ಥೆಯ ಕಚೇರಿ ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್‌ಮೆಂಟ್ ,ಸಹಕಾರ ಭವನ,#1/3 , 2 ನೇ ಮಹಡಿ,3 ನೇ ಮುಖ್ಯ ರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ, ಚಾಮರಾಜಪೇಟೆ ,ಬೆಂಗಳೂರು–18 ಇಲ್ಲಿಗೆ ಖುದ್ದಾಗಿ ಭೇಟಿ ನೀಡಬಹುದು ಎಂದು ಪ್ರಾಚಾರ್ಯರಾದ ಶೈಲಾ ಬಿ.ವಿ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ರಿಕ್ಸ್ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿರುವ ಇಬ್ಬರು ಬಾಲಕರು ಬಿಡುಗಡೆ

ಕೋಲಾರ

ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನಲ್ಲಿ ದಿನಾಂಕ:21.04.2026ರಂದು ಎನ್.ಕೆ.ಆರ್., ಬ್ರಿಕ್ಸ್ (ಎನ್.ಎ.ಐ) ಮೊಹಮ್ಮದ್ ಇಬ್ರಾಹಿಂ ಖಾನ್ ಬಿನ್ ಅನ್ವರ್ ಖಾನ್, ರಾಮೇನಹಳ್ಳಿ, ಶಿವಾರಪಟ್ಟಣ ರಸ್ತೆ, ಮಾಲೂರು ಸಂಸ್ಥೆಗೆ ಮಾನ್ಯ ಉಪ ವಿಭಾಗಾಧಿಕಾರಿಗಳ ನೇತೃತ್ವದಲ್ಲಿ ವಿವಿಧ ಇಲಾಖೆಗಳೊಂದಿಗೆ ಜಂಟಿಯಾಗಿ ಭೇಟಿ ನೀಡಿ ಸ್ಥಳ ಪರಿಶೀಲನೆ ಮಾಡಿ ಓರಿಸ್ಸಾ ರಾಜ್ಯದ ಒಟ್ಟು 02 ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಲಾಗಿರುತ್ತದೆ.

ಮಾಲೂರು ಕಾರ್ಮಿಕ ನಿರೀಕ್ಷಕರು ಜೆಎಂಎಫ್‌ಸಿ ನ್ಯಾಯಾಲಯದಲ್ಲಿ ಶ್ರೀ ಅನ್ವರ್ ಖಾನ್ ಬಿನ್ ಅಬ್ದುಲ್ ಅಜೀಜ್ ಖಾನ್ ಮಾಲೀಕರು ಮತ್ತು ಶ್ರೀ ಮೊಹಮ್ಮದ್ ಇಬ್ರಾಹಿಂ ಖಾನ್ ಬಿನ್ ಅನ್ವರ್ ಖಾನ್, ಮಾಲೀಕರ ಮಗ ಮತ್ತು ಬ್ರಿಕ್ಸ್ ಫ್ಯಾಕ್ಟರಿಯ ಉಸ್ತುವಾರಿದಾರರು, ಎನ್.ಕೆ.ಆರ್., ಬ್ರಿಕ್ಸ್ (ಎನ್.ಎ.ಐ), ರಾಮೇನಹಳ್ಳಿ, ಶಿವಾರಪಟ್ಟಣ ರಸ್ತೆ, ಮಾಲೂರು ಇವರ ವಿರುದ್ಧ ಮೊಕದ್ದಮೆ ದಾಖಲಿಸಿದ್ದು, ಸದರಿ ಪ್ರಕರಣದಲ್ಲಿ ದಿನಾಂಕ:25–06–2026 ರಂದು ಜೆಎಂಎಫ್‌ಸಿ ನ್ಯಾಯಾಲಯವು ಮಾಲೀಕರಿಗೆ ರೂ.40000/–ಗಳ ದಂಡ ವಿಧಿಸಿರುತ್ತಾರೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಕಾರ್ಮಿಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಗರಿಕರ ಗುರುತಿನ ಚೀಟಿ ವಿಶೇಷ ಅಭಿಯಾನ

ಕೋಲಾರ

2026ನೇ ಸಾಲಿನ ವಿಶ್ವ ಹಿರಿಯ ನಾಗರಿಕರ ದಿನಾಚರಣೆಯ ಅಂಗವಾಗಿ, ದಿ:01.07.2026 ರಿಂದ ದಿ:31.07.2026 ರವರೆಗೆ ರಾಜ್ಯಾದ್ಯಂತ "ಹಿರಿಯ ನಾಗರಿಕರ ಗುರುತಿನ ಚೀಟಿ ವಿಶೇಷ ಅಭಿಯಾನ"ವನ್ನು ಹಮ್ಮಿಕೊಳ್ಳಲಾಗಿರುವುದರಿಂದ ಸೇವಾ ಸಿಂಧು ಪೋರ್ಟಲ್ ನಲ್ಲಿ https://sevasindhuservices.karnataka.gov.in/ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಿ ಹಿರಿಯ ನಾಗರೀಕರ ಗುರುತಿನ ಚೀಟಿಯನ್ನು ಪಡೆಯಲು ಆಧಾರ್ ಕಾರ್ಡ್, ಭಾವಚಿತ್ರ, ರಕ್ತದ ಗುಂಪು ಆನ್‌ಲೈನ್ ಅರ್ಜಿ ಸಲ್ಲಿಸುವುದರ ಮೂಲಕ ಹಿರಿಯ ನಾಗರೀಕರ ಗುರುತಿನ ಚೀಟಿ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ತಮ್ಮ ತಾಲ್ಲೂಕಿನ ವಿವಿದೋದ್ದೇಶ ಪುನರ್ವಸತಿ ಕಾರ್ಯಕರ್ತರಾದ ಕೋಲಾರ ತಾಲ್ಲೂಕಿನ ರಾಜೇಶ್ 9986579688, ಬಂಗಾರಪೇಟೆ ಮತ್ತು ಕೆಜಿಎಫ್ ತಾಲ್ಲೂಕಿನ ಸುನೀಲ್ ಕುಮಾರ್ 8711924638, ಮಾಲೂರು ತಾಲ್ಲೂಕಿನ ಚೌಡಪ್ಪ 8904317589, ಮುಳಬಾಗಿಲು ತಾಲ್ಲೂಕಿನ ಬಾಬು ಎಂ.ಎನ್ 9739424583, ಶ್ರೀನಿವಾಸಗೌಡ ಶ್ರೀನಿವಾಸಪುರ ತಾಲ್ಲೂಕಿನ 7829126938, ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಕಛೇರಿ 08152–200010 ಯನ್ನು ಸಂಪರ್ಕಿಸಬಹುದೆಂದು ಜಿಲ್ಲಾ ಕಛೇರಿಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ಗುಣಮಟ್ಟದ ಹಾಲು ಪೂರೈಕೆ ಮಾಡಿ'



ಬೂದಿಕೋಟೆ

ರೈತರು ಉತ್ತಮ ಗುಣಮಟ್ಟದ ಹಾಲನ್ನು ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಪೂರೈಸಬೇಕು. ನೀವು ಡೈರಿಗೆ ಪೂರೈಸುವ ಹಾಲು ದೇಶದ ಗಡಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಯೋಧರಿಗೆ ಹಾಗೂ ತಿರುಪತಿ ಶ್ರೀ ವೆಂಕಟೇಶ್ವರ ಸ್ವಾಮಿಯ ಅಭಿಷೇಕ ಮತ್ತು ಲಡ್ಡು ತಯಾರಿಕೆಗೆ ಬಳಸಲಾಗುತ್ತದೆ ಎಂದು ಕೋಲಾರ ಹಾಲು ಒಕ್ಕೂಟದ ಕೆಜಿಎಫ್ ಕ್ಷೇತ್ರದ ನಿರ್ದೇಶಕ ಜಯಸಿಂಹ ಕೃಷ್ಣಪ್ಪ ಹೇಳಿದರು. ಬಂಗಾರಪೇಟೆ ತಾಲೂಕಿನ ತಪ್ಪನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ನೂತನವಾಗಿ ನಿರ್ಮಿಸಿರುವ ಎಂ.ವಿ.ಕೆ. ಸಭಾಂಗಣ ಹಾಗೂ ಪಶು ಆಹಾರ ದಾಸ್ತಾನು ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕೆಜಿಎಫ್ ಕ್ಷೇತ್ರವು ಕೋಲಾರ ಹಾಲು ಒಕ್ಕೂಟದಲ್ಲಿ ಅತಿ ಹೆಚ್ಚು ಹಾಲು ಪೂರೈಕೆ ಮಾಡುವ ಕ್ಷೇತ್ರವಾಗಿದೆ. ಈ ಭಾಗದ ರೈತರು ಪ್ರತಿದಿನ ಸುಮಾರು 1.25 ಲಕ್ಷ ಲೀಟರ್ ಹಾಲನ್ನು ಒಕ್ಕೂಟಕ್ಕೆ ಪೂರೈಸುತ್ತಿದ್ದು, ಮುಂದಿನ ವರ್ಷದೊಳಗೆ ಈ ಪ್ರಮಾಣ 1.50 ಲಕ್ಷ ಲೀಟರ್‌ಗೆ ತಲುಪುವ ವಿಶ್ವಾಸವಿದೆ ಎಂದು ಹೇಳಿದರು.

ಕೃಷಿ ಉತ್ಪನ್ನಗಳಿಗೆ ಸ್ಥಿರ ಬೆಲೆ ಇಲ್ಲದಿರುವ ಸಂದರ್ಭದಲ್ಲಿ ಹಾಲಿಗೆ ನಿಗದಿತ ದರ ದೊರೆಯುತ್ತಿರುವುದರಿಂದ ಸಾವಿರಾರು ರೈತರು ಹೈನುಗಾರಿಕೆಯನ್ನು ಅವಲಂಬಿಸಿ ಆರ್ಥಿಕವಾಗಿ ಸ್ವಾವಲಂಬಿಗಳಾಗಿದ್ದಾರೆ ಎಂದು ತಿಳಿಸಿದರು.

ಒಕ್ಕೂಟವು ನಿಗದಿತ ದರದಲ್ಲಿ ಹಾಲು ಸಂಗ್ರಹಿಸುತ್ತಿದ್ದು, ಹೆಚ್ಚಿನ ಪ್ರಮಾಣದಲ್ಲಿ ಹಾಗೂ ಉತ್ತಮ ಗುಣಮಟ್ಟದ ಹಾಲು ಪೂರೈಸುವ ರೈತರಿಗೆ ಪ್ರೋತ್ಸಾಹ ನೀಡುತ್ತಿದೆ. ರೈತರ ಆರ್ಥಿಕ ಸಬಲೀಕರಣವೇ ಪ್ರಮುಖ ಗುರಿಯಾಗಿದ್ದು, ಹಾಲು ಉತ್ಪಾದಕರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಿದರು.

ಹಾಲು ಸಂಗ್ರಹಣೆಯಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಲಾಗುತ್ತಿದ್ದು, ರೈತರಿಗೆ ಸಕಾಲದಲ್ಲಿ ಹಣ ಪಾವತಿಯಾಗುವ ವ್ಯವಸ್ಥೆ ಜಾರಿಯಲ್ಲಿದೆ. ಉತ್ತಮ ಗುಣಮಟ್ಟದ ಹಾಲಿಗೆ ಆದ್ಯತೆ ನೀಡುವ ಮೂಲಕ ಕೋಲಾರ ಜಿಲ್ಲೆಯನ್ನು ರಾಜ್ಯದಲ್ಲೇ ಮಾದರಿ ಹಾಲು ಉತ್ಪಾದನಾ ಜಿಲ್ಲೆಯನ್ನಾಗಿ ರೂಪಿಸಲಾಗಿದೆ ಎಂದರು.

ಪಶುಸಂಗೋಪನೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು, ಉತ್ತಮ ತಳಿಯ ಜಾನುವಾರುಗಳ ಸಾಕಣೆ, ಪಶುವೈದ್ಯಕೀಯ ಸೇವೆಗಳು, ತಾಂತ್ರಿಕ ಮಾರ್ಗದರ್ಶನ ಹಾಗೂ ಅಗತ್ಯ ಸಬ್ಸಿಡಿ ಸೌಲಭ್ಯಗಳನ್ನು ರೈತರಿಗೆ ಒದಗಿಸಲು ಒಕ್ಕೂಟ ಬದ್ಧವಾಗಿದೆ ಎಂದು ಹೇಳಿದರು.

ಹಾಲು ಒಕ್ಕೂಟವು ರೈತರ ಆಸ್ತಿಯಾಗಿದ್ದು, ಅವರ ಹಿತಾಸಕ್ತಿಯನ್ನು ಕಾಪಾಡುವುದು ನಿರ್ದೇಶಕ ಮಂಡಳಿಯ ಜವಾಬ್ದಾರಿಯಾಗಿದೆ. ಡೈರಿ ಕ್ಷೇತ್ರದ ಸವಾಲುಗಳನ್ನು ರೈತರು ಮತ್ತು ಒಕ್ಕೂಟ ಪರಸ್ಪರ ಸಹಕಾರದಿಂದ ಎದುರಿಸಿದಾಗ ಮಾತ್ರ ಮತ್ತಷ್ಟು ಅಭಿವೃದ್ಧಿ ಸಾಧ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಒಕ್ಕೂಟದ ವ್ಯವಸ್ಥಾಪಕ ಡಾ. ಚೇತನ್, ಡಾ. ಮುರಳಿ, ಉಪ ವ್ಯವಸ್ಥಾಪಕ ಡಾ. ಗಿರೀಶ್ ಗೌಡ, ಸಂಘದ ಅಧ್ಯಕ್ಷ ಕೆಂಪೇಗೌಡ, ಉಪಾಧ್ಯಕ್ಷ ಗುರಪ್ಪ, ಮಾಜಿ ಅಧ್ಯಕ್ಷ ಹಾಗೂ ಹಾಲಿ ನಿರ್ದೇಶಕ ಶ್ರೀನಿವಾಸ್, ಚಂಗಳರಾಯರೆಡ್ಡಿ, ಸಿಇಒ ರಾಮಚಂದ್ರ, ವಿಸ್ತರಣಾಧಿಕಾರಿಗಳಾದ ಸದಾಶಿವಯ್ಯ, ಭಾನುಪ್ರಕಾಶ್, ನಟರಾಜ್, ಅಂಬರೀಶ್, ವಿನೋದ್ ರೆಡ್ಡಿ, ಸಂಘದ ನಿರ್ದೇಶಕರು, ಹಾಲು ಉತ್ಪಾದಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಶಿಕ್ಷಣ-ಉದ್ಯಮ ನಡುವಿನ ಅಂತರ ಕಡಿಮೆಗೊಳಿಸಲು ಎಸ್‌ಐಯು ಹೊಸ ಹೆಜ್ಜೆ



ತಿರುಪತಿ

ಶಿಕ್ಷಣ ಮತ್ತು ಉದ್ಯಮ ಕ್ಷೇತ್ರಗಳ ನಡುವಿನ ಅಂತರವನ್ನು ಕಡಿಮೆಗೊಳಿಸಿ ವಿದ್ಯಾರ್ಥಿಗಳನ್ನು ಉದ್ಯೋಗಕ್ಕೆ ಸಜ್ಜುಗೊಳಿಸುವ ಉದ್ದೇಶದಿಂದ ರೂಪಿಸಲಾದ ಕೆಲಸ–ಅಧ್ಯಯನ ದ್ವಂದ್ವ ಮಾದರಿ ಶಿಕ್ಷಣ ವ್ಯವಸ್ಥೆಗೆ ಶ್ರೀಸಿಟಿ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯದಲ್ಲಿ ಅಧಿಕೃತ ಚಾಲನೆ ನೀಡಲಾಯಿತು.

ಆಂಧ್ರಪ್ರದೇಶ ಸರ್ಕಾರದ ಮಾನವ ಸಂಪನ್ಮೂಲ, ಮಾಹಿತಿ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಸಚಿವ ನಾರಾ ಲೋಕೇಶ್ ಅವರು ವಿಶ್ವವಿದ್ಯಾಲಯದ ಮಧ್ಯಂತರ ಕ್ಯಾಂಪಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಾಗತಿಕ ಸಲಹಾ ಮಂಡಳಿ, ಆಡಳಿತ ಮಂಡಳಿ ಸದಸ್ಯರು ಹಾಗೂ ವಿವಿಧ ಕೈಗಾರಿಕಾ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ದೇಶದಲ್ಲಿ ಪ್ರತಿ ವರ್ಷ ಲಕ್ಷಾಂತರ ವಿದ್ಯಾರ್ಥಿಗಳು ಪದವಿ ಪಡೆದರೂ, ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯದ ಕೊರತೆಯಿಂದ ಹೆಚ್ಚಿನವರಿಗೆ ಉದ್ಯೋಗ ದೊರೆಯುತ್ತಿಲ್ಲ. ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಉದ್ದೇಶದಿಂದ ವಿಶ್ವವಿದ್ಯಾಲಯವು ಹೊಸ ಶಿಕ್ಷಣ ಮಾದರಿಯನ್ನು ಪರಿಚಯಿಸಿದೆ.

ಈ ದ್ವಂದ್ವ ಮಾದರಿಯಲ್ಲಿ ವಿದ್ಯಾರ್ಥಿಗಳು ತಮ್ಮ ಸಮಯದ ಒಂದು ಭಾಗವನ್ನು ತರಗತಿ ಕಲಿಕೆಗೆ ಮೀಸಲಿಡಲಿದ್ದು, ಉಳಿದ ಸಮಯವನ್ನು ವಿವಿಧ ಕೈಗಾರಿಕಾ ಸಂಸ್ಥೆಗಳಲ್ಲಿ ತರಬೇತಿ ಪಡೆಯುತ್ತಾ ಕೆಲಸ ಮಾಡುವ ಮೂಲಕ ಪ್ರಾಯೋಗಿಕ ಅನುಭವ ಸಂಪಾದಿಸಲಿದ್ದಾರೆ.

ಭಾರತ ಸಾರಥಿ
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸಿದ್ದೇಗೌಡರಿಗೆ ಆತ್ಮೀಯ ಬೀಳ್ಕೊಡುಗೆ



ಬೇತಮಂಗಲ

ಕ್ಯಾಸಂಬಳ್ಳಿ ಬೆಸ್ಕಾಂ ಕಚೇರಿಯಲ್ಲಿ ಹಲವು ವರ್ಷಗಳಿಂದ ಬಿಲ್ ರೀಡರ್ ಆಗಿ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಸಿದ್ದೇಗೌಡ ಅವರಿಗೆ ಸಹೋದ್ಯೋಗಿಗಳು ಹಾಗೂ ಸಿಬ್ಬಂದಿ ಆತ್ಮೀಯ ಬೀಳ್ಕೊಡುಗೆ ಸಮಾರಂಭ ಆಯೋಜಿಸಿ ಗೌರವಿಸಿದರು.

ಸಮಾರಂಭದಲ್ಲಿ ಮಾತನಾಡಿದ ಸಹೋದ್ಯೋಗಿಗಳು, ಸಿದ್ದೇಗೌಡ ಅವರು ತಮ್ಮ ಸೇವಾ ಅವಧಿಯಲ್ಲಿ ಪ್ರಾಮಾಣಿಕತೆ, ಸಮಯಪಾಲನೆ ಹಾಗೂ ಜನಸ್ನೇಹಿ ಕಾರ್ಯವೈಖರಿಯಿಂದ ಇಲಾಖೆಗೆ ಉತ್ತಮ ಹೆಸರು ತಂದಿದ್ದಾರೆ. ಗ್ರಾಹಕರೊಂದಿಗೆ ಉತ್ತಮ ಬಾಂಧವ್ಯ ಬೆಳೆಸಿಕೊಂಡು ಬೆಸ್ಕಾಂನ ಸೇವೆಯನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದಾರೆ ಎಂದು ಪ್ರಶಂಸಿಸಿದರು.

ಈ ಸಂದರ್ಭದಲ್ಲಿ ಸಿದ್ದೇಗೌಡ ಅವರನ್ನು ಶಾಲು ಹೊದಿಸಿ, ಹೂಮಾಲೆ ಹಾಕಿ, ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ನಿವೃತ್ತಿ ಜೀವನವು ಆರೋಗ್ಯ, ನೆಮ್ಮದಿ ಹಾಗೂ ಸಂತೋಷದಿಂದ ಕೂಡಿರಲಿ ಎಂದು ಸಹೋದ್ಯೋಗಿಗಳು ಶುಭ ಹಾರೈಸಿದರು.

ಗೌರವ ಸ್ವೀಕರಿಸಿ ಮಾತನಾಡಿದ ಸಿದ್ದೇಗೌಡ ಅವರು, ತಮ್ಮ ಸೇವಾ ಅವಧಿಯಲ್ಲಿ ಸಹಕಾರ ನೀಡಿದ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಬೆಸ್ಕಾಂ ಅಧಿಕಾರಿಗಳು, ಸಿಬ್ಬಂದಿ ವರ್ಗ, ಕುಟುಂಬದ ಸದಸ್ಯರು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಶಾಲಾ ಕಾಲೇಜುಗಳಲ್ಲಿ ವಿವಿಧ ಸ್ಪರ್ಧೆಗಳು

ಕೋಲಾರ

ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸುವ ಸಂಬಂಧ ಕೋಲಾರ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ನಾಡಪ್ರಭು ಕೆಂಪೇಗೌಡ ರವರ ಕುರಿತು ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲು ಸೂಚಿಸಲಾಗಿದೆ.

ನಾಡಪ್ರಭು ಕೆಂಪೇಗೌಡರ ಕುರಿತು ಶಾಲಾ ಕಾಲೇಜುಗಳಲ್ಲಿ ಸ್ಪರ್ಧೆಗಳನ್ನು ಏರ್ಪಡಿಸುವುದರ ಮೂಲಕ ನಾಡಪ್ರಭು ಕೆಂಪೇಗೌಡರ ಸಾಧನೆ ಕುರಿತು ಅರಿವು ಮೂಡಿಸುವುದು. ಶಾಲೆಗಳು, ಪದವಿ ಕಾಲೇಜು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಾಡಪ್ರಭು ಕೆಂಪೇಗೌಡರ ಕುರಿತು ರಸ ಪ್ರಶ್ನೆ, ಪ್ರಬಂಧ ಸ್ಪರ್ಧೆ, ಆಶು ಭಾಷಣ, ಕವನ ವಾಚನ, ಗಾಯನ, ಚಿತ್ರಕಲೆ ಸ್ಪರ್ಧೆ ಇವುಗಳಲ್ಲಿ ಯಾವುದಾದರು ಎರಡು ಸ್ಪರ್ಧೆಗಳನ್ನು ಏರ್ಪಡಿಸುವುದು.

ಜಿಲ್ಲೆಯಲ್ಲಿ ಬರುವ ಸರ್ಕಾರಿ ಶಾಲಾ ಕಾಲೇಜುಗಳಲ್ಲಿ ಕಾರ್ಯಕ್ರಮಗಳನ್ನು ಏರ್ಪಡಿಸಲು ಆದ್ಯತೆ ನೀಡುವುದು. ಸ್ಪರ್ಧೆಯಲ್ಲಿ ಎಲ್ಲಾ ಸಮುದಾಯದ ವಿದ್ಯಾರ್ಥಿಗಳು ಭಾಗವಹಿಸಲು ಮುಕ್ತವಾಗಿರುತ್ತದೆ ಹಾಗೂ ಸ್ಪರ್ಧೆಯಲ್ಲಿ ಕನಿಷ್ಠ 25 ವಿದ್ಯಾರ್ಥಿಗಳು ಭಾಗವಹಿಸತಕ್ಕದ್ದು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ನಾಡಪ್ರಭು ಕೆಂಪೇಗೌಡರ ಪುಸ್ತಕಗಳನ್ನು ಪ್ರಥಮ, ದ್ವಿತೀಯ, ತೃತೀಯ ಹಾಗೂ ಎರಡು ಸಮಾದಾನಕರ ಬಹುಮಾನವಾಗಿ ನೀಡಲಾಗುವುದು ಎಂದು ಕೋಲಾರ ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ನಾಗರೀಕ ಬಂದೂಕು ತರಬೇತಿ ಶಿಬಿರ

ಕೋಲಾರ

ಕೋಲಾರ ಪೊಲೀಸ್ ಅಧೀಕ್ಷಕರು ರವರ ಅನುಮತಿಯೊಂದಿಗೆ ಕೋಲಾರ ಜಿಲ್ಲಾ ಸಶಸ್ತ್ರ ಮೀಸಲು ಪಡೆ ವತಿಯಿಂದ ನಾಗರೀಕ ಬಂದೂಕು ತರಬೇತಿ ಶಿಬಿರವನ್ನು 1ನೇ ಹಂತವಾಗಿ ದಿನಾಂಕ: 13-07-2026 ರಿಂದ 19-07-2026ರ ವರೆಗೆ ಕೋಲಾರ ನಗರ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ಆಸಕ್ತ ನಾಗರೀಕರು ಈ ತರಬೇತಿಗೆ ಅರ್ಜಿಯನ್ನು ಜುಲೈ 02 ರಿಂದ ಜುಲೈ 11 ರವರೆಗೆ ಕೋಲಾರ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಇಲ್ಲಿ ಕಚೇರಿಯ ಅವಧಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 12 ರೊಳಗೆ ಸಲ್ಲಿಸಬೇಕು. ಮಹಿಳೆಯರಿಗೆ ವಿಶೇಷ ಆದ್ಯತೆ ಇರುತ್ತದೆ. ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 08152 222023 ಅನ್ನು ಸಂಪರ್ಕಿಸಬಹುದು ಎಂದು ಕೋಲಾರ ಡಿ.ಎ.ಆರ್ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೃಷಿ ಪಂಡಿತ ಪ್ರಶಸ್ತಿಗೆ ಅರ್ಜಿ ಆಹ್ವಾನ

ತುಮಕೂರು

ಕೃಷಿ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ರೈತರು ಹಾಗೂ ರೈತ ಮಹಿಳೆಯರನ್ನು ಗುರುತಿಸಿ 2026-27ನೇ ಸಾಲಿನ ಕೃಷಿ ಪಂಡಿತ ಪ್ರಶಸ್ತಿ ನೀಡಲು ಕೃಷಿ ಇಲಾಖೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿದೆ.

ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಆಸಕ್ತ ರೈತರು ಕೆ-ಕಿಸಾನ್ ಪೋರ್ಟಲ್‌ನಲ್ಲಿ ಲಾಗಿನ್ ಮಾಡಿ, ಸಮೀಪದ ರೈತ ಸಂಪರ್ಕ ಕೇಂದ್ರ, ನಾಗರಿಕ ಸೇವಾ ಕೇಂದ್ರ ಅಥವಾ ಸ್ವತಃ ಸಿಐಡಿ ಸಂಖ್ಯೆಯನ್ನು ಬಳಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಪುರುಷರು ಮತ್ತು ಮಹಿಳೆಯರಿಗೆ ಪ್ರತ್ಯೇಕ ವಿಭಾಗದಲ್ಲಿ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಅದರ ಭೌತಿಕ ಪ್ರತಿಯೊಂದಿಗೆ ಸಿಐಡಿ ಸಂಖ್ಯೆ, ಪಹಣಿ, ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಹಾಗೂ ಈ ಹಿಂದೆ ಪಡೆದಿರುವ ಪ್ರಶಸ್ತಿಗಳು ಮತ್ತು ವಿಶೇಷ ಸಾಧನೆಗೆ ಸಂಬಂಧಿಸಿದ ದಾಖಲೆಗಳನ್ನು ಲಗತ್ತಿಸಿ ಸಂಬಂಧಿತ ರೈತ ಸಂಪರ್ಕ ಕೇಂದ್ರಕ್ಕೆ ಸಲ್ಲಿಸಬೇಕು. ಜಿಲ್ಲೆಯಲ್ಲಿ ಕೃಷಿ ಕ್ಷೇತ್ರದಲ್ಲಿ ವಿಶೇಷ ಸಾಧನೆ ಮಾಡಿದ ರೈತರು ಹಾಗೂ ರೈತ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಿ ಪ್ರಶಸ್ತಿಗೆ ಸ್ಪರ್ಧಿಸಬೇಕು.

# ಸಂಸ್ಕಾರಯುತ ಶಿಕ್ಷಣವೇ ವಿದ್ಯಾರ್ಥಿಗಳ ನಿಜವಾದ ಆಭರಣ

ಚಿಕ್ಕಬಳ್ಳಾಪುರ

ಸಂಸ್ಕಾರಯುತ ಶಿಕ್ಷಣವು ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ರೂಪಿಸುವ ನಿಜವಾದ ಆಭರಣವಾಗಿದ್ದು, ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳಿಗೆ ಬಾಲ್ಯದಿಂದಲೇ ಗುರು-ಹಿರಿಯರ ಮೇಲಿನ ಗೌರವ ಮತ್ತು ಉತ್ತಮ ಮೌಲ್ಯಗಳನ್ನು ಬೆಳೆಸುವಂತೆ ಮಾರ್ಗದರ್ಶನ ನೀಡಬೇಕು ಎಂದು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ವಿ.ಗೋಪಾಲಗೌಡ ಹೇಳಿದರು.

ನಗರದ ಹರ್ಷೋದಯ ಕಲ್ಯಾಣ ಮಂಟಪದಲ್ಲಿ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ "ಸ್ಪಂದನ ವಿದ್ಯಾರ್ಥಿ ವೇತನ" ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಅವಧಿಯಲ್ಲಿ ಸಮಯ ವ್ಯರ್ಥ ಮಾಡದೆ ದೊರೆತ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಉನ್ನತ ಶಿಕ್ಷಣದತ್ತ ಹೆಜ್ಜೆ ಇಡಬೇಕು. ಸಮಾಜ ನಮಗೆ ಏನು ಕೊಟ್ಟಿದೆ ಎಂಬುದಕ್ಕಿಂತ ಸಮಾಜಕ್ಕೆ ನಮ್ಮ ಕೊಡುಗೆ ಏನು ಎಂಬುದನ್ನು ಅರಿತು ಸಾಧಕರಾಗಿ ಹೊರಹೊಮ್ಮಬೇಕು ಎಂದು ಅವರು ಕರೆ ನೀಡಿದರು. ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಸಂದೀಪ್ ಬಿ. ರೆಡ್ಡಿ ಅವರಂತಹ ಸಮಾಜಮುಖಿ ವ್ಯಕ್ತಿಗಳ ಸಹಕಾರದಿಂದ ವಿದ್ಯಾರ್ಥಿಗಳ ಶಿಕ್ಷಣಕ್ಕೆ ಮತ್ತಷ್ಟು ಬಲ ದೊರೆಯಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಸಂದೀಪ್ ಬಿ. ರೆಡ್ಡಿ, ಪ್ರತಿಯೊಬ್ಬ ವಿದ್ಯಾರ್ಥಿಯೂ ಭಾರತದ ಭವಿಷ್ಯದ ನಾಯಕನಾಗುವ ಗುರಿಯೊಂದಿಗೆ ಶಿಕ್ಷಣ ಪಡೆಯಬೇಕು. ಯಾವುದೇ ವಿದ್ಯಾರ್ಥಿ ಶಿಕ್ಷಣದಿಂದ ವಂಚಿತನಾಗಬಾರದು ಎಂಬ ಉದ್ದೇಶದಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಅಗತ್ಯ ಆರ್ಥಿಕ ನೆರವು ನೀಡಲು ಟ್ರಸ್ಟ್ ಬದ್ಧವಾಗಿದೆ ಎಂದು ತಿಳಿಸಿದರು.

"ನನ್ನ ದೇಶ, ನನ್ನ ಹೆಮ್ಮೆ" ಎಂಬ ಭಾವನೆಯೊಂದಿಗೆ ಮಕ್ಕಳು ದೊಡ್ಡ ಕನಸುಗಳನ್ನು ಕಾಣಬೇಕು. ಶಿಕ್ಷಣದ ಮೂಲಕ ತಮ್ಮ ಬದುಕನ್ನು ರೂಪಿಸಿಕೊಳ್ಳುವುದರ ಜೊತೆಗೆ ಪೋಷಕರಿಗೆ ಆಸರೆಯಾಗಬೇಕು. ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ಜವಾಬ್ದಾರಿಯುತ ನಾಗರಿಕರಾಗಿ ಬೆಳೆಬೇಕು ಎಂದು ಅವರು ಸಲಹೆ ನೀಡಿದರು.

ಸಾಮಾಜಿಕ ಬದ್ಧತೆಯ ಭಾಗವಾಗಿ ಜಿಲ್ಲೆಯ ಶಾಶ್ವತ ಕುಡಿಯುವ ನೀರಿನ ಸಮಸ್ಯೆ ಪರಿಹಾರಕ್ಕಾಗಿ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಒಂದು ಲಕ್ಷ ಸಹಿ ಸಂಗ್ರಹ ಅಭಿಯಾನ ಆರಂಭಿಸಲಾಗಿದೆ. ಸಂಗ್ರಹಿಸಲಾದ ಸಹಿಗಳನ್ನು ರಾಷ್ಟ್ರಪತಿಗಳಿಗೆ ಸಲ್ಲಿಸಿ ಜನಪರ ಹೋರಾಟ ಮುಂದುವರಿಸಲಾಗುವುದು ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಶೇಕಡಾ 60 ಕ್ಕಿಂತ ಹೆಚ್ಚು ಅಂಕ ಗಳಿಸಿದ ಸುಮಾರು 1,000ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ತಲಾ 5,000 ವಿದ್ಯಾರ್ಥಿವೇತನದ ಚೆಕ್, ಸ್ಮರಣಿಕೆ ಹಾಗೂ ಅಭಿನಂದನಾ ಪತ್ರಗಳನ್ನು ವಿತರಿಸಲಾಯಿತು. ಅಲ್ಲದೆ ನಿವೃತ್ತ ಸೈನಿಕರನ್ನು ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಶ್ವತ ನೀರಾವರಿ ಹೋರಾಟ ಸಮಿತಿಯ ಜಿಲ್ಲಾಧ್ಯಕ್ಷ ಆರ್. ಆಂಜನೇಯರೆಡ್ಡಿ, ಮಹಿಳಾ ಹೋರಾಟಗಾರ್ತಿ ಸುಷ್ಮಾ ಶ್ರೀನಿವಾಸ್, ದಲಿತ ಸಂಘರ್ಷ ಸಮಿತಿಯ ಪದಾಧಿಕಾರಿಗಳು ಹಾಗೂ ಭಗತ್ ಸಿಂಗ್ ಚಾರಿಟೇಬಲ್ ಟ್ರಸ್ಟ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಗುರು-ಹಿರಿಯರು ಹಾಗೂ ಪೋಷಕರಿಗೆ ಗೌರವ ನೀಡಿದಾಗ

# ಸಾಧನೆಗೆ ಭದ್ರ ಅಡಿಪಾಯ

ತಿಪಟೂರು



ಗುರು-ಹಿರಿಯರು ಮತ್ತು ಪೋಷಕರಿಗೆ ಗೌರವ ನೀಡುವ ಮಕ್ಕಳು ಜೀವನದಲ್ಲಿ ಉನ್ನತ ಸಾಧನೆ ಮಾಡುತ್ತಾರೆ. ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಪೋಷಕರು ಅನೇಕ ತ್ಯಾಗಗಳನ್ನು ಮಾಡಿ ಉತ್ತಮ ಶಿಕ್ಷಣವನ್ನು ಕಲ್ಪಿಸುತ್ತಾರೆ. ಮಕ್ಕಳು ಶೈಕ್ಷಣಿಕವಾಗಿ ಸಾಧನೆ ಮಾಡಿದಾಗ ಪೋಷಕರಿಗೆ ಅದಕ್ಕಿಂತ ದೊಡ್ಡ ಸಂತೋಷ ಮತ್ತೊಂದಿಲ್ಲ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಉಪಾಧ್ಯಕ್ಷ ಹಾಗೂ ಕೌಶಲ್ಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಮುರಳೀಧರ ಹಾಲಪ್ಪ ಹೇಳಿದರು.

ನಗರದ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿರುವ ಒಕ್ಕಲಿಗರ ಸಮುದಾಯ ಭವನದಲ್ಲಿ ತಾಲೂಕು ಒಕ್ಕಲಿಗರ ಸಂಘ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ನಾಡಪ್ರಭು ಕೆಂಪೇಗೌಡರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಉನ್ನತ ಶಿಕ್ಷಣವನ್ನು ಪೂರ್ಣಗೊಳಿಸಿ ಉತ್ತಮ ಉದ್ಯೋಗ ಗಳಿಸಿದಾಗ ಪೋಷಕರ ಪರಿಶ್ರಮಕ್ಕೆ ನಿಜವಾದ ಪ್ರತಿಫಲ ದೊರೆಯುತ್ತದೆ. ಮಧ್ಯದಲ್ಲೇ ವಿದ್ಯಾಭ್ಯಾಸವನ್ನು ಕೈಬಿಡದೆ, ಸ್ಪಷ್ಟ ಗುರಿ, ಪರಿಶ್ರಮ ಹಾಗೂ ಶ್ರದ್ಧೆಯಿಂದ ಅಧ್ಯಯನ ನಡೆಸಿದರೆ ದೀರ್ಘಕಾಲೀನ ಯಶಸ್ಸು ಸಾಧಿಸಬಹುದು ಎಂದು ಸಲಹೆ ನೀಡಿದರು.

ರಾಜ್ಯದಿಂದ ಐಎಎಸ್ ಹಾಗೂ ಐಪಿಎಸ್ ಅಧಿಕಾರಿಗಳ ಸಂಖ್ಯೆ ಇತ್ತೀಚಿನ ವರ್ಷಗಳಲ್ಲಿ ಕಡಿಮೆಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಆದಿಚುಂಚನಗಿರಿ ಮಹಾಸಂಸ್ಥಾನ ಮಠವು ಬೆಂಗಳೂರು ಹಾಗೂ ದೆಹಲಿಯಲ್ಲಿ ಐಎಎಸ್ ಮತ್ತು ಐಪಿಎಸ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಕೇಂದ್ರಗಳನ್ನು ಆರಂಭಿಸಿದೆ ಎಂದು ತಿಳಿಸಿದರು.

ಆದಿಚುಂಚನಗಿರಿ ಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿ ಶ್ರೀ ಪ್ರಸನ್ನನಾಥ ಸ್ವಾಮೀಜಿ ಮಾತನಾಡಿ, ಇತಿಹಾಸದ ಹಲವು ಮಹತ್ವದ ಸಂಗತಿಗಳು ಸರಿಯಾಗಿ ದಾಖಲಾಗಿಲ್ಲ. ಅವುಗಳನ್ನು ಸಂಗ್ರಹಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯಕ್ಕೆ ಸರ್ಕಾರ ಹಾಗೂ ಸಮಾಜದ ಸಂಘಟನೆಗಳು ಮುಂದಾಗಬೇಕು ಎಂದರು.

ತಿಪಟೂರು ತಾಲೂಕಿನಲ್ಲಿ ಆದಿಚುಂಚನಗಿರಿ ಸಂಸ್ಥಾನ ಮಠ ಹಾಗೂ ಒಕ್ಕಲಿಗರ ಸಂಘದ ಸಹಯೋಗದಲ್ಲಿ ಶಾಲೆ ಮತ್ತು ಕಾಲೇಜು ಆರಂಭಿಸುವ ಉದ್ದೇಶವಿದ್ದು, ಈ ಕಾರ್ಯಕ್ಕೆ ಸಂಘದ ಸಂಪೂರ್ಣ ಸಹಕಾರ ಅಗತ್ಯವಿದೆ ಎಂದು ಹೇಳಿದರು.

ತಾಲೂಕು ಒಕ್ಕಲಿಗರ ಸಂಘವು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ವಿದ್ಯಾನಿಧಿ ಯೋಜನೆಯಡಿ ಸುಮಾರು 94 ಲಕ್ಷ ರೂಪಾಯಿ ಸಂಗ್ರಹಿಸಿದ್ದು, ಒಕ್ಕಲಿಗರ ಮಹಾಸಂಸ್ಥಾನದಿಂದ 6 ಲಕ್ಷ ರೂಪಾಯಿ ನೀಡಲಾಗುತ್ತದೆ. ಒಟ್ಟು ಒಂದು ಕೋಟಿ ರೂಪಾಯಿಯನ್ನು ಠೇವಣಿಯಾಗಿ ಇಟ್ಟು ಅದರ ಬಡ್ಡಿ ಹಣದಿಂದ ಪ್ರತಿವರ್ಷ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸುವ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಹೃದಯ ತಜ್ಞ ಡಾ. ಜಿ.ಬಿ. ವಿವೇಚನ್ ಮಾತನಾಡಿ, ಈ ಬಾರಿ ಕೇವಲ ಒಕ್ಕಲಿಗ ಸಮುದಾಯದ ವಿದ್ಯಾರ್ಥಿಗಳಷ್ಟೇ ಅಲ್ಲದೆ, ತಾಲೂಕಿನಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ಉತ್ತೀರ್ಣರಾದ ಇತರೆ ಸಮುದಾಯಗಳ ಪ್ರತಿಭಾವಂತ ವಿದ್ಯಾರ್ಥಿಗಳನ್ನೂ ಗುರುತಿಸಿ ಸನ್ಮಾನಿಸಲಾಗುತ್ತಿದೆ. ನಾಡಪ್ರಭು ಕೆಂಪೇಗೌಡರ ಆದರ್ಶಗಳನ್ನು ಯುವ ಸಮುದಾಯ ಸೇರಿದಂತೆ ಪ್ರತಿಯೊಬ್ಬರೂ ಅಳವಡಿಸಿಕೊಂಡು ರಾಜ್ಯದ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ತಾರಾಮಣಿ, ಇತಿಹಾಸ ತಜ್ಞ ಡಾ. ತಲಕಾಡು ಚಿಕ್ಕರಂಗೇಗೌಡ, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಎನ್. ಚಿದಾನಂದ್, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕರಾದ ಎಚ್. ಹನುಮಂತರಾಯಪ್ಪ ಹಾಗೂ ಬಿ.ಎನ್. ಲೋಕೇಶ್, ಮೈಸೂರಿನ ನೇಗಿಲ ಯೋಗಿ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಡಿ. ರವಿಕುಮಾರ್, ಸಮಾಜದ ಮುಖಂಡರು, ಸಂಘದ ಪದಾಧಿಕಾರಿಗಳು, ಪ್ರತಿಭಾ ಪುರಸ್ಕಾರ ಸಮಿತಿ ಸದಸ್ಯರು ಹಾಗೂ

# ವೀರಾಪುರ ರೈಲ್ವೆ ಅಂಡರ್‌ಪಾಸ್ ಸಮಸ್ಯೆಗೆ ಶಾಶ್ವತ ಪರಿಹಾರಕ್ಕೆ ಸೂಚನೆ

ಶಿಡ್ಲಘಟ್ಟ



ರಾಷ್ಟ್ರೀಯ ಹೆದ್ದಾರಿ-234ರ ಚಿಂತಾಮಣಿ-ಶಿಡ್ಲಘಟ್ಟ ಮಾರ್ಗದಲ್ಲಿರುವ ವೀರಾಪುರ ರೈಲ್ವೆ ಅಂಡರ್‌ಪಾಸ್‌ನಲ್ಲಿ ಪದೇ ಪದೇ ಉಂಟಾಗುತ್ತಿರುವ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವಂತೆ ಶಾಸಕ ಬಿ.ಎನ್.ರವಿಕುಮಾರ್ ಅವರು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ರೈಲ್ವೆ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವೀರಾಪುರ ಸಮೀಪದ ರೈಲ್ವೆ ಅಂಡರ್‌ಪಾಸ್‌ನಲ್ಲಿ ಮಳೆನೀರು ಹರಿದು ಹೋಗಲು ಅಳವಡಿಸಿರುವ ಕಬ್ಬಿಣದ ಸರಳುಗಳ ವೆಲ್ಡಿಂಗ್ ಪದೇ ಪದೇ ಕಿತ್ತು ಬರುತ್ತಿದ್ದು, ಸರಳುಗಳು ಮೇಲ್ಮುಖವಾಗಿ ಎದ್ದುನಿಂತು ವಾಹನ ಸಂಚಾರಕ್ಕೆ ಅಡಚಣೆ ಉಂಟುಮಾಡುತ್ತಿವೆ. ಕಳೆದ ಐದಾರು ತಿಂಗಳಲ್ಲಿ ಈ ಸಮಸ್ಯೆಯಿಂದ ಹತ್ತಕ್ಕೂ ಹೆಚ್ಚು ಅಪಘಾತಗಳು ಸಂಭವಿಸಿರುವುದಾಗಿ ಸ್ಥಳೀಯರು ತಿಳಿಸಿದ್ದಾರೆ.

ಸಮಸ್ಯೆ ಉಂಟಾದಾಗಲೆಲ್ಲಾ ತಾತ್ಕಾಲಿಕವಾಗಿ ವೆಲ್ಡಿಂಗ್ ಮಾಡಲಾಗುತ್ತಿದ್ದರೂ, ಒಂದೇ ದಿನದಲ್ಲಿ ಮತ್ತೆ ವೆಲ್ಡಿಂಗ್ ಕಿತ್ತು ಬಂದು ಸಮಸ್ಯೆ ಮರುಕಳಿಸುತ್ತಿದೆ. ಈ ಕುರಿತು ವೀರಾಪುರ ಹಾಗೂ ತಲದುಮ್ಮನಹಳ್ಳಿ ಗ್ರಾಮಸ್ಥರು ಹಲವು ಬಾರಿ ಪೊಲೀಸ್ ಇಲಾಖೆ, ರೈಲ್ವೆ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ, ಶಾಸಕರ ಗಮನಕ್ಕೂ ತಂದಿದ್ದರು.

ಇದಕ್ಕೆ ಸ್ಪಂದಿಸಿದ ಶಾಸಕ ಬಿ.ಎನ್. ರವಿಕುಮಾರ್ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಸಮಸ್ಯೆ ಮರುಕಳಿಸದಂತೆ ಶಾಶ್ವತ ದುರಸ್ತಿ ಕೈಗೊಳ್ಳುವ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿದರು.

ಮಳೆನೀರು ಸರಾಗವಾಗಿ ಹರಿದು ಹೋಗುವ ವ್ಯವಸ್ಥೆ ಕಲ್ಪಿಸುವುದರ ಜೊತೆಗೆ, ಕಬ್ಬಿಣದ ಸರಳುಗಳು ಮತ್ತೆ ಕಿತ್ತು ಬರದಂತೆ ತಾಂತ್ರಿಕವಾಗಿ ಸಮರ್ಪಕ ಕಾಮಗಾರಿ ಕೈಗೊಳ್ಳಬೇಕು. ರೈಲ್ವೆ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಸಮನ್ವಯ ಸಾಧಿಸಿ ಶೀಘ್ರದಲ್ಲಿ ಶಾಶ್ವತ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ರವಿಕುಮಾರ್, ವೀರಾಪುರ ರೈಲ್ವೆ ಅಂಡರ್‌ಪಾಸ್ ಸಮಸ್ಯೆಯಿಂದ ಸಾರ್ವಜನಿಕರಿಗೆ ದೀರ್ಘಕಾಲದಿಂದ ತೀವ್ರ ತೊಂದರೆ ಉಂಟಾಗಿದ್ದು, ಹಲವು ಅಪಘಾತಗಳು ಸಂಭವಿಸಿರುವುದು ಗಂಭೀರ ವಿಷಯವಾಗಿದೆ. ಸಾರ್ವಜನಿಕರ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕೆ ಆದ್ಯತೆ ನೀಡಿ ತಕ್ಷಣವೇ ಕಾಮಗಾರಿ ಆರಂಭಿಸುವಂತೆ ಸೂಚಿಸಲಾಗಿದೆ.

ಈ ವೇಳೆ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕಿರುವ ಬಗ್ಗೆ ಶಾಸಕ ಪ್ರದೀಪ್ ಈಶ್ವರ್ ಮಾಡಿರುವ ಆರೋಪ ಕುರಿತು ಮಾಧ್ಯಮದವರು ಪ್ರಶ್ನಿಸಿದರೂ, ಶಾಸಕ ಬಿ.ಎನ್. ರವಿಕುಮಾರ್ ಯಾವುದೇ ಪ್ರತಿಕ್ರಿಯೆ ನೀಡಲಿಲ್ಲ.

ಸ್ಥಳ ಪರಿಶೀಲನೆ ವೇಳೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ರೈಲ್ವೆ ಇಲಾಖೆಯ ಅಧಿಕಾರಿಗಳು, ಇಂಜಿನಿಯರ್‌ಗಳು, ನಗರ ಪೊಲೀಸ್ ಠಾಣೆ ಪಿಎಸ್‌ಐ ವೇಣುಗೋಪಾಲ್, ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ವೀರಾಪುರ ಮುನಿನಂಜಪ್ಪ, ವಿ.ಆರ್. ಗಣೇಶ್, ತಲದುಮ್ಮನಹಳ್ಳಿ ಹಾಗೂ ವೀರಾಪುರ ಗ್ರಾಮದ ಮುಖಂಡರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

ಸ್ಥಳ ಪರಿಶೀಲನೆ ವೇಳೆ ರೈತ ಮುಖಂಡ ಮುನಿನಂಜಪ್ಪ ಅವರು, ಕಳೆದ ಐದಾರು ತಿಂಗಳಲ್ಲಿ ನಾಲ್ಕೈದು ಬಾರಿ ವೆಲ್ಡಿಂಗ್ ಮಾಡಲಾಗಿದ್ದರೂ ಅದೇ ದಿನ ಮತ್ತೆ ಕಿತ್ತು ಬರುತ್ತಿದೆ. ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಶಾಶ್ವತ ಪರಿಹಾರ ದೊರೆತಿಲ್ಲ. ರಸ್ತೆ ತಡೆ ಹಮ್ಮಿಕೊಳ್ಳುವ ಯೋಚನೆಯನ್ನೂ ಮಾಡಿದ್ದೆವು. ಆದರೆ ಅಧಿಕಾರಿಗಳ ಭರವಸೆಯಿಂದ ಹಿಂದೆ ಸರಿದಿದ್ದೇವೆ. ಈಗ ಶಾಸಕರು ಸ್ಥಳಕ್ಕೆ ಭೇಟಿ ನೀಡಿರುವ ಹಿನ್ನೆಲೆಯಲ್ಲಿ ತಾತ್ಕಾಲಿಕ ದುರಸ್ತಿಯ ಬದಲು ಶಾಶ್ವತ ಕಾಮಗಾರಿ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

# ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ

ಕೋಲಾರ

ಭಾರತ ಚುನಾವಣೆ ಆಯೋಗವು ಹೊಸದಾಗಿ ಹಮ್ಮಿಕೊಂಡಿರುವ ಮತದಾರರ ವಿಶೇಷ ಪರಿಷ್ಕರಣೆ ಹಾಗೂ ಗಣತಿ ಕಾರ್ಯದಲ್ಲಿ ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕ ಕೊತ್ತೂರು ಮಂಜುನಾಥ್ ಅವರು ತಮ್ಮ ಸ್ವಂತ ಗ್ರಾಮ ಮುಳಬಾಗಿಲಿನ ಕೊತ್ತೂರು ಗ್ರಾಮದಲ್ಲಿ ತಮ್ಮ ವಿವರಗಳನ್ನು ನೋಂದಾಯಿಸಿಕೊಂಡರು.

ಕ್ಷೇತ್ರದ ಬೂತ್ ಮಟ್ಟದ ಅಧಿಕಾರಿ ಅವರಿಗೆ ತಮ್ಮ ಅಗತ್ಯ ಮಾಹಿತಿ ಹಾಗೂ ವಿವರಗಳನ್ನು ಒದಗಿಸಿದ ಶಾಸಕರು, ನಿಗದಿತ ನಮೂನೆಯಲ್ಲಿ ಸಹಿ ಮಾಡುವ ಮೂಲಕ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಚುನಾವಣೆ ಆಯೋಗದ ಈ ಪ್ರಕ್ರಿಯೆಯು ಅತ್ಯಂತ ಮಹತ್ವದ್ದಾಗಿದೆ. ಮುಳಬಾಗಿಲು ಮತ್ತು ಕೋಲಾರ ಕ್ಷೇತ್ರದ ಪ್ರತಿಯೊಬ್ಬ ನಾಗರಿಕರು ಹಾಗೂ ಮತದಾರರು ಈ ವಿಶೇಷ ಪರಿಷ್ಕರಣಾ ಕಾರ್ಯದಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ತಮ್ಮ ಬೂತ್ ಮಟ್ಟದ ಅಧಿಕಾರಿಗಳಿಗೆ ಅಗತ್ಯವಿರುವ ನಿಖರ ಮಾಹಿತಿಗಳನ್ನು ನೀಡಿ ಸಹಕರಿಸಬೇಕು, ಎಂದು ಮನವಿ ಮಾಡಿದರು.

ಭಾರತ ಚುನಾವಣೆ ಆಯೋಗದ ಈ ಹೊಸ ಗಣತಿ ಕಾರ್ಯವನ್ನು ಶ್ಲಾಘಿಸಿದ ಅವರು, "ಈ ಪ್ರಕ್ರಿಯೆಯು ದೇಶದ ಒಟ್ಟಾರೆ ಹಿತದೃಷ್ಟಿಯಿಂದ ಹಾಗೂ ಭಾರತದ ಪೌರತ್ವವನ್ನು ರಕ್ಷಿಸಿಕೊಳ್ಳುವ ನಿಟ್ಟಿನಲ್ಲಿ ಅತ್ಯಂತ ಪ್ರಮುಖ ಹೆಜ್ಜೆಯಾಗಿದೆ. ದೇಶದೊಳಗೆ ಅಕ್ರಮವಾಗಿ ನುಸುಳಿರುವ ಇತರ ದೇಶಗಳ ನುಸುಳುಕೋರರನ್ನು ಗುರುತಿಸಿ ಹೊರಗಟ್ಟಲು ಮತ್ತು ಅರ್ಹ ನಾಗರಿಕರಿಗೆ ಸೂಕ್ತ ಪೌರತ್ವದ ಹಕ್ಕುಗಳನ್ನು ಕಾಪಾಡಲು ಈ ಕಾರ್ಯವು ಉತ್ತಮ ಮತ್ತು ಶ್ಲಾಘನೀಯವಾಗಿದೆ, ಎಂದು ಅಭಿಪ್ರಾಯಪಟ್ಟರು.

# ಅದ್ದೂರಿಯಾಗಿ ಕೆಂಪೇಗೌಡರ ಜಯಂತಿ ಆಚರಣೆ

ಶಿಡ್ಲಘಟ್ಟ

ನಾಡಪ್ರಭು ಶ್ರೀ ಕೆಂಪೇಗೌಡರು ಎಲ್ಲ ಜಾತಿ-ಧರ್ಮಗಳನ್ನು ಒಗ್ಗೂಡಿಸಿಕೊಂಡು ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಶತಮಾನಗಳ ಹಿಂದೆಯೇ ದೂರದೃಷ್ಟಿಯ ಯೋಜನೆಗಳನ್ನು ರೂಪಿಸಿದ ಮಹಾನ್ ನಾಯಕ ಎಂದು ಮುಖಂಡ ರಾಜೀವ್ ಗೌಡ ಹೇಳಿದರು.

ತಾಲೂಕಿನ ಎಚ್.ಕ್ರಾಸ್‌ನಲ್ಲಿ ಆಯೋಜಿಸಿದ್ದ ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಕೆಂಪೇಗೌಡರ ಮೂರ್ತಿಗೆ ಪೂಜೆ ಸಲ್ಲಿಸಿ ಪುಷ್ಪನಮನ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ಕೆಂಪೇಗೌಡರು ಪ್ರತಿಯೊಂದು ಸಮುದಾಯದ ಕುಲಕಸುಬುಗಳನ್ನು ಗುರುತಿಸಿ, ಅವರಿಗೆ ಪ್ರತ್ಯೇಕ ಪೇಟೆಗಳನ್ನು ನಿರ್ಮಿಸುವ ಮೂಲಕ ಜೀವನೋಪಾಯಕ್ಕೆ ಅವಕಾಶ ಕಲ್ಪಿಸಿ ಸಮಾಜದ ಅಭಿವೃದ್ಧಿಗೆ ಭದ್ರ ಅಡಿಪಾಯ ಹಾಕಿದ್ದರು. ಎಲ್ಲ ಜಾತಿ-ಧರ್ಮಗಳನ್ನು ಸಮಾನವಾಗಿ ಕಾಣುವ ಆಡಳಿತಗಾರರಾಗಿ ಅವರು ಇಂದಿಗೂ ಆದರ್ಶಪ್ರಾಯರಾಗಿದ್ದಾರೆ ಎಂದು ಹೇಳಿದರು.

ಜನಸಾಮಾನ್ಯರ ನಡುವೆ ಬೆರೆತು ಉತ್ತಮ ಆಡಳಿತ ನೀಡಿದ ಕೆಂಪೇಗೌಡರು ದೂರದೃಷ್ಟಿಯ ನಾಯಕತ್ವ, ಸಮನ್ವಯತೆ ಮತ್ತು ಅಭಿವೃದ್ಧಿಯ ಚಿಂತನೆಯ ಮೂಲಕ ಇತಿಹಾಸದಲ್ಲಿ ವಿಶಿಷ್ಟ ಸ್ಥಾನ ಪಡೆದಿದ್ದಾರೆ. ಅವರ ಜೀವನ ಚರಿತ್ರೆ, ಜಾಗತಿಕ ನಗರ ಬೆಂಗಳೂರನ್ನು ನಿರ್ಮಿಸಿದ ಸಾಧನೆ ಹಾಗೂ ಆಡಳಿತ ವೈಖರಿಯನ್ನು ಇಂದಿನ ಪೀಳಿಗೆ ಅರಿತುಕೊಳ್ಳಬೇಕು. ಮುಂದಿನ ತಲೆಮಾರುಗಳಿಗೂ ಅವರ ಆದರ್ಶಗಳನ್ನು ಪರಿಚಯಿಸುವ ಕೆಲಸ ಸಮಾಜದಿಂದ ಆಗಬೇಕು ಎಂದು ತಿಳಿಸಿದರು.

ಕೆಂಪೇಗೌಡರು ಬೆಂಗಳೂರನ್ನು ನಿರ್ಮಿಸಿ ಬೆಳೆಸಿದ ರೀತಿಯಲ್ಲೇ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉತ್ತಮ ಆಡಳಿತ ಮತ್ತು ಅಭಿವೃದ್ಧಿಯ ಮೂಲಕ ಕರ್ನಾಟಕವನ್ನು ಇನ್ನಷ್ಟು ಪ್ರಗತಿಯತ್ತ ಕೊಂಡೊಯ್ಯಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕೆಂಪೇಗೌಡರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪನಮನ ಅರ್ಪಿಸಲಾಯಿತು. ಬಳಿಕ ಪ್ರಮುಖ ಬೀದಿಗಳಲ್ಲಿ ವಿವಿಧ ಕಲಾತಂಡಗಳೊಂದಿಗೆ ಅದ್ದೂರಿ ಮೆರವಣಿಗೆ ನಡೆಯಿತು. ಕಲಾತಂಡಗಳ ಪ್ರದರ್ಶನ ಮೆರವಣಿಗೆಗೆ ವಿಶೇಷ ಮೆರುಗು ನೀಡಿತು.

ಈ ಸಂದರ್ಭದಲ್ಲಿ ಎಚ್.ಕ್ರಾಸ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕಾಳನಾಯಕನಹಳ್ಳಿ ಭೀಮೇಶ್, ಬಸವಾಪಟ್ಟಣ ಬೈರೇಗೌಡ ಸೇರಿದಂತೆ ಸ್ಥಳೀಯ ಮುಖಂಡರು, ಸಾರ್ವಜನಿಕರು ಹಾಗೂ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮಕ್ಕಳೊಂದಿಗೆ ತಾಯಿ ಕಾಣೆ

ತುಮಕೂರು

ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿ ಸಿದ್ದರಾಮೇಶ್ವರ ಕ್ರಷರ್‌ನಲ್ಲಿ ವಾಸವಾಗಿದ್ದ ಸುಮಾರು 30 ವರ್ಷದ ನೀಲಮ್ಮ ಎಂಬ ಮಹಿಳೆಯು 9 ವರ್ಷದ ಶರಣಮ್ಮ, 6 ವರ್ಷದ ಬಸವರಾಜ ಪೂಜಾರಿ ಹಾಗೂ 5 ವರ್ಷದ ಸೌಜನ್ಯ ಎಂಬ ತನ್ನ 3 ಮಕ್ಕಳೊಂದಿಗೆ ಜೂನ್ 23ರಂದು ಕಾಣೆಯಾಗಿದ್ದಾಳೆ ಎಂದು ಠಾಣೆಯಲ್ಲಿ ದೂರು ದಾಖಲಾಗಿದೆ.

ಕಾಣೆಯಾದ ನೀಲಮ್ಮ 5.4 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾಳೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಸೀರೆ ಹಾಗೂ ಕೆಂಪು ಬಣ್ಣದ ರವಿಕೆ ಧರಿಸಿದ್ದಳು.

ಶರಣಮ್ಮ ಎಂಬ ಹೆಣ್ಣು ಮಗುವು ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಫ್ರಾಕ್ ಧರಿಸಿದ್ದಳು.

ಬಸವರಾಜ ಪೂಜಾರಿ ಎಂಬ ಗಂಡು ಮಗುವು ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕಾಣೆಯಾದ ಸಂದರ್ಭದಲ್ಲಿ ಕೆಂಪು ಬಣ್ಣದ ಅಂಗಿ ಹಾಗೂ ಕಪ್ಪು ಬಣ್ಣದ ನಿಕ್ಕರ್ ಧರಿಸಿದ್ದನು.

ಕಾಣೆಯಾದವರ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ. 0816-2278381/ 2275301/ 2272340/ 2278000, ಮೊ.ಸಂ. 9480802948-31ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

# ಮಧುಗಿರಿ ಜಿಲ್ಲಾ ಬಿಜೆಪಿ ಮೋರ್ಚಾ ಪದಾಧಿಕಾರಿಗಳ ಪಟ್ಟಿ ತಡೆ

ತುಮಕೂರು

ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳ ಪಟ್ಟಿಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ ಅವರು ತಾತ್ಕಾಲಿಕವಾಗಿ ತಡೆಹಿಡಿದಿದ್ದಾರೆ.

ಕೊರಟಗೆರೆ ಬಿಜೆಪಿ ಮುಖಂಡ ಹಾಗೂ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಬಿಜೆಪಿ ಕೋರ್ ಕಮಿಟಿ ಸದಸ್ಯ ಬಿ.ಹೆಚ್. ಅನಿಲ್ ಕುಮಾರ್ ನೇತೃತ್ವದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಬಿಜೆಪಿ ಪದಾಧಿಕಾರಿಗಳು ಹಾಗೂ ವಿವಿಧ ಮೋರ್ಚಾ ಪದಾಧಿಕಾರಿಗಳು ಬುಧವಾರ ರಾಜ್ಯಾಧ್ಯಕ್ಷ ವಿಜಯೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್ ಗೌಡ ಅವರನ್ನು ಭೇಟಿ ಮಾಡಿ, ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಪದಾಧಿಕಾರಿಗಳ ಪಟ್ಟಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷರು ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಯವರು, ಮಧುಗಿರಿ ಜಿಲ್ಲಾ ನೂತನ ಪದಾಧಿಕಾರಿಗಳ ಪಟ್ಟಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಸೂಚಿಸಿದರು. ಜಿಲ್ಲಾ ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಚರ್ಚಿಸಿ, ಪಕ್ಷದ ಕಾರ್ಯಕರ್ತರು ಮತ್ತು ಸಂಘಟನೆಯ ನಡುವೆ ಯಾವುದೇ ರೀತಿಯ ಗೊಂದಲ ಉಂಟಾಗದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು. ಯಾವುದೇ ಭಿನ್ನಾಭಿಪ್ರಾಯಗಳಿದ್ದಲ್ಲಿ ಜುಲೈ 10ರಂದು ಸಭೆ ನಡೆಸಿ, ಎಲ್ಲರ ಅಭಿಪ್ರಾಯ ಪಡೆದು ಮುಂದಿನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳನ್ನು ಆಯ್ಕೆ ಮಾಡುವಂತೆ ನಿರ್ದೇಶನ ನೀಡಿದರು ಎಂದು ಮಧುಗಿರಿ ಜಿಲ್ಲಾ ಕೋರ್ ಕಮಿಟಿ ಸದಸ್ಯ ಬಿ.ಹೆಚ್. ಅನಿಲ್‌ಕುಮಾರ್ ತಿಳಿಸಿದ್ದಾರೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy